VOLUME: 16 | 02 MAY 2026 | ಶನಿವಾರ | RS: 2 | PAGE: 06 ISSUE: 86 ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

ಕನ್ನಡ ಸಿನಿಮಾ ರಂಗದ 22 ವರ್ಷದ ಯುವ ಚಲನಚಿತ್ರ ನಿರ್ದೇಶಕಿ ಕರೆನ್ ಕ್ಷಿತಿ ಸುವರ್ಣ ಅವರಿಗೆ 79ನೇ ಕೇನ್ಸ್ ಚಲನಚಿತ್ರೋತ್ಸವದಲ್ಲಿ ನಡೆಯುವ ವರ್ಲ್ಡ್ ವುಮನ್ ಕೇನ್ಸ್ ಅಜೆಂಡಾ 2026 ಕಾರ್ಯಕ್ರಮದಲ್ಲಿ ಪ್ರಮುಖ ಭಾಷಣಕಾರರಾಗಿ ಆಹ್ವಾನ ಬಂದಿದೆ. ಕನ್ನಡದ ನಿರ್ದೇಶಕಿಯೊಬ್ಬರಿಗೆ ಸಿಕ್ಕಿರುವ ಮೊದಲ ಅವಕಾಶ ಇದಾಗಿದೆ.



BHARATHA SARATHI
KANNADA DAILY NEWS PAPER

CALL 9740160669

# ಭಾರತ ಸಾರಥಿ

prabhavaa.com

RNI KARKAN2011/44806

ಸದಾ ನಿಮ್ಮೊಂದಿಗೆ ಕನ್ನಡ ದಿನಪತ್ರಿಕೆ



ಸಂಪಾದಕ
ಗಂಡಸಿ ಸದಾನಂದಸ್ವಾಮಿ



ಫೆಬ್ರವರಿ 28ರಂದು ಸಂಘರ್ಷ ಭುಗಿಲೆದ್ದ ನಂತರ ಈಗ ಮೂರನೇ ಬಾರಿಗೆ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆಯನ್ನು ಹೆಚ್ಚಳವಾಗಿದೆ. ಮಾರ್ಚ್ 1ರಂದು 144 ರೂ.ಗಳಷ್ಟು ಏರಿಕೆ ಮಾಡಲಾಗಿದ್ದು, ಬಳಿಕ ಮತ್ತೆ ಏಪ್ರಿಲ್ 1 ರಂದು 19 ಕೆಜಿ ಸಿಲಿಂಡರ್ ದರವು ಸುಮಾರು 200 ರೂ. ಹೆಚ್ಚಳವಾಗಿತ್ತು. ರಾಷ್ಟ್ರ ರಾಜಧಾನಿ ನವದೆ ಹಲಿಯಲ್ಲಿ, ಇಂದಿನಿಂದ 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆ 993 ರೂ.ಗಳಷ್ಟು ಏರಿಕೆಯಾಗಿದೆ. ಇಂದಿನಿಂದ, ಈ ಸಿಲಿಂಡರ್ ಬೆಲೆ 3,071 ರೂ. ಆಗಿದ್ದು, ಈ ಹಿಂದಿನ ಬೆಲೆ 2,078ರಷ್ಟಿತ್ತು. ಮುಂಬೈ ಮಹಾನಗರದಲ್ಲಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆಯೂ ಏರಿಕೆಯಾಗಿದೆ. ಇಲ್ಲಿ, ಸಿಲಿಂಡರ್ ಬೆಲೆ 3,024 ರೂ.ಗೆ ಏರಿಕೆಯಾಗಿದೆ. ಹಿಂದೆ, 2,031 ರೂ. ಆಗಿತ್ತು. ಕೋಲ್ಕತ್ತಾದಲ್ಲಿ 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆಯನ್ನು 994 ರೂ.ಗಳಷ್ಟು ಹೆಚ್ಚಿಸಲಾಗಿದೆ.

# ವಾಣಿಜ್ಯ ಸಿಲಿಂಡರ್ ಬೆಲೆ ಭಾರೀ ಏರಿಕೆ

ನವದೆಹಲಿ: ಅಮೆರಿಕ, ಇಸ್ರೇಲ್ ಮತ್ತು ಇರಾನ್ ನಡುವಿನ ಯುದ್ಧದ ಹಿನ್ನೆಲೆಯಲ್ಲಿ ಜಾಗತಿಕ ಇಂಧನ ಪೂರೈಕೆ ಬಿಕ್ಕಟ್ಟಿನ ನಡುವೆ, ದೇಶಾದ್ಯಂತ 19 ಕೆಜಿ ವಾಣಿಜ್ಯ ಸಿಲಿಂಡರ್‌ಗಳ ಬೆಲೆಯನ್ನು ಮೇ.1 (ಶುಕ್ರವಾರ) ರಿಂದ ಜಾರಿಗೆ ಬರುವಂತೆ 993 ರೂ. ಹೆಚ್ಚಿಸಲಾಗಿದೆ. ಆದರೆ, ಪೆಟ್ರೋಲ್, ಡೀಸೆಲ್ ಮತ್ತು ಗೃಹಬಳಕೆ ಎಲ್‌ಪಿಜಿ ದರಗಳಲ್ಲಿ ಯಾವುದೇ ಏರಿಕೆ ಕಂಡುಬಂದಿಲ್ಲ.



ಮೂಲಗಳನ್ನು ಉಲ್ಲೇಖಿಸಿ, ಎಎನ್‌ಐ ವರದಿ ಮಾಡಿದ್ದು, ಇಂದಿನಿಂದ 19 ಕೆಜಿ ವಾಣಿಜ್ಯ ಸಿಲಿಂಡರ್‌ನ ಬೆಲೆಯನ್ನು 993 ರೂ. ಹೆಚ್ಚಿಸಲಾಗಿದೆ. ಗೃಹಬಳಕೆ ಗ್ಯಾಸ್ ಸಿಲಿಂಡರ್ ಬೆಲೆಯಲ್ಲಿ ಯಾವುದೇ ಬದಲಾವಣೆ ಇಲ್ಲ ಎಂದು ತಿಳಿಸಿದೆ.

ಫೆಬ್ರವರಿ 28ರಂದು ಸಂಘರ್ಷ ಭುಗಿಲೆದ್ದ ನಂತರ ಈಗ ಮೂರನೇ ಬಾರಿಗೆ 19 ಕೆಜಿ ವಾಣಿಜ್ಯ ಎಲ್‌ಪಿಜಿ ಸಿಲಿಂಡರ್‌ನ ಬೆಲೆಯನ್ನು ಹೆಚ್ಚಳವಾಗಿದೆ. ಮಾರ್ಚ್ 1ರಂದು 144 ರೂ. ಗಳಷ್ಟು ಏರಿಕೆ ಮಾಡಲಾಗಿದ್ದು, ಬಳಿಕ ಮತ್ತೆ ಏಪ್ರಿಲ್ 1 ರಂದು 19 ಕೆಜಿ ಸಿಲಿಂಡರ್ ದರವು ಸುಮಾರು 200 ರೂ. ಹೆಚ್ಚಳವಾಗಿತ್ತು.

ರಾಷ್ಟ್ರ ರಾಜಧಾನಿ ನವದೆ ಹಲಿಯಲ್ಲಿ, ಇಂದಿನಿಂದ 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆ 993 ರೂ.ಗಳಷ್ಟು ಏರಿಕೆಯಾಗಿದೆ. ಇಂದಿನಿಂದ, ಈ ಸಿಲಿಂಡರ್ ಬೆಲೆ 3,071 ರೂ. ಆಗಿದ್ದು, ಈ ಹಿಂದಿನ ಬೆಲೆ 2,078ರಷ್ಟಿತ್ತು. ಮುಂಬೈ ಮಹಾನಗರದಲ್ಲಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆಯೂ ಏರಿಕೆಯಾಗಿದೆ. ಇಲ್ಲಿ, ಸಿಲಿಂಡರ್ ಬೆಲೆ 3,024 ರೂ.ಗೆ ಏರಿಕೆಯಾಗಿದೆ. ಹಿಂದೆ, 2,031 ರೂ. ಆಗಿತ್ತು.

ಕೋಲ್ಕತ್ತಾದಲ್ಲಿ 19 ಕೆಜಿ ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆಯನ್ನು 994 ರೂ.ಗಳಷ್ಟು ಹೆಚ್ಚಿಸಲಾಗಿದೆ. ಬೆಲೆ ಏರಿಕೆ ತಕ್ಷಣದಿಂದ ಜಾರಿಗೆ ಬಂದಿದ್ದು, ಸಿಲಿಂಡರ್ 3,202 ರೂ.ಗೆ ದೊರೆಯುತ್ತಿದೆ. ಹಿಂದೆ, ಇದರ ಬೆಲೆ 2,208 ರೂ. ಇತ್ತು. ಚೆನ್ನೈಗೆ ಸಂಬಂಧಿಸಿದಂತೆ, ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳ ಬೆಲೆ 3,237 ರೂ.ಗೆ ಏರಿಕೆಯಾಗಿದೆ.

ಚೆನ್ನೈನಲ್ಲಿ ಹಿಂದೆ, ವಾಣಿಜ್ಯ ಗ್ಯಾಸ್ ಸಿಲಿಂಡರ್‌ಗಳು ರೂ. 2,246.50ಕ್ಕೆ ಮಾರಾಟ ಮಾಡಲಾಗುತ್ತಿತ್ತು.

ಇಂದಿನಿಂದ ಹೊಸ ನಿಯಮಗಳು ಜಾರಿಗೆ: ಮೇ 1ರಿಂದ ಜಾರಿಗೆ ಬರುವಂತೆ, ಕೇಂದ್ರ ಸರ್ಕಾರ ಎಲ್‌ಪಿಜಿ ಗ್ಯಾಸ್ ಸಿಲಿಂಡರ್‌ಗಳ ವಿತರಣೆಗೆ ಹೊಸ ನಿಯಮಗಳನ್ನು ಜಾರಿಗೆ ತಂದಿದೆ.

## ಕದನ ವಿರಾಮದಲ್ಲೂ ಇಸ್ರೇಲ್ ದಾಳಿ

ಟೈರ್: ಇಸ್ರೇಲ್ ಶುಕ್ರವಾರ ದಕ್ಷಿಣ ಲೆಬನಾನ್ ಮೇಲೆ ಹಲವು ಬಾರಿ ವೈಮಾನಿಕ ದಾಳಿಗಳನ್ನು ನಡೆಸಿದ್ದು, ನಾಲ್ವರನ್ನು ಹತ್ಯೆ ಮಾಡಿದೆ. ಆದರೆ ಹಿಜ್ಬೊಲ್ಲಾ ಬಂಡುಕೋರರು ನಡೆಸಿದ ಡ್ರೋನ್ ಹಾಗೂ ರಾಕೆಟ್ ದಾಳಿಯಲ್ಲಿ ಉತ್ತರ ಇಸ್ರೇಲ್‌ನಲ್ಲಿಇಬ್ಬರು ಸೈನಿಕರು ಗಾಯಗೊಂಡಿರುವುದಾಗಿ ವರದಿಯಾಗಿದೆ.

ಏಪ್ರಿಲ್ 17 ರಿಂದ ಜಾರಿಯಲ್ಲಿರುವ ಕದನ ವಿರಾಮದ ಹೊರತಾಗಿಯೂ ಇಸ್ರೇಲ್ ಮಿಲಿಟರಿ ಮತ್ತು ಹಿಜ್ಬೊಲ್ಲಾ ತಮ್ಮ ದಾಳಿಯನ್ನು ಮುಂದುವರೆಸಿವೆ. ದಕ್ಷಿಣ ಲೆಬನಾನ್ ನ ಮೂರು ಹಳ್ಳಿಗಳ ಮೇಲಿನ ದಾಳಿಯಲ್ಲಿ ನಾಲ್ವರು ಸಾವನ್ನಪ್ಪಿದ್ದಾರೆ ಎಂದು ಇಸ್ರೇಲ್ ನ ರಾಷ್ಟ್ರೀಯ ಸುದ್ದಿ ಸಂಸ್ಥೆ ವರದಿ ಮಾಡಿದೆ. ಹಿಜ್ಬೊಲ್ಲಾ ಉಗ್ರರು ತಮ್ಮ ಸಮೀಪದಲ್ಲಿರುವ ನಾಗರಿಕರಿಗೆ ತೊಂದರೆ ನೀಡುವ ಸಾಧ್ಯತೆಯಿದ್ದು, ಬೇರೆಡೆಗೆ ಸ್ಥಳಾಂತರವಾಗುವಂತೆ ನಬಾತಿಹ್ ನಗರದ ಬಳಿಯ ಹಬೌಶ್ ಗ್ರಾಮದ ನಿವಾಸಿಗಳಿಗೆ ಇಸ್ರೇಲ್ ಮಿಲಿಟರಿ ಇಂದು ಮಧ್ಯಾಹ್ನ ಸೂಚನೆ ನೀಡಿತ್ತು.

ನಬಾತಿಹ್ ನಬತಿಯೆಹ್ ಬಳಿಯ ಕ್ಫರ್ ರುಮ್ಮನ್ ಗ್ರಾಮದಲ್ಲಿ ಅವಶೇಷಗಳಡಿಯಿಂದ ಒಬ್ಬ ವ್ಯಕ್ತಿ ಮತ್ತು ಅವನ ಮೂವರು ಪುತ್ರರು ಸೇರಿದಂತೆ ಐದು ಜನರ ಶವಗಳನ್ನು ಹೊರತೆಗೆದ ನಂತರ ಈ ದಾಳಿ ನಡೆದಿದೆ.

ಗುರುವಾರ ತಡರಾತ್ರಿ ಕ್ಫರ್ ರುಮ್ಮನ್ ಮೇಲೆ ನಡೆದ ವೈಮಾನಿಕ ದಾಳಿಯಲ್ಲಿ ಐವರು ಸಾವನ್ನಪ್ಪಿದ್ದಾರೆ ಎಂದು ರಾಷ್ಟ್ರೀಯ ಸುದ್ದಿ ಸಂಸ್ಥೆ ವರದಿ ಮಾಡಿದೆ. ಈ ದಾಳಿಯಲ್ಲಿ ಒಬ್ಬ ಲೆಬನಾನಿನ ಸೈನಿಕನೂ ಸಾವನ್ನಪ್ಪಿರುವುದಾಗಿ ಹೇಳಿದೆ.

ದಾಳಿಯಲ್ಲಿ ಅಲಿ ಜಾಬರ್ ಎಂಬ ಸೈನಿಕ ಸಾವನ್ನಪ್ಪಿದ್ದಾನೆ ಎಂದು ಲೆಬನಾನಿನ ಸೇನೆ ದೃಢಪಡಿಸಿದೆ.

ಶುಕ್ರವಾರ ಮಧ್ಯಾಹ್ನದ ವೇಳೆಗೆ, ಇಸ್ರೇಲಿ ಮಿಲಿಟರಿ ನೆಲೆಗಳ ಮೇಲೆ ಡ್ರೋನ್‌ಗಳು ಮತ್ತು ರಾಕೆಟ್‌ಗಳನ್ನು ಹಾರಿಸಿರುವುದಾಗಿ ಹಿಜ್ಬೊಲ್ಲಾ ಬಂಡುಕೋರರು ಹೇಳಿಕೆಯಲ್ಲಿ ತಿಳಿಸಿದ್ದಾರೆ.

## ಬದಲಾವಣೆಯೇ ಗೊಂದಲ...?

ಬೆಂಗಳೂರು: ರಾಜ್ಯದಲ್ಲಿ ಮುಖ್ಯಮಂತ್ರಿ ಬದಲಾವಣೆಗೆ ಇನ್ನೂ ಸಮಯವಿದೆ. ಆ ಸಮಯ ಬಂದಾಗ ನೋಡೋಣ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಹೇಳುವ ಮೂಲಕ ರಾಜ್ಯದಲ್ಲಿ ನಾಯಕತ್ವ ಬದಲಾವಣೆ ವಿಚಾರ, ಮುಂದಿನ ಸಿಎಂ ತಾವಾಗಬೇಕು ಎಂಬೆಲ್ಲಾ ಚರ್ಚೆಗಳನ್ನು ಸಾರಾಸಗಟಾಗಿ ತಳ್ಳಿ ಹಾಕಿದ್ದಾರೆ.

ಕಲಬುರುಗಿಯಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಮುಖ್ಯಮಂತ್ರಿಯಾಗಿ ಸದ್ಯ ಸಿದ್ದರಾಮಯ್ಯ ಇದ್ದಾರೆ. ಹೀಗಿರುವಾಗ ನಾನು ಮುಖ್ಯಮಂತ್ರಿಯಾಗುವ ವಿಚಾರ ಇಲ್ಲಿ ಬರುವುದಿಲ್ಲ. ಸಿಎಂ ಬದಲಾವಣೆ ವಿಚಾರ ಬಂದರೆ ನಾನು, ಸೋನಿಯಾಗಾಂಧಿ, ರಾಹುಲ್‌ಗಾಂಧಿ ಎಲ್ಲ ಸೇರಿ ಚರ್ಚೆ ಮಾಡಿ ತೀರ್ಮಾನ ಮಾಡುತ್ತೇವೆ. ಸದ್ಯ ಸಿಎಂ ಬದಲಾವಣೆಗೆ ಇನ್ನೂ ಸಮಯವಿದೆ. ಆ ಸಮಯ ಬಂದಾಗ ನೋಡೋಣ ಎಂದಿದ್ದಾರೆ.

ಎಐಸಿಸಿ ಅಧ್ಯಕ್ಷರ ಈ ಹೇಳಿಕೆ ರಾಜಕೀಯವಾಗಿ ಮಹತ್ವ ಪಡೆದುಕೊಂಡಿದ್ದು, ಮೇ ನಲ್ಲಿ ನಾಯಕತ್ವ ಬದಲಾಗಲಿದೆ ಎಂಬ ಚರ್ಚೆಗಳಿಗೆ ತೆರೆ ಎಳೆದಂತೆ ಅವರು ಮಾತನಾಡಿದ್ದಾರೆ.

ಮುಖ್ಯಮಂತ್ರಿ ಬದಲಾವಣೆ, ಮುಖ್ಯಮಂತ್ರಿ ಯಾರಾಗಬೇಕು ಎಲ್ಲ ವಿಚಾರಗಳನ್ನು ಹೆಚ್ಚಾಗಿ ಸೋನಿಯಾಗಾಂಧಿ ಅವರೇ ನಿರ್ಧರಿಸುತ್ತಾರೆ. ಮುಖ್ಯಮಂತ್ರಿ ಬದಲಾವಣೆ ಸಮಯ ಬಂದರೆ ಎಲ್ಲರೂ ಕುಳಿತು ಚರ್ಚೆ ಮಾಡುತ್ತೇವೆ ಎಂದು ಹೇಳುವ ಮೂಲಕ ಸದ್ಯ ನಾಯಕತ್ವ ಬದಲಾವಣೆಯ ಹೇಳಿಕೆಗಳನ್ನು ಅವರು ತಳ್ಳಿ ಹಾಕಿದಂತೆ ಮಾತನಾಡಿದ್ದಾರೆ. ಈ ಎಲ್ಲ ಬೆಳವಣಿಗೆಗಳ ನಂತರ ಮೇ ಎರಡನೇ ವಾರದಲ್ಲಿ ಉಪಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಅವರಿಗೆ ಸಿಹಿ ಸುದ್ದಿ ಸಿಗಲಿದೆ ಎಂಬ ಚರ್ಚೆಗಳು ಕಾಂಗ್ರೆಸ್‌ನಲ್ಲಿ ನಡೆದಿದ್ದವು. ಇದರ ಮಧ್ಯೆಯೇ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನಖರ್ಗೆ ಅವರು ಮುಖ್ಯಮಂತ್ರಿ ಬದಲಾವಣೆಗೆ ಸಮಯವಿದೆ. ಆ ಸಮಯ ಬಂದಾಗ ನೋಡೋಣ ಎಂದು ಹೇಳಿರುವುದು ಮೇ ತಿಂಗಳಲ್ಲಿ ನಾಯಕತ್ವ ಬದಲಾವಣೆಗಳಾಗುತ್ತವೆ ಎಂಬ ಚರ್ಚೆಗಳಿಗೆ ತೆರೆ ಎಳೆದಂತಿದೆ.

## ವಿವಿಧ ಕಾಮಗಾರಿಗಳಿಗೆ ಚಾಲನೆ

ಬೆಂಗಳೂರು: ಗ್ರೇಟರ್ ಬೆಂಗಳೂರು ಪ್ರಾಧಿಕಾರ (ಜಿಬಿಎ) ಹಾಗೂ ಬೆಂಗಳೂರು ಮೆಟ್ರೋ ನಿಗಮದ ವ್ಯಾಪ್ತಿಯಲ್ಲಿ ವಿವಿಧ ಅಭಿವೃದ್ಧಿ ಕಾಮಗಾರಿಗಳ ಶಂಕುಸ್ಥಾಪನೆ ಮತ್ತು ಲೋಕಾರ್ಪಣೆ ಕಾರ್ಯಕ್ರಮವನ್ನು ಉಪ ಮುಖ್ಯಮಂತ್ರಿಗಳು ಹಾಗೂ ಬೆಂಗಳೂರು ನಗರಾಭಿವೃದ್ಧಿ ಸಚಿವರಾದ ಡಿ.ಕೆ. ಶಿವಕುಮಾರ್ ಅವರು ನೆರವೇರಿಸಿದರು.

ಈ ಸಂದರ್ಭದಲ್ಲಿ ಸೆಂಟ್ರಲ್ ಸಿಲ್ಕ್ ಬೋರ್ಡ್‌ನಿಂದ ರಾಗಿ ಗುಡ್ಡ ಜಂಕ್ಷನ್‌ವರೆಗೆ ನಿರ್ಮಿತ ರೈಲು–ಸಹ ರಸ್ತೆ ಮೇಲ್ಸೇತುವೆಗೆ ಪ್ರಾಯೋಗಿಕ ಸಂಚಾರಕ್ಕೆ ಹೆಚ್.ಎಸ್. ಆರ್ ಲೇಔಟ್ ರ್‍ಯಾಂಪ್ ಪ್ರವೇಶ ದ್ವಾರದಲ್ಲಿ ಹಸಿರು ನಿಶಾನೆ ತೋರಿಸಲಾಯಿತು. ಬನಶಂಕರಿ ಜಂಕ್ಷನ್‌ನಲ್ಲಿ ಸ್ಕೈವಾಕ್ ನಿರ್ಮಾಣ ಕಾಮಗಾರಿಗೆ ಶಂಕುಸ್ಥಾಪನೆ ನೆರವೇರಿಸಲಾಯಿತು.

ಜೊತೆಗೆ ಚಿಕ್ಕಪೇಟೆ ಕ್ಷೇತ್ರದ ಗಾಂಧಿಬಜಾರ್‌ನಲ್ಲಿ ವಾಣಿಜ್ಯ ಸಂಕೀರ್ಣ ಹಾಗೂ ಬಹುಮಹಡಿ ವಾಹನ ನಿಲುಗಡೆ ಕಟ್ಟಡವನ್ನು ಲೋಕಾರ್ಪಣೆ ಮಾಡಲಾಗಿದ್ದು, ಚಾಮರಾಜಪೇಟೆ ಕ್ಷೇತ್ರದ ಕೆ.ಆರ್ ಮಾರುಕಟ್ಟೆ ಕಟ್ಟಡದ ನೆಲ ಮಹಡಿಯಲ್ಲಿ ನಿರ್ಮಿತ ವಾಹನ ನಿಲುಗಡೆ ಸಂಕೀರ್ಣದ ಕಾರ್ಯಾಚರಣೆ ಮತ್ತು ನಿರ್ವಹಣೆಗೆ ಚಾಲನೆ ನೀಡಲಾಯಿತು. ಎಂ.ಜಿ. ರಸ್ತೆ ಮೆಟ್ರೋ ನಿಲ್ದಾಣದ ಬಳಿ ಮಾರ್ಗದ ಕಂಬಗಳಿಗೆ ಅಳವಡಿಸಲಾದ ಡೈನಾಮಿಕ್ ಲೈಟಿಂಗ್ ವ್ಯವಸ್ಥೆಯನ್ನೂ ಉದ್ಘಾಟಿಸಲಾಯಿತು.



ಕಾರ್ಯಕ್ರಮದಲ್ಲಿ ಸಚಿವರಾದ ರಾಮಲಿಂಗಾರೆಡ್ಡಿ ಮತ್ತು ಬಿ.ಝಡ್. ಜಮೀರ್ ಅಹ್ಮದ್ ಖಾನ್, ವಿರೋಧ ಪಕ್ಷದ ನಾಯಕ ಆರ್. ಅಶೋಕ, ಲೋಕಸಭಾ ಸದಸ್ಯ ತೇಜಸ್ವಿ ಸೂರ್ಯ ಸೇರಿದಂತೆ ಹಲವಾರು ಜನಪ್ರತಿನಿಧಿಗಳು ಹಾಗೂ ಅಧಿಕಾರಿಗಳು ಉಪಸ್ಥಿತರಿದ್ದರು.

ನಗರದ ಸಂಚಾರ ದಟ್ಟಣೆ ಕಡಿಮೆ ಮಾಡುವುದು, ಮೂಲಸೌಕರ್ಯವನ್ನು ಸುಧಾರಿಸುವುದು ಮತ್ತು ನಾಗರಿಕರಿಗೆ ಉತ್ತಮ ಸೌಲಭ್ಯ ಒದಗಿಸುವ ಉದ್ದೇಶದಿಂದ ಕೈಗೆತ್ತಿಕೊಳ್ಳಲಾಗಿರುವ ಈ ಯೋಜನೆಗಳು ಬೆಂಗಳೂರಿನ ಅಭಿವೃದ್ಧಿಗೆ ಹೊಸ ವೇಗ ನೀಡಲಿವೆ.

ಆದರೆ ರಾಜ್ಯ ಸರ್ಕಾರ ಸದಾ ಕಾರ್ಮಿಕರ ಪರವಾಗಿದ್ದು, ಅವರಿಗೆ ವಿವಿಧ ಸೌಲಭ್ಯಗಳನ್ನು ನೀಡುತ್ತಿದೆ ಎಂದು ಸ್ಪಷ್ಟಪಡಿಸಿದರು. ಕೆಲಸದ ವೇಳೆ ಮೃತಪಟ್ಟ ಕಾರ್ಮಿಕರಿಗೆ ನೀಡುವ ಪರಿಹಾರವನ್ನು 5 ಲಕ್ಷದಿಂದ ರೂ.8 ಲಕ್ಷಕ್ಕೆ ಹೆಚ್ಚಿಸಲಾಗಿದ್ದು, ಸಹಜ ಮರಣದ ಸಂದರ್ಭದಲ್ಲಿನ ನೆರವು ರೂ.75 ಸಾವಿರದಿಂದ ರೂ.1.5 ಲಕ್ಷಕ್ಕೆ ಹೆಚ್ಚಿಸಲಾಗಿದೆ ಎಂದು ಹೇಳಿದರು. ಇನ್ನು ಗಿಗ್ ಕಾರ್ಮಿಕರಿಗಾಗಿ ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಯಡಿ ಈಗಾಗಲೇ 30,256 ಕಾರ್ಮಿಕರನ್ನು ನೋಂದಾಯಿಸಲಾಗಿದ್ದು, ಅಪಘಾತದಲ್ಲಿ ಮೃತಪಟ್ಟವರಿಗೆ ರೂ.4 ಲಕ್ಷ ಪರಿಹಾರ ನೀಡಲಾಗುತ್ತಿದೆ ಎಂದು ವಿವರಿಸಿದರು.

## ‘ಯಾವುದೇ ಕೆಲಸಕ್ಕೂ ಸಮಾನ ಗೌರವ ದೊರೆಯಬೇಕು’

ಬೆಂಗಳೂರು: ಕಾರ್ಮಿಕರು ದೇಶದ ಆರ್ಥಿಕ ಹಾಗೂ ಸಾಮಾಜಿಕ ಅಭಿವೃದ್ಧಿಯ ಶಿಲ್ಪಿಗಳು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

ಕೆಪಿಸಿಸಿ ಕಚೇರಿಯಲ್ಲಿ ನಡೆದ ವಿಶ್ವ ಕಾರ್ಮಿಕ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದ ಅವರು, “ಕಾಯಕವೇ ಕೈಲಾಸ” ಎಂಬ ಬಸವಣ್ಣ ಅವರ ಸಂದೇಶವನ್ನು ಉಲ್ಲೇಖಿಸಿ, ಯಾವುದೇ ಕೆಲಸಕ್ಕೂ ಸಮಾನ ಗೌರವ ದೊರೆಯಬೇಕು ಎಂದು ಹೇಳಿದರು. ಕಾರ್ಮಿಕರ ಶ್ರಮವೇ ದೇಶದ ಅಭಿವೃದ್ಧಿಗೆ ಬುನಾದಿಯಾಗಿದ್ದು, ಅವರಿಲ್ಲದೆ ಯಾವುದೇ ಪ್ರಗತಿ ಸಾಧ್ಯವಿಲ್ಲ ಎಂದು ಅವರು ಅಭಿಪ್ರಾಯಪಟ್ಟರು.

ದೇಶದಲ್ಲಿ 75 ಶೇಕಡಕ್ಕಿಂತ ಹೆಚ್ಚು ಅಸಂಘಟಿತ ಕಾರ್ಮಿಕರಿದ್ದು, ಕೇಂದ್ರ ಸರ್ಕಾರವು ಕಾರ್ಮಿಕರ ಹಿತಾಸಕ್ತಿಗಳಿಗಿಂತ ದೊಡ್ಡ ಕಂಪನಿಗಳ ಪರವಾಗಿ ನಡೆದುಕೊಳ್ಳುತ್ತಿದೆ ಎಂದು ಅವರು ಟೀಕಿಸಿದರು.

ಆದರೆ ರಾಜ್ಯ ಸರ್ಕಾರ ಸದಾ ಕಾರ್ಮಿಕರ ಪರವಾಗಿದ್ದು, ಅವರಿಗೆ ವಿವಿಧ ಸೌಲಭ್ಯಗಳನ್ನು ನೀಡುತ್ತಿದೆ ಎಂದು ಸ್ಪಷ್ಟಪಡಿಸಿದರು. ಕೆಲಸದ ವೇಳೆ ಮೃತಪಟ್ಟ ಕಾರ್ಮಿಕರಿಗೆ ನೀಡುವ ಪರಿಹಾರವನ್ನು 5 ಲಕ್ಷದಿಂದ ರೂ.8 ಲಕ್ಷಕ್ಕೆ ಹೆಚ್ಚಿಸಲಾಗಿದ್ದು, ಸಹಜ ಮರಣದ ಸಂದರ್ಭದಲ್ಲಿನ ನೆರವು ರೂ.75 ಸಾವಿರದಿಂದ ರೂ.1.5 ಲಕ್ಷಕ್ಕೆ ಹೆಚ್ಚಿಸಲಾಗಿದೆ ಎಂದು ಹೇಳಿದರು.

ಇನ್ನು ಗಿಗ್ ಕಾರ್ಮಿಕರಿಗಾಗಿ ಕರ್ನಾಟಕ ರಾಜ್ಯ ಗಿಗ್ ಕಾರ್ಮಿಕರ ವಿಮಾ ಯೋಜನೆಯಡಿ ಈಗಾಗಲೇ 30,256 ಕಾರ್ಮಿಕರನ್ನು ನೋಂದಾಯಿಸಲಾಗಿದ್ದು, ಅಪಘಾತದಲ್ಲಿ



ಮೃತಪಟ್ಟವರಿಗೆ ರೂ.4 ಲಕ್ಷ ಪರಿಹಾರ ನೀಡಲಾಗುತ್ತಿದೆ ಎಂದು ವಿವರಿಸಿದರು. ಇದೇ ವೇಳೆ ಕಾರ್ಮಿಕರ ಮಕ್ಕಳಿಗೆ ಉತ್ತಮ ಶಿಕ್ಷಣ ಕಲ್ಪಿಸುವ ಉದ್ದೇಶದಿಂದ 2026–27ನೇ ಸಾಲಿನಲ್ಲಿ 104 ವಸತಿ ಶಾಲೆಗಳನ್ನು ಪ್ರಾರಂಭಿಸಲಾಗಿದ್ದು, ಈ ಶಾಲೆಗಳಲ್ಲಿ 99.42 ಶೇಕಡ ವಿದ್ಯಾರ್ಥಿಗಳು ಉತ್ತೀರ್ಣರಾಗಿರುವುದು ಗಮನಾರ್ಹ ಸಾಧನೆಯಾಗಿದೆ ಎಂದರು.

ಕಾರ್ಮಿಕರ ಹೋರಾಟದ ಇತಿಹಾಸವನ್ನು ಸ್ಮರಿಸಿದ ಅವರು, 1886ರಲ್ಲಿ ಅಮೆರಿಕದ ಶಿಕಾಗೋ ನಗರದಲ್ಲಿ ನಡೆದ ಹೋರಾಟದ ಫಲವಾಗಿ 8 ಗಂಟೆಗಳ ಕೆಲಸ, 8 ಗಂಟೆಗಳ ವಿಶ್ರಾಂತಿ ಮತ್ತು 8 ಗಂಟೆಗಳ ಮನರಂಜನೆ ಎಂಬ ಹಕ್ಕುಗಳು ಲಭಿಸಿದವು ಎಂದು ತಿಳಿಸಿದರು. ಕಾರ್ಯಕ್ರಮದಲ್ಲಿ ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಸೇರಿದಂತೆ ಹಲವು ಗಣ್ಯರು ಉಪಸ್ಥಿತರಿದ್ದರು.

## ಆನ್‌ಲೈನ್ ಗೇಮ್‌ಗೆ ಕಡಿವಾಣ

ನವದೆಹಲಿ: ದೇಶದ ಯುವ ಜನತೆ ಆನ್‌ಲೈನ್ ಗೇಮ್‌ಗಳಿಗೆ ಮಾರು ಹೋಗಿದ್ದಾರೆ. ಅದೆಷ್ಟರ ಮಟ್ಟಿಗೆ ಎಂದರೆ ದೇಶದ ಹಳ್ಳಿಯ ಮೂಲೆಯಲ್ಲೂ ಗೇಮ್‌ಗಳಲ್ಲಿ ತೊಡಗಿರುವವರು ಕಾಣಸಿಗುತ್ತಾರೆ. ಹೀಗೆ ಆಡುವವರಲ್ಲಿ ಅಪ್ರಾಪ್ತರು ಸೇರಿದಂತೆ ಅನೇಕರು ಹಣ ಹೂಡಿ ನಷ್ಟ ಮಾಡಿಕೊಂಡು ಆತ್ಮಹತ್ಯೆಗೆ ಶರಣಾಗುತ್ತಾರೆ. ಅದೇ ರೀತಿ ಅಪರಾಧ ಕೃತ್ಯಗಳಲ್ಲೂ ತೊಡಗಿದ ಉದಾಹರಣೆಗಳನ್ನು ನಾವು ನೋಡಿದ್ದೇವೆ. ಇದನ್ನು ನಿಯಂತ್ರಿಸಲು ಕೇಂದ್ರ ಸರ್ಕಾರ ಹೊಸ ಆನ್‌ಲೈನ್ ಗೇಮಿಂಗ್ ಕಾಯ್ದೆಯನ್ನು ಜಾರಿಗೆ ತಂದಿದೆ.

ಭಾರತದ ಹೊಸ ಆನ್‌ಲೈನ್ ಗೇಮಿಂಗ್ ಕಾಯ್ದೆ (ಆನ್‌ಲೈನ್ ಗೇಮಿಂಗ್‌ನ ಪ್ರಚಾರ ಮತ್ತು ನಿಯಂತ್ರಣ ಕಾಯ್ದೆ, 2025 ರ ಅಡಿ) ಇಂದಿನಿಂದ (ಮೇ 1) ಜಾರಿಯಾಗಲಿದೆ. ಕಾಯ್ದೆಯಿಂದ ಗೇಮಿಂಗ್‌ನಲ್ಲಿ 5 ಮಹತ್ವದ ಬದಲಾವಣೆಗಳಾಗಿವೆ. ಈ ನಿಯಮಗಳ ವಿವರ, ಇದು ಯಾರ ಮೇಲೆ ಪರಿಣಾಮ ಬೀರಲಿದೆ ಎಂಬ ಬಗ್ಗೆ ಇಲ್ಲಿ ವಿವರಿಸಲಾಗಿದೆ.

ನ್ಯಾಷನಲ್ ಗೇಮಿಂಗ್ ಅಥಾರಿಟಿ ಎಲ್ಲಾ ಗೇಮ್‌ಗಳಿಗೆ ಲೈಸೆನ್ಸ್ ಕೊಡುವ ಕೇಂದ್ರದ ಸಂಸ್ಥೆಯಾಗಿದೆ.

ಗೇಮ್‌ಗಳನ್ನು ಮೂರು ರೀತಿ ವರ್ಗೀಕರಿಸಲಾಗಿದೆ. 1) ಇ–ಸ್ಪೋರ್ಟ್ಸ್ ಸಂಪೂರ್ಣ ಕಾನೂನುಬದ್ಧ 2) ಸ್ಕಿಲ್ ಗೇಮ್ ಲೈಸೆನ್ಸ್ ಬೇಕು 3) ಬೆಟ್ಟಿಂಗ್ ಗೇಮ್ ಸಂಪೂರ್ಣ ಬ್ಯಾನ್ ಮಾಡಲಾಗಿದೆ. ಆನ್‌ಲೈನ್ ಕ್ಯಾಸಿನೊ,ಗೇಮ್‌ಗಳು ಬ್ಯಾನ್ ಆಗಲಿವೆ.

18 ವರ್ಷ ಕೆಳಗಿನ ಮಕ್ಕಳಿಗೆ ದಿನಕ್ಕೆ 3 ಗಂಟೆ ಮಾತ್ರ ಆಡಲು ಅವಕಾಶ, ರಾತ್ರಿ 11 ರಿಂದ ಬೆಳಿಗ್ಗೆ 6ರ ವರೆಗೆ ಇವರಿಗೆ ಗೇಮ್ ಆಡುವುದು ನಿಷೇಧ. 18 ವರ್ಷಕ್ಕಿಂತ ಮೇಲ್ಪಟ್ಟವರಿಗೆ ಮಿತಿ ಇಲ್ಲ. ಇನ್ನು ಮಕ್ಕಳು, ಶಾಲಾ ವಿದ್ಯಾರ್ಥಿಗಳಿಗೆ ಹಣದ ಕರ್ಚಿಗೆ ಕಡಿವಾಣ ಹಾಕಲಾಗಿದೆ. ಅಲ್ಲದೇ ಎಲ್ಲಾ ಹಣದ ಗೇಮ್‌ಗೆ ಆಧಾರ್ ಕಡ್ಡಾಯವಾಗಿದೆ.

ಮಕ್ಕಳು ಮತ್ತು ಶಾಲಾ ವಿದ್ಯಾರ್ಥಿಗಳಿಗೆ ತಿಂಗಳಿಗೆ 10,000 ರೂ. ಮಿತಿ ಇದೆ. ಇದರಿಂದ ಪೋಷಕರಿಗೆ ನಿಯಂತ್ರಣ ಸಿಗಲಿದೆ. ಗೇಮ್‌ಗಳನ್ನು ಮೂರು ರೀತಿ ವರ್ಗೀಕರಿಸಲಾಗಿದೆ.

1) ಇ–ಸ್ಪೋರ್ಟ್ಸ್ ಸಂಪೂರ್ಣ ಕಾನೂನುಬದ್ಧ 2) ಸ್ಕಿಲ್ ಗೇಮ್ ಲೈಸೆನ್ಸ್ ಬೇಕು 3) ಬೆಟ್ಟಿಂಗ್ ಗೇಮ್ ಸಂಪೂರ್ಣ ಬ್ಯಾನ್ ಮಾಡಲಾಗಿದೆ. ಆನ್‌ಲೈನ್ ಕ್ಯಾಸಿನೊ,ಗೇಮ್‌ಗಳು ಬ್ಯಾನ್ ಆಗಲಿವೆ.

ಕಂಪನಿಗಳು ಈ ನಿಯಮ ಉಲ್ಲಂಘಿಸಿದರೆ ಮೊದಲ ಬಾರಿ 1 ಕೋಟಿ ರೂ. ದಂಡ. 2ನೇ ಬಾರಿ 5 ಕೋಟಿ ರೂ. ದಂಡ ಹಾಗೂ ವರ್ಷ ಜೈಲು ಶಿಕ್ಷೆ ವಿಧಿಸಲಾಗುತ್ತದೆ. ಸೆಲೆಬ್ರಿಟಿಗಳು ಹಾಗೂ ಇನ್‌ಫ್ಲುಯೆನ್ಸರ್‌ಗಳು ಬೆಟ್ಟಿಂಗ್ ಸೇರಿದಂತೆ ಬ್ಯಾನ್ ಆದ ಗೇಮ್‌ಗಳ ಜಾಹಿರಾತು ಮಾಡಿದರೆ 50 ಲಕ್ಷ ರೂ. ದಂಡ ಹಾಗೂ 1 ವರ್ಷ ಬ್ಯಾನ್ ಮಾಡಲಾಗುತ್ತದೆ.

## ‘ಕಾಂಗ್ರೆಸ್ ಮುಸ್ಲಿಮರಿಗೆ ಮಾತ್ರ ವಿಶೇಷ ಅನುದಾನ ನೀಡುತ್ತಿದೆ’

ಬೆಂಗಳೂರು: ಸರ್ವರಿಗೂ ಸಮಪಾಲು ಎಂದು ಹೇಳುವ ಕಾಂಗ್ರೆಸ್ ಮುಸ್ಲಿಮರಿಗೆ ಮಾತ್ರ ವಿಶೇಷ ಅನುದಾನ ನೀಡುತ್ತಿದೆ. ಇದರ ಜೊತೆಗೆ ದಲಿತರು ಹಾಗೂ ಹಿಂದುಳಿದ ವರ್ಗಕ್ಕೂ ನೀಡಬೇಕಿತ್ತು ಎಂದು ಪ್ರತಿಪಕ್ಷ ನಾಯಕ ಆರ್.ಅಶೋಕ ಹೇಳಿದರು.

ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ದಾವಣಗೆರೆಯಲ್ಲಿ ಮುಸ್ಲಿಮರು ತಿರುಗಿಬಿದ್ದು ಮುಖಂಡರ ವಿರುದ್ಧ ಕ್ರಮ ಕೈಗೊಂಡಿರುವುದರಿಂದ ಮತ ಬ್ಯಾಂಕ್ ರಾಜಕಾರಣ ಮಾಡಲಾಗಿದೆ. ಇದಕ್ಕೆ ಹಿಂದೂಗಳು ತಿರುಗುಬಾಣ ನೀಡಲಿದ್ದಾರೆ ಎಂದರು.

ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕಾಂಗ್ರೆಸ್‌ನ ಮೂರನೇ ಬಾಗಿಲಿಗೆ ಶಂಕುಸ್ಥಾಪನೆಯ ಪೂಜೆ ಮಾಡಿದ್ದಾರೆ.

ಈ ಮೂಲಕ ಅವರು ಸಿಎಂ ಆಗುವ ಚರ್ಚೆ ಶುರುವಾಗಿದೆ. ಇದುವರೆಗೆ ಡಿ.ಕೆ.ಶಿವಕುಮಾರ್ ಮುಖ್ಯಮಂತ್ರಿಯಾಗುತ್ತಾರೆ ಎಂಬ ಅಭಿಪ್ರಾಯವಿತ್ತು. ಈಗ ಎಲ್ಲರೂ ಖರ್ಗೆ ಕಡೆಗೆ ತಿರುಗಿ ನೋಡುತ್ತಿದ್ದಾರೆ.



ನಮಗೆ ಸಿಎಂ ಬದಲಾವಣೆಗಿಂತಲೂ ಸರ್ಕಾರ ಬಿದ್ದುಹೋಗುವುದು ಸೂಕ್ತ ಎಂಬ ಅಭಿಪ್ರಾಯವಿದೆ. ಸಿದ್ದರಾಮಯ್ಯ ಹಾಗೂ ಡಿ.ಕೆ.ಶಿವಕುಮಾರ್ ಅವರ ಆಟ ನೋಡಿಯಾಗಿದೆ. ಅದೇ ರೀತಿ ಹೊಸ ಪಿಕ್ಚರ್ ಬಂದರೂ ನೋಡುತ್ತೇವೆ. ಖರ್ಗೆ ಸಿಎಂ ಆದರೂ ಬಳಿಕ ಜನರು ಗೇಟ್‌ಪಾಸ್ ನೀಡುವುದು ಖಚಿತ ಎಂದರು.

ಹೈಕಮಾಂಡ್ ತಿರಸ್ಕಾರ ಮಾಡಿದ ನಂತರ ಡಿ.ಕೆ.ಶಿವಕುಮಾರ್‌ಗೆ ಬೇರೆ ದಾರಿಯೇ ಇಲ್ಲ. ತಲೆಬಾಗಿ ಅಲ್ಲ, ಮಂಡಿಯೂರಿ ತೆವಳಿಕೊಂಡು ಮಲ್ಲಿಕಾರ್ಜುನ ಖರ್ಗೆ ಅವರ ಸೂಚನೆಯನ್ನು ಸ್ವೀಕಾರ ಮಾಡಬೇಕಾಗುತ್ತದೆ.

ಮಲ್ಲಿಕಾರ್ಜುನ ಖರ್ಗೆ ಏನೇನು ಕಿಲಾಡಿ ಆಟ ಆಡುತ್ತಾರೋ ನೋಡೋಣ ಎಂದರು. ಇರಾನ್ ಹಾಗೂ ಅಮೆರಿಕದ ನಡುವಿನ ಯುದ್ಧ ಇನ್ನೂ ಸ್ಥಗಿತಗೊಂಡಿಲ್ಲ. ಅಡುಗೆ ಅನಿಲ ಸೇರಿದಂತೆ ತೈಲ ಸಮಸ್ಯೆ ಎಲ್ಲ ದೇಶಗಳಿಗೆ ತಟ್ಟಿದೆ.

ಸಹಜವಾಗಿ ಅಡುಗೆ ಅನಿಲದ ಬೆಲೆ ಏರಿಕೆಯಾಗಿದೆ. ಮುಂದಿನ ದಿನಗಳಲ್ಲಿ ಪ್ರಧಾನಿ ನರೇಂದ್ರ ಮೋದಿ ಬೆಲೆಯನ್ನು ಇಳಿಕೆ ಮಾಡಲು ಕ್ರಮ ವಹಿಸಬಹುದು. ಯುದ್ಧ ನಿಂತ ಕೂಡಲೇ ಈ ಸಮಸ್ಯೆ ನಿವಾರಣೆಯಾಗುವ ವಿಶ್ವಾಸವಿದೆ ಎಂದರು.

ಭಾರತ ಸಾರಥಿ
BHARATHA SARATHI KANNADA DAILY NEWS PAPER
02/05/2026
ಬೆಂಗಳೂರು । ಬೆಂ.ಗ್ರಾಮಾಂತರ । ತುಮಕೂರು । ಮೈಸೂರು । ಮಂಡ್ಯ । ರಾಮನಗರ । ಕೋಲಾರ । ಚಿಕ್ಕಬಳ್ಳಾಪುರ । ಚಿತ್ರದುರ್ಗ । ದಾವಣಗೆರೆ । ಶಿವಮೊಗ್ಗ । ಮಂಗಳೂರು । ಉಡುಪಿ । ಹುಬ್ಬಳ್ಳಿ । ಮಡಿಕೇರಿ । ಚಿಕ್ಕಮಗಳೂರು । ಹಾಸನ । ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಗೋಡೆ ಕುಸಿದ ಸ್ಥಳಕ್ಕೆ ಲೋಕಾಯುಕ್ತರ ಭೇಟಿ: ಪರಿಶೀಲನೆ

ಬೆಂಗಳೂರು

ನಗರದ ಬೌರಿಂಗ್ ಆಸ್ಪತ್ರೆ ಆವರಣದಲ್ಲಿ ತಡೆಗೋಡೆ ಕುಸಿದ ಘಟನೆಗೆ ಸಂಬಂಧಿಸಿದಂತೆ ಲೋಕಾಯುಕ್ತರು ಗಂಭೀರವಾಗಿ ಗಮನ ಹರಿಸಿದ್ದಾರೆ. ಘಟನಾ ಸ್ಥಳಕ್ಕೆ ಲೋಕಾಯುಕ್ತ ಬಿಎಸ್ ಪಾಟೀಲ್ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ವೇಳೆ ಉಪಲೋಕಾಯುಕ್ತರಾದ ಕೆಎನ್ ಫಣೀಂದ್ರ ಹಾಗೂ ವೀರಪ್ಪ ಉಪಸ್ಥಿತರಿದ್ದರು.

ಪರಿಶೀಲನೆ ಬಳಿಕ ಮಾತನಾಡಿದ ಬಿಎಸ್ ಪಾಟೀಲ್, ಗೋಡೆ ಕುಸಿತಕ್ಕೆ ದುರ್ಬಲ ಫೌಂಡೇಶನ್ ಕಾರಣವಾಗಿರಬಹುದು ಎಂದು ಶಂಕೆ ವ್ಯಕ್ತಪಡಿಸಿದರು. "ನಗರದಲ್ಲಿ ಮಳೆ ಬಂದಾಗ ಈ ರೀತಿಯ ಅನಾಹುತಗಳು ಸಂಭವಿಸುವುದು ಸಾಮಾನ್ಯವಾಗುತ್ತಿದೆ. ಪ್ರತಿ ವರ್ಷ ಮಳೆ ಬರುತ್ತದೆ, ಆದರೂ ಮುನ್ನೆಚ್ಚರಿಕಾ ಕ್ರಮ ಕೈಗೊಳ್ಳಲಾಗುತ್ತಿಲ್ಲ," ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಅವರು ಮುಂದುವರಿಸಿ, "ಇಲ್ಲಿ ಬದಿ ಬದಿ ವ್ಯಾಪಾರಿಗಳಿಗೆ ಅವಕಾಶ ನೀಡಿರುವುದರಿಂದ ಸಮಸ್ಯೆ ಹೆಚ್ಚಾಗಿದೆ. ಇದೇ ರೀತಿಯ ಘಟನೆಗಳು ಹಿಂದೆ ಸಹ ನಡೆದಿವೆ. ಆಸ್ಪತ್ರೆ ಆಡಳಿತವು ಅಪಾಯದ ಪ್ರದೇಶಗಳನ್ನು ಗುರುತಿಸಬೇಕಿತ್ತು. ಜೊತೆಗೆ ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ಕೂಡ ಎಚ್ಚರ ವಹಿಸಬೇಕಿತ್ತು," ಎಂದರು.

ಈ ಕಾಮಗಾರಿಯನ್ನು ಯಾರು ನಿರ್ಮಿಸಿದ್ದಾರೆ, ಕಾಮಗಾರಿ ಗುಣಮಟ್ಟ ಹೇಗಿತ್ತು ಎಂಬುದರ ಕುರಿತು ಸಮಗ್ರ ತನಿಖೆ ನಡೆಸಲಾಗುತ್ತದೆ ಎಂದು ತಿಳಿಸಿದರು. "ಯಾರು ಗೋಡೆ ನಿರ್ಮಿಸಿದ್ದಾರೆ, ಹೇಗೆ ನಿರ್ಮಿಸಿದ್ದಾರೆ ಎಂಬ ಎಲ್ಲಾ ಮಾಹಿತಿಯನ್ನು ಸಂಗ್ರಹಿಸುತ್ತೇವೆ. ಇದೇ ರೀತಿಯ ಅಪಾಯಕರ ಗೋಡೆಗಳು ನಗರದಲ್ಲಿ ಎಲ್ಲೆಲ್ಲಿವೆ ಎಂಬುದನ್ನೂ ಪರಿಶೀಲಿಸಲಾಗುತ್ತದೆ," ಎಂದರು.

ಈ ಪ್ರಕರಣದಲ್ಲಿ ಲೋಕಾಯುಕ್ತರು ಸುಮೋಟೋ ಕೇಸ್ ದಾಖಲಿಸುವುದಾಗಿ ಘೋಷಿಸಿದ್ದಾರೆ. ಪ್ರತಿ ವಲಯದಲ್ಲಿರುವ ಅಧಿಕಾರಿಗಳು ತಮ್ಮ ವ್ಯಾಪ್ತಿಯಲ್ಲಿರುವ ಇಂತಹ ಅಪಾಯಕರ ನಿರ್ಮಾಣಗಳನ್ನು ಗುರುತಿಸಬೇಕೆಂದು ಸೂಚಿಸಲಾಗಿದೆ. ಈ ಪ್ರಕರಣದಲ್ಲಿ ಇನ್‌ಚಾರ್ಜ್ ಆಗಿರುವ ಹರೀಶ್ ಕುಮಾರ್ ಅವರನ್ನು ಕಚೇರಿಗೆ ಕರೆಯಿಸಿ ವಿಚಾರಣೆ ನಡೆಸಲಾಗುತ್ತದೆ.

"ಒಂದು ಗಂಟೆ ಮಳೆ ಬಂದಿದ್ದಕ್ಕೆ ಈ ರೀತಿಯ ಘಟನೆ ಸಂಭವಿಸಿದೆ. ವಿಧಾನಸೌಧ ಸೇರಿದಂತೆ ಜನರು ಸಂಚರಿಸುವ ಎಲ್ಲ ಪ್ರಮುಖ ಸ್ಥಳಗಳ ಗೋಡೆಗಳನ್ನು ಪರಿಶೀಲನೆ ಮಾಡಬೇಕು," ಎಂದು ಬಿಎಸ್ ಪಾಟೀಲ್ ಸೂಚಿಸಿದರು. ಈ ಸಂಬಂಧ ಪ್ರಕರಣ ದಾಖಲಿಸಿ ಮುಂದಿನ ಕ್ರಮ ಕೈಗೊಳ್ಳಲಾಗುತ್ತದೆ ಎಂದು

# ಮಳೆ: ಕೊನೆಗೂ ಎಚ್ಚೆತ್ತ ಜಿಬಿಎ

ಬೆಂಗಳೂರು

ನಗರದಲ್ಲಿ ನಿನ್ನೆ ಸಂಜೆ ಸುರಿದ ಆಲಿಕಲ್ಲು ಸಹಿತ ಭಾರೀ ಮಳೆಯ ಪರಿಣಾಮ ಜನಜೀವನ ಅಸ್ತವ್ಯಸ್ತಗೊಂಡಿದೆ. ಮಳೆಯ ಆರ್ಭಟಕ್ಕೆ ಹಲವು ಅನಾಹುತಗಳು ಸಂಭವಿಸಿದ್ದು, ಕೆಲವರು ಪ್ರಾಣ ಕಳೆದುಕೊಂಡಿದ್ದಾರೆ. ಈ ಹಿನ್ನೆಲೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರ ಮುಂಬರುವ ದಿನಗಳಲ್ಲಿ ಮಳೆ ಅನಾಹುತಗಳನ್ನು ತಡೆಗಟ್ಟಲು ತುರ್ತು ಸಿದ್ಧತೆಗಳನ್ನು ಕೈಗೊಂಡಿದೆ.

ಪ್ರಾಧಿಕಾರವು ಪ್ರಾಥಮಿಕ ಮತ್ತು ದ್ವಿತೀಯ ಹಂತದ ಮಳೆನೀರು ಕಾಲುವೆಗಳ ಶುದ್ಧೀಕರಣ ಹಾಗೂ ಪುನರುಜ್ಜೀವನ ಕಾರ್ಯಗಳನ್ನು ತುರ್ತುಗತಿಯಲ್ಲಿ ಕೈಗೊಳ್ಳಲು ನಿರ್ಧರಿಸಿದೆ. ವಿಶ್ವ ಬ್ಯಾಂಕ್ ನೆರವಿನಿಂದ 173 ಕಿಲೋಮೀಟರ್ ಉದ್ದದ ಹೊಸ ಮಳೆನೀರು ಕಾಲುವೆ ತಡೆಗೋಡೆ ನಿರ್ಮಾಣ ಹಾಗೂ 83 ಕಿಲೋಮೀಟರ್ ಕಾಲುವೆಗಳ ಮೇಲ್ದರ್ಜೆಗೇರಿಸುವ ಕಾಮಗಾರಿಗಳು ಪ್ರಗತಿಯಲ್ಲಿವೆ. ರಾಷ್ಟ್ರೀಯ ಅನಾಹುತ ನಿರ್ವಹಣಾ ನಿಧಿ ನೆರವಿನಿಂದ 31 ಅವಶ್ಯಕ ಸ್ಥಳಗಳಲ್ಲಿ ಕಲ್ವರ್ಟ್ ನಿರ್ಮಾಣ ನಡೆಯುತ್ತಿದೆ.

ನಗರದ ಕೆರೆಗಳಲ್ಲಿ ನೀರಿನ ನಿಯಂತ್ರಣಕ್ಕಾಗಿ 127 ಸ್ಥಳಗಳಲ್ಲಿ ನೀರು ಬಿಡುವ ದ್ವಾರಗಳನ್ನು ಅಳವಡಿಸಲಾಗುತ್ತಿದೆ. ಹೆಚ್ಚುವರಿ ಪಕ್ಕದ ಚರಂಡಿಗಳು ಮತ್ತು ಜಲ ಹರಿವು ದಾಟುವ ವ್ಯವಸ್ಥೆಗಳ ನಿರ್ಮಾಣಕ್ಕೂ ಕ್ರಮ ಕೈಗೊಳ್ಳಲಾಗಿದೆ. ಪ್ರಮುಖ ಪ್ರದೇಶಗಳಲ್ಲಿ ನೀರು ಒಳಹರಿವು ವ್ಯವಸ್ಥೆಗಳು ಹಾಗೂ ಮಣ್ಣು ತಡೆ ಸಾಧನಗಳನ್ನು ಅಳವಡಿಸಲಾಗುತ್ತಿದೆ. ಮುಂಗಾರು ಪೂರ್ವ ಶುದ್ಧೀಕರಣ ವೇಳಾಪಟ್ಟಿಯನ್ನು ಕಡ್ಡಾಯವಾಗಿ ಜಾರಿಗೊಳಿಸಲಾಗುತ್ತಿದ್ದು, ಅತಿಸೂಕ್ಷ್ಮ ಪ್ರದೇಶಗಳಲ್ಲಿ ವಿಶೇಷ ತಂಡಗಳನ್ನು ನಿಯೋಜಿಸಲಾಗಿದೆ.

ನಗರದ ವಿವಿಧ ಭಾಗಗಳಲ್ಲಿ ಭಾರೀ ಮಳೆ ದಾಖಲಾಗಿದ್ದು, ಕೇಂದ್ರ ಭಾಗದ ಕಾಟನ್‌ಪೇಟೆ, ಬಿನ್ನಿಪೇಟೆ, ಸಂಪಂಗಿರಾಮನಗರ, ಶಿವಾಜಿನಗರ ಹಾಗೂ ಸುಭಾಷ್ ನಗರ ಪ್ರದೇಶಗಳಲ್ಲಿ 92 ಮಿಲಿಮೀಟರ್ ಮಳೆ ದಾಖಲಾಗಿದೆ. ಉತ್ತರ ಭಾಗದ ಕೆಲವು ಪ್ರದೇಶಗಳಲ್ಲಿ ಕನಿಷ್ಠ 15 ಮಿಲಿಮೀಟರ್ ಮಳೆಯಾದರೆ, ಒಟ್ಟಾರೆ ಸರಾಸರಿ 55 ಮಿಲಿಮೀಟರ್ ಮಳೆ ಸುರಿದಿದೆ.

ಮಳೆಯ ಪರಿಣಾಮವಾಗಿ ಒಟ್ಟು 226 ಮರಗಳು ಧರೆಗುರುಳಿದ್ದು, 623 ಕೊಂಬೆಗಳು ಮುರಿದು ಬಿದ್ದಿವೆ. ತೆರವು ಕಾರ್ಯಕ್ಕಾಗಿ ನಗರ ಪಾಲಿಕೆಗಳಿಂದ 30 ತಂಡಗಳು ಹಾಗೂ ನಾಲ್ಕು ಕ್ರೇನ್‌ಗಳನ್ನು ನಿಯೋಜಿಸಲಾಗಿದೆ. ಅಗ್ನಿಶಾಮಕ ಇಲಾಖೆಯ 15 ತಂಡಗಳು, ರಾಜ್ಯ ವಿಪತ್ತು ಪ್ರತಿಕ್ರಿಯಾ ಪಡೆಗಿನ 4 ತಂಡಗಳು ಹಾಗೂ ಹೆಚ್ಚುವರಿ 10 ಖಾಸಗಿ ತಂಡಗಳು ಸಹ ಕಾರ್ಯನಿರ್ವಹಿಸುತ್ತಿವೆ.

ಮಧ್ಯಾಹ್ನದ ವೇಳೆಗೆ 150 ಮರಗಳು ಮತ್ತು 384 ಕೊಂಬೆಗಳು ತೆರವುಗೊಳಿಸಲ್ಪಟ್ಟಿದ್ದು, ಉಳಿದ ಕಾರ್ಯ ಮುಂದುವರಿದಿದೆ. ನಗರದಾದ್ಯಂತ 62ಕ್ಕೂ ಹೆಚ್ಚು ಪ್ರದೇಶಗಳಲ್ಲಿ ರಸ್ತೆಗಳಲ್ಲಿ ನೀರು ನಿಂತಿರುವ ಬಗ್ಗೆ ಮಾಹಿತಿ ಬಂದಿದೆ. ಮೂರು ಕಡೆ ಗೋಡೆ ಕುಸಿತ, 105 ಮನೆಗಳಿಗೆ ನೀರು ನುಗ್ಗಿರುವುದು ಹಾಗೂ ಒಂದು ಕಡೆ ಮೂಲಸೌಕರ್ಯ ಹಾನಿ ಸಂಭವಿಸಿದೆ.

# "ಪೀಸ್‌ಫುಲ್ ಕ್ಯಾಂಡಲ್ ರ್‍ಯಾಲಿ ಫಾರ್ ಹ್ಯೂಮ್ಯಾನಿಟಿ"

ಬೆಂಗಳೂರು






ಫ್ರೀಡಂ ಪಾರ್ಕ್ ನಲ್ಲಿ ಕರುಣ್ಯ ಸೋಶಿಯೊ ವೆಲ್ಫೇರ್ ಚಾರಿಟೇಬಲ್ ಟ್ರಸ್ಟ್ ವತಿಯಿಂದ ಸಮಾಜದಲ್ಲಿ ಶಾಂತಿ, ಸೌಹಾರ್ದತೆ ಹಾಗೂ ಮಾನವೀಯ ಮೌಲ್ಯಗಳನ್ನು ಬಲಪಡಿಸುವ ಉದ್ದೇಶದಿಂದ "ಪೀಸ್‌ಫುಲ್ ಕ್ಯಾಂಡಲ್ ರ್‍ಯಾಲಿ ಫಾರ್ ಹ್ಯೂಮ್ಯಾನಿಟಿ" ಕಾರ್ಯಕ್ರಮವನ್ನು ಶಾಂತಿಯುತವಾಗಿ ಆಯೋಜಿಸಲಾಯಿತು. ಟ್ರಸ್ಟ್‌ನ ವಸುಧಾ ಅವರ ನೇತೃತ್ವದಲ್ಲಿ ನಡೆದ ಈ ಕ್ಯಾಂಡಲ್ ರ್‍ಯಾಲಿಯಲ್ಲಿ ವಿವಿಧ ಕ್ಷೇತ್ರಗಳ ನಾಗರಿಕರು, ಸಮಾಜಸೇವಕರು ಹಾಗೂ ಸಂಘಟನೆಗಳ ಪ್ರತಿನಿಧಿಗಳು ಭಾಗವಹಿಸಿ ಕೈಯಲ್ಲಿ ದೀಪಗಳನ್ನು ಹಿಡಿದು ಮಾನವೀಯತೆ, ಶಾಂತಿ ಮತ್ತು ಏಕತೆಯ ಸಂದೇಶ ಸಾರಿದರು.

"ಘರ್ಷಣೆಗೆ ಮೀರಿದ ಮಾನವೀಯತೆ" ಎಂಬ ಸಂದೇಶದೊಂದಿಗೆ ಯಾವುದೇ ಘೋಷಣೆಗಳು ಅಥವಾ ಹಿಂಸಾತ್ಮಕ ಚಟುವಟಿಕೆಗಳಿಲ್ಲದೆ ಸಂಪೂರ್ಣ ಮೌನದಲ್ಲಿ ನಡೆದ ಈ ಕಾರ್ಯಕ್ರಮ ಎಲ್ಲರ ಗಮನ ಸೆಳೆಯಿತು. ಶಾಂತಿ, ಸಹಾನುಭೂತಿ ಹಾಗೂ ಸಹಬಾಳ್ವೆಯ ಅಗತ್ಯತೆಯನ್ನು ಒತ್ತಿಹೇಳುವ ಮೂಲಕ ಸಮಾಜದಲ್ಲಿ ಒಗ್ಗಟ್ಟಿನ ಸಂದೇಶ ರವಾನಿಸಲಾಯಿತು.

ಈ ಸಂದರ್ಭದಲ್ಲಿ ಹೈಕೋರ್ಟ್ ವಕೀಲ ಹಾಗೂ ಸಮಾಜಸೇವಕರಾದ ಅನಂತ್ ನಾಯಕ್, ಶಾಂತಿ ರಾಯಭಾರಿ ವಿಜಯ್ ದೇವರಾಜ್, ತಿರುವಳ್ಳುವರ್ ಸಂಘದ ಉಪಾಧ್ಯಕ್ಷ ವಿಶ್ವನಾಥನ್ ಪಿ, ಸಮಾಜಸೇವಕ ಪೀಟರ್ ಸ್ಯಾಮ್ಸನ್, ಸಮುದಾಯ ಅಭಿವೃದ್ಧಿ ಕಾರ್ಯಕರ್ತೆ ಲಾಲಿ ರೋನಾಲ್ಡ್, ಮಹಾಬೋಧಿ ಸೊಸೈಟಿ ಪ್ರತಿನಿಧಿಗಳು, ವೈದ್ಯೆ ಡಾ. ಜಹೀದಾ ಖಾನ್, ಸಮಾಜಸೇವಕಿ ಶಾಲಿನಿ, ಐಎಚ್‌ಆರ್‌ಎಂ ಸಂಸ್ಥೆಯ ಮಾರ್ಗರೆಟ್ ರೆಬೆಲ್ಲೊ, ಇಂಡಿಯನ್ ಸೋಶಿಯಲ್ ಇನ್‌ಸ್ಟಿಟ್ಯೂಟ್‌ನ ಫಾದರ್ ಡೆನ್ಜಿಲ್ ಫರ್ನಾಂಡಿಸ್, ಫ್ರೀಡಂ ಪಾರ್ಕ್ ಅಧ್ಯಕ್ಷರಾದ ಗಂಡಸಿ ಸದಾನಂದಸ್ವಾಮಿ, ಕಲಾವಿದ ಜಾನ್ ದೇವರಾಜ್ ಹಾಗೂ ಸುನಿತಾ ಸೇರಿದಂತೆ ಅನೇಕ ಗಣ್ಯರು ಉಪಸ್ಥಿತರಿದ್ದರು.

ಕ್ಯಾಂಡಲ್ ಬೆಳಕಿನ ಮಧ್ಯೆ ನಡೆದ ಮೌನ ಸಮಾವೇಶವು ಶಾಂತಿಯ ಪ್ರತೀಕವಾಗಿ ಮೂಡಿಬಂದಿದ್ದು, ಭಾಗವಹಿಸಿದ್ದವರು ಮೌನ ಧ್ಯಾನದ ಮೂಲಕ ವಿಶ್ವದಲ್ಲಿ ಶಾಂತಿ ಮತ್ತು ಸಹಾನುಭೂತಿ ನೆಲೆಸಲಿ ಎಂಬ ಆಶಯ ವ್ಯಕ್ತಪಡಿಸಿದರು. ಕಾರ್ಯಕ್ರಮದ ಕೊನೆಯಲ್ಲಿ ಸಾರ್ವಜನಿಕರ ಉತ್ತಮ ಸ್ಪಂದನೆಗೆ ಆಯೋಜಕರು ಕೃತಜ್ಞತೆ ಸಲ್ಲಿಸಿ, ಇಂತಹ ಶಾಂತಿಯುತ ಕಾರ್ಯಕ್ರಮಗಳು ಸಮಾಜದಲ್ಲಿ ಸಂವಾದ ಮತ್ತು ಸಹಬಾಳ್ವೆಯನ್ನು ಉತ್ತೇಜಿಸಲು ಅಗತ್ಯವೆಂದು ಅಭಿಪ್ರಾಯಪಟ್ಟರು.

# ಎಕ್ಸಿಮ್ ಬ್ಯಾಂಕ್ ವಿರುದ್ಧದ ಸುಳ್ಳು ವರದಿಗಳ ತೆಗೆದು ಹಾಕಲು ಸೂಚನೆ

ಹೈದರಾಬಾದ್

ರವಿಪ್ರಕಾಶ್ ಮಾಲೀಕತ್ವದ ಆರ್‌ಟಿವಿ- ತೆಲುಗು ವಿರುದ್ಧ ತೀವ್ರ ಟೀಕೆ ವ್ಯಕ್ತಪಡಿಸಿ, ಯೂರೋ ಎಕ್ಸಿಂ ಬ್ಯಾಂಕ್ ವಿರುದ್ಧದ ಮಾನಹಾನಿಕರ ಪ್ರಸಾರಗಳನ್ನು ನಿಲ್ಲಿಸಲು ಇಲ್ಲಿನ ನ್ಯಾಯಾಲಯ ಆದೇಶಿಸಿದೆ.

**ಹೈದರಾಬಾದ್ ಸಿಟಿ ಸಿವಿಲ್ ನ್ಯಾಯಾಲಯವು ರವಿ ಪ್ರಕಾಶ್ ಮತ್ತು ಅವರ ಮಾಧ್ಯಮ ಸಂಸ್ಥೆ ಆರ್‌ಟಿವಿ ತೆಲುಗುಗೆ ಯೂರೋ ಎಕ್ಸಿಂ ಬ್ಯಾಂಕ್ ವಿರುದ್ಧ ಮಾನಹಾನಿಕರ ಹಾಗೂ ಸುಳ್ಳು ಆರೋಪಗಳನ್ನು ಪ್ರಸಾರ ಮಾಡುವುದನ್ನು ಕೂಡಲೇ ನಿಲ್ಲಿಸುವಂತೆ ಆದೇಶಿಸಿದೆ.**

ಆರ್‌ಟಿವಿ ತೆಲುಗು ಎಕ್ಸಿಮ್ ಬ್ಯಾಂಕ್ ವಿರುದ್ಧ ಮಾಡಿರುವ ಗಂಭೀರ ಆರೋಪಗಳನ್ನು ಸಮರ್ಥಿಸಲು ಯಾವುದೇ ನಂಬಲರ್ಹ ಅಥವಾ ಪರಿಶೀಲಿಸಬಹುದಾದ ಸಾಕ್ಷ್ಯವನ್ನು ನ್ಯಾಯಾಲಯದ ಮುಂದೆ ಸಲ್ಲಿಸಲು ವಿಫಲವಾಗಿದೆ ಎಂದು ನ್ಯಾಯಾಲಯ ತನ್ನ ತೀರ್ಪಿನಲ್ಲಿ ಹೇಳಿದೆ.

ಈ ಆದೇಶದ ಭಾಗವಾಗಿ, ಆರ್‌ಟಿವಿ ತೆಲುಗು ತಕ್ಷಣದಿಂದಲೇ ಇಂತಹ ವಿಷಯಗಳನ್ನು ಪ್ರಸಾರ ಮಾಡುವುದು ಅಥವಾ ಹಂಚುವುದು ನಿಲ್ಲಿಸಬೇಕು ಹಾಗೂ ಈಗಾಗಲೇ ಪ್ರಸಾರಗೊಂಡಿರುವ ಮಾನಹಾನಿಕರ ವಿಡಿಯೋಗಳು ಮತ್ತು ಸಂಬಂಧಿತ ಪೋಸ್ಟ್‌ಗಳನ್ನು ತನ್ನ ಸಾಮಾಜಿಕ ಜಾಲತಾಣಗಳಿಂದ ತೆಗೆದುಹಾಕಬೇಕು ಎಂದು ಸೂಚಿಸಿದೆ.

ನ್ಯಾಯಾಲಯವು ಮುಂದುವರಿದು, ಸರಿಯಾದ ಸಾಕ್ಷ್ಯವಿಲ್ಲದೆ ಎಕ್ಸಿಮ್ ಬ್ಯಾಂಕ್ ವಿರುದ್ಧ ಅವಹೇಳನಕಾರಿ ಟಿಪ್ಪಣಿಗಳು, ತಪ್ಪು ಮಾರ್ಗದರ್ಶಕ ಶೀರ್ಷಿಕೆಗಳು ಅಥವಾ ಆರೋಪಗಳನ್ನು ಪ್ರಕಟಿಸುವುದನ್ನು ನಿಷೇಧಿಸಿದೆ. ವಾಸ್ತವಾಧಾರವಿಲ್ಲದ ನಿರ್ಲಕ್ಷ್ಯಪೂರ್ಣ ವರದಿ ಸಂಸ್ಥೆಯ ಪ್ರತಿಷ್ಠೆಗೆ ಹಾನಿ ಉಂಟುಮಾಡುತ್ತದೆ ಎಂದು ನ್ಯಾಯಾಲಯ ಒತ್ತಿ ಹೇಳಿದೆ.

# ನವಯುಗಕ್ಕೆ ಮೈಲಿಗಲ್ಲಿನ ಮಿಸ್ಸಿಂಗ್ ಲಿಂಕ್ ಯೋಜನೆಗೆ ಶ್ಲಾಘನೆ

ಮುಂಬೈ




ನವಯುಗ ಎಂಜಿನಿಯರಿಂಗ್ ಕಂಪನಿ ಲಿಮಿಟೆಡ್ (ಎನ್.ಇ.ಸಿ.ಎಲ್.) ಮುಂಬೈ-ಪುಣೆ ಎಕ್ಸ್‌ಪ್ರೆಸ್ ವೇ ಮಿಸ್ಸಿಂಗ್ ಲಿಂಕ್ ಯೋಜನೆಯ ಭಾಗವಾಗಿ ಅತ್ಯಂತ ಅಗಲವಾದ ನೆಲದಡಿಯ ಸುರಂಗ ನಿರ್ಮಿಸಿದ್ದಕ್ಕಾಗಿ ತನ್ನ ಎರಡನೆಯ ಗಿನ್ನೆಸ್ ವಿಶ್ವ ದಾಖಲೆಯನ್ನು ಹೆಮ್ಮೆಯಿಂದ ಮುಡಿಗೇರಿಸಿಕೊಂಡಿದೆ. ಈ ಅಸಾಧಾರಣ ಸಾಧನೆಯು ಭಾರತದ ಮೂಲಸೌಕರ್ಯ ಪ್ರಯಾಣದಲ್ಲಿ ಮಹತ್ತರ ಕ್ಷಣವಾಗಿದ್ದು ಸರಿಸಾಟಿ ಇರದ ಪ್ರಮಾಣ, ಎಂಜಿನಿಯರಿಂಗ್ ಪ್ರಭುತ್ವ ಮತ್ತು ಗಡಿಗಳ ಆಚೆಗೂ ನಿರ್ಮಿಸುವ ದಿಟ್ಟ ಧ್ಯೇಯವನ್ನು ತೋರಿಸುತ್ತದೆ.

ದಶಕಗಳಿಂದ ಮುಂಬೈ-ಪುಣೆ ಪ್ರಯಾಣವು ಸಹ್ಯಾದ್ರಿ ಪರ್ವತಗಳಲ್ಲಿ ಅತ್ಯಂತ ಮನೋಹರವಾಗಿದ್ದರೂ ನಿಧಾನ ಮತ್ತು ಊಹಿಸದಂತೆ ಇರುತ್ತಿತ್ತು. ಮಹಾರಾಷ್ಟ್ರ ಮುಖ್ಯಮಂತ್ರಿ ಶ್ರೀ ದೇವೇಂದ್ರ ಫಡ್ನವೀಸ್ ಅವರ ದೂರದೃಷ್ಟಿ ಮತ್ತು ನಾಯತ್ವದಲ್ಲಿ ಮಹಾರಾಷ್ಟ್ರ ಸರ್ಕಾರವು 13.3 ಕಿಲೋಮೀಟರ್ ದೂರದ ಮಿಸ್ಸಿಂಗ್ ಲಿಂಕ್ ನಿರ್ಮಿಸುವ ಪರಿವರ್ತನೀಯ ಪರಿಹಾರವನ್ನು ಯೋಜಿಸಿತು, ಅದನ್ನು ಮಹಾರಾಷ್ಟ್ರ ರಾಜ್ಯ ರಸ್ತೆ ಅಭಿವೃದ್ಧಿ ನಿಗಮ ನಿಯಮಿತ (ಎಂ.ಎಸ್.ಆರ್.ಡಿ.ಸಿ.ಎಲ್.) ಪೂರೈಸಿತು ಮತ್ತು ನವಯುಗ ಎಂಜಿನಿಯರಿಂಗ್ ಕಂಪನಿ ಲಿಮಿಟೆಡ್ ಅದಕ್ಕೆ ಜೀವ ನೀಡಿತು.

ಮಹಾರಾಷ್ಟ್ರ ದಿನದಂದು ಉದ್ಘಾಟನೆಯಾದ ಈ ಅತ್ಯಂತ ನಿರೀಕ್ಷೆಯ ಮುಂಬೈ-ಪುಣೆ ಎಕ್ಸ್‌ಪ್ರೆಸ್ ವೇ ಮಿಸ್ಸಿಂಗ್ ಲಿಂಕ್ ಎಂಜಿನಿಯರಿಂಗ್ ಶ್ರೇಷ್ಠತೆಯಲ್ಲಿ ಮೈಲಿಗಲ್ಲಾಗಿದ್ದು ಭಾರತದ ಮೂಲಸೌಕರ್ಯದ ದಿಗಂತವನ್ನು ವಿಸ್ತರಿಸಿದೆ. ಟ್ರಾಫಿಕ್ ದಟ್ಟಣೆಯ ಖಂಡಾಲಾ ಘಾಟ್ ಗಳನ್ನು ದಾಟಿ ಹೋಗುವ ಈ ಪರಿವರ್ತನೀಯ ಮಾರ್ಗವು ಪ್ರಯಾಣದ ಸಮಯವನ್ನು 30 ನಿಮಿಷಗಳಷ್ಟು ಕಡಿಮೆ ಮಾಡುತ್ತದೆ ಮತ್ತು ಮಹಾರಾಷ್ಟ್ರದ ಅತ್ಯಂತ ಪ್ರಮುಖ ಸಾರಿಗೆ ಕಾರಿಡಾರ್ ಗಳಲ್ಲಿ ಒಂದರಲ್ಲಿ ವಾಹನದಟ್ಟಣೆಯನ್ನು ಗಮನಾರ್ಹವಾಗಿ ಕಡಿಮೆ ಮಾಡುತ್ತದೆ.

ಈ ಮಹತ್ತರ ಮೈಲಿಗಲ್ಲಿನ ಗುರುತಾಗಿ ಮಾನ್ಯ ಮಹಾರಾಷ್ಟ್ರ ಮುಖ್ಯಮಂತ್ರಿ ಶ್ರೀ ದೇವೇಂದ್ರ ಫಡ್ನವೀಸ್, ಮಾನ್ಯ ಉಪ ಮುಖ್ಯಮಂತ್ರಿ ಶ್ರೀ ಏಕನಾಥ್ ಶಿಂದೆ, ಮಾನ್ಯ ಉಪ ಮುಖ್ಯಮಂತ್ರಿ ಶ್ರೀಮತಿ ಸುನೇತ್ರಾ ಪವಾರ್ ಮತ್ತು ನವಯುಗ ಎಂಜಿನಿಯರಿಂಗ್ ಕಂಪನಿ ಲಿಮಿಟೆಡ್ ವ್ಯವಸ್ಥಾಪಕ ನಿರ್ದೇಶಕ ಶ್ರೀ ಚಿಂತಾ ಶ್ರೀಧರ್ ಭಾರತದ ಮೂಲಸೌಕರ್ಯ ಪ್ರಯಾಣದಲ್ಲಿ ಈ ಮಹತ್ತರ ಕ್ಷಣದ ಪ್ರಾರಂಭೋತ್ಸವಕ್ಕೆ ಒಗ್ಗೂಡಿದರು.

# ಹಸೆಮಣೆ ಏರಬೇಕಿದ್ದ ಯುವಕ ಬಲಿ

ಹಾಸನ

ಕೆಲವೇ ದಿನಗಳಲ್ಲಿ ಹಸೆಮಣೆ ಏರಬೇಕಿದ್ದ ವರನೊಬ್ಬ ಪ್ರೀವೆಡ್ಡಿಂಗ್ ಶೂಟ್‌ಗೆ ವಧುವನ್ನು ಕರೆತರಲು ಹೋಗುತ್ತಿದ್ದಾಗ ಸಂಭವಿಸಿದ ಭೀಕರ ರಸ್ತೆ ಅಪಘಾತದಲ್ಲಿ ಧಾರುಣವಾಗಿ ಸಾವನ್ನಪ್ಪಿರುವ ಘಟನೆ ಸಕಲೇಶಪುರ ತಾಲ್ಲೂಕಿನ ಮೂಗಲಿ ಗ್ರಾಮದಲ್ಲಿ ಇಂದು ಬೆಳಿಗ್ಗೆ ಸಂಭವಿಸಿದೆ.

ಅಪಘಾತದಲ್ಲಿ ಮೃತಪಟ್ಟ ದುರ್ದೈವಿ ಯುವಕನನ್ನು ಮನು.ಎಲ್.ಎನ್. (29) ಎಂದು ಗುರುತಿಸಲಾಗಿದೆ. ಇವರು ಬೇಲೂರು ತಾಲ್ಲೂಕಿನ, ಲಕ್ಕುಂದ ಗ್ರಾಮದ, ದರ್ಬಾರ್ ಪೇಟೆ ನಿವಾಸಿಯಾಗಿದ್ದರು.

ಮೇ 10 ರಂದು ಆಲೂರು ತಾಲೂಕು ತೊಗರನಹಳ್ಳಿ ಗ್ರಾಮದ ಕಾಂಚನ ಜೊತೆ ಮನು ಅವರ ಮದುವೆ ನಿಶ್ಚಯವಾಗಿತ್ತು.






ಕನಕಪುರ ಮೆಗಾ ಡೈರಿಗೆ ನವದೆಹಲಿಯಲ್ಲಿ ಕೊಡಮಾಡಿರುವ ಪ್ರತಿಷ್ಠಿತ "16ನೇ ಸಿಐಐ ಆಹಾರ ಸುರಕ್ಷತಾ ಪ್ರಶಸ್ತಿ"ಯನ್ನು ಡೈರಿಯ ವ್ಯವಸ್ಥಾಪಕ ನಿರ್ದೇಶಕರು ಹಾಗೂ ಪದಾಧಿಕಾರಿಗಳು ಬಮುಲ್ ಅಧ್ಯಕ್ಷರಾದ ಡಿ.ಕೆ. ಸುರೇಶ್ ಅವರಿಗೆ ಬೆಂಗಳೂರಿನಲ್ಲಿ ಗುರುವಾರ ಹಸ್ತಾಂತರಿಸಿದರು.

# ಒನ್ ಪ್ಲಸ್ ಪ್ಯಾಡ್ 4 ಬಿಡುಗಡೆ: ಚಲನೆಯಲ್ಲಿ ಪಿಸಿ ಮಟ್ಟದ ಕಾರ್ಯಕ್ಷಮತೆ

ಬೆಂಗಳೂರು

ಜಾಗತಿಕ ತಂತ್ರಜ್ಞಾನ ಬ್ರಾಂಡ್ ಒನ್ ಪ್ಲಸ್ ತನ್ನ ಹೊಸ ಟ್ಯಾಬ್ಲೆಟ್ ಒನ್ ಪ್ಲಸ್ ಪ್ಯಾಡ್ 4 ಅನ್ನು ಬಿಡುಗಡೆ ಮಾಡಿದೆ. ಈ ಸಾಧನವು ಉತ್ಪಾದಕತೆ, ಸೃಜನಶೀಲತೆ ಮತ್ತು ಮನರಂಜನೆಯನ್ನು ಒಟ್ಟುಗೂಡಿಸುವ ಹೊಸ ಪೀಳಿಗೆಯ ಟ್ಯಾಬ್ಲೆಟ್ ಆಗಿದೆ.

ಈ ಟ್ಯಾಬ್ಲೆಟ್‌ನಲ್ಲಿ ಸ್ನ್ಯಾಪ್ ಡ್ರ್ಯಾಗನ್ 8 ಎಲೈಟ್ ಜೆನ್ 5 ಪ್ರೊಸೆಸರ್ ಹೊಂದಿದ್ದು, ಪಿಸಿ ಮಟ್ಟದ ಶಕ್ತಿಯುತ ಕಾರ್ಯಕ್ಷಮತೆಯನ್ನು ಒದಗಿಸುತ್ತದೆ.

33.53 ಸೆಂ.ಮೀ (13.2 ಇಂಚು) ಗಾತ್ರದ 3.4ಕೆ ಡಿಸ್ಪ್ಲೇ, 144 ಹರ್ಟ್ಸ್ ರಿಫ್ರೆಶ್ ರೇಟ್ ಹಾಗೂ ಎಂಟು ಸ್ಪೀಕರ್‌ಗಳ ಸ್ಪೇಷಿಯಲ್ ಆಡಿಯೊ ವ್ಯವಸ್ಥೆ ಇದರ ಪ್ರಮುಖ ಆಕರ್ಷಣೆಗಳಾಗಿವೆ.

ಒನ್ ಪ್ಲಸ್ ಪ್ಯಾಡ್ 4ನಲ್ಲಿ 13,380 ಎಂಎಎಚ್ ಸಾಮರ್ಥ್ಯದ ದೊಡ್ಡ ಬ್ಯಾಟರಿ ನೀಡಲಾಗಿದ್ದು, 80 ವಾಟ್ ವೇಗದ ಚಾರ್ಜಿಂಗ್ ಬೆಂಬಲವಿದೆ. ಜೊತೆಗೆ ಗೇಮಿಂಗ್ ಮತ್ತು ಭಾರಿ ಮಲ್ಟಿಟಾಸ್ಕಿಂಗ್ ವೇಳೆ ತಾಪಮಾನ ನಿಯಂತ್ರಣಕ್ಕಾಗಿ ಸುಧಾರಿತ ಕೂಲಿಂಗ್ ವ್ಯವಸ್ಥೆ ಅಳವಡಿಸಲಾಗಿದೆ.

ಕಾರ್ಯಕ್ಷಮತೆಯ ದೃಷ್ಟಿಯಿಂದ ಈ ಸಾಧನವು 12 ಜಿಬಿ ರ‍್ಯಾಮ್ ಮತ್ತು 512 ಜಿಬಿ ಸಂಗ್ರಹಣಾ ಸಾಮರ್ಥ್ಯ ಹೊಂದಿದ್ದು, ಅತಿ ಹೆಚ್ಚಿನ ಕಾರ್ಯಭಾರವನ್ನು ಸಹ ಸುಲಭವಾಗಿ ನಿಭಾಯಿಸಬಲ್ಲದು. ಕಾರ್ಯಕ್ಷಮತೆಯಲ್ಲಿ ಹಿಂದಿನ ಆವೃತ್ತಿಗಿಂತ ಗಮನಾರ್ಹ ಏರಿಕೆ ಕಂಡುಬಂದಿದೆ ಎಂದು ಕಂಪನಿ ತಿಳಿಸಿದೆ.




ಈ ಟ್ಯಾಬ್ಲೆಟ್ ವೃತ್ತಿಪರರು, ಸೃಜನಶೀಲರು ಹಾಗೂ ಮಲ್ಟಿಟಾಸ್ಕರ್‌ಗಳನ್ನು ಗಮನದಲ್ಲಿಟ್ಟುಕೊಂಡು ವಿನ್ಯಾಸ ಗೊಳಿಸಲಾಗಿದೆ. ತೆಳುವಾದ ಹಾಗೂ ಸುಲಭವಾಗಿ ಹೊತ್ತೊಯ್ಯಬಹುದಾದ ವಿನ್ಯಾಸವು ಇದರ ವಿಶೇಷತೆಯಾಗಿದೆ.

ಒನ್ ಪ್ಲಸ್ ಪ್ಯಾಡ್ 4 ಬೆಲೆ ರೂ.54,999ರಿಂದ ಪ್ರಾರಂಭವಾಗುತ್ತದೆ. ಬ್ಯಾಂಕ್ ಸೌಲಭ್ಯಗಳೊಂದಿಗೆ ಮೇ 5, 2026ರಿಂದ ಮಾರಾಟ ಆರಂಭವಾಗಲಿದೆ.

# ಒಂದು ಸ್ಕೂಟರ್‌ನಲ್ಲಿ ಆರು ಚಿಕ್ಕಮಕ್ಕಳು

ಬೆಂಗಳೂರು



ಪೋಷಕರ ಇಂತಹ ತಪ್ಪಿನಿಂದಲ್ಲೇ ಅಪಘಾತಗಳು ಹೆಚ್ಚಾಗಿರುವುದು. ಈ ಬಗ್ಗೆ ಸಾಮಾಜಿಕ ಜಾಲತಾಣದಲ್ಲಿ ಭಾರೀ ವೈರಲ್ ಆಗುತ್ತ ಇರುತ್ತದೆ. ಅದರೂ ಈ ಪೋಷಕರಿಗೆ ಬುದ್ಧಿ ಬರುವುದಿಲ್ಲ. ಸಣ್ಣ ವಯಸ್ಸಿನಲ್ಲೇ ಈ ಎಚ್ಚರಿಕೆ ವಹಿಸಿದರೆ ಯಾವುದೇ ಅಪಾಯಗಳು ಆಗುವುದಿಲ್ಲ. ಇದೀಗ ಎಕ್ಸ್ ಖಾತೆಯಲ್ಲಿ ಇಂತಹದೇ ಘಟನೆಯ ಬಗ್ಗೆ ಭಾರೀ ಚರ್ಚೆ ನಡೆಯುತ್ತಿದೆ. ಈ ಪೋಸ್ಟ್ ಸಾಮಾಜಿಕ ಜಾಲತಾಣದಲ್ಲಿ ಭಾರೀ ಅಕ್ರೋಶಕ್ಕೆ ಕಾರಣವಾಗಿದೆ.

ಬೆಂಗಳೂರಿನಲ್ಲಿ ನಡೆದ ಈ ಘಟನೆ ಬಗ್ಗೆ ಏಪ್ರಿಲ್ 29ರಂದು 6 ಜನ ಚಿಕ್ಕ ಮಕ್ಕಳು ಒಂದೇ ಸ್ಕೂಟರ್‌ನಲ್ಲಿ ಕುಳಿತಿರುವ ಫೋಟೋವೊಂದನ್ನು ಹಂಚಿಕೊಂಡಿದ್ದಾರೆ. ಬೆಳಿಗ್ಗೆ 10:45ರ ಸುಮಾರಿಗೆ ಈ ಫೋಟೋವನ್ನು ಕ್ಲಿಕ್ ಮಾಡಲಾಗಿದೆ. ಈ ಮಕ್ಕಳು ಪಾದರಾಯನಪುರ ಮುಖ್ಯ ರಸ್ತೆ ಬಳಿ ಒಂದೇ ಸ್ಕೂಟರ್ ನಲ್ಲಿ ಹೋಗುವುದು ನೋಡಿದ್ದಾರೆ. ನಂತರ ಈ ಫೋಟೋವನ್ನು ಸೋಶಿಯಲ್ ಮೀಡಿಯಾದಲ್ಲಿ ಹಂಚಿಕೊಳ್ಳಲಾಗಿದೆ. ಅಲ್ಲಿಂದ ನೆಟ್ಟಿಗರು ಈ ಫೋಟೋಗೆ ಕಾಮೆಂಟ್ ಮಾಡಲು ಶುರು ಮಾಡಿದ್ದಾರೆ. ಇದೀಗ ಇದು ಭಾರೀ ಚರ್ಚೆಗೆ ಕಾರಣವಾಗಿದೆ.

ಈ ಫೋಟೋವನ್ನು ಆಧಾರಿಸಿ ಪೊಲೀಸರು ಕ್ರಮ ತೆಗೆದುಕೊಳ್ಳಬೇಕು ಎಂದು ಹೇಳಿದ್ದಾರೆ.

ಭಾರತದಲ್ಲಿ, 50 ಸಿಸಿಗಿಂತ ಕಡಿಮೆ ಸಾಮರ್ಥ್ಯದ ಮೋಟಾರ್ ಸೈಕಲ್ ಓಡಿಸಲು ಕಾನೂನುಬದ್ಧ ವಯಸ್ಸು 16 ವರ್ಷಗಳು ಮತ್ತು ಕಾರುಗಳು ಮತ್ತು ಗೇರ್ ಹೊಂದಿರುವ ಮೋಟಾರ್ ಸೈಕಲ್‌ಗಳಿಗೆ 18 ವರ್ಷಗಳು ಎಂಬ ಕಾನೂನು ಇದೆ. ಭಾರತದಲ್ಲಿ ಎರಡಕ್ಕಿಂತ ಹೆಚ್ಚು ಜನರು ದ್ವಿಚಕ್ರ ವಾಹನ ಓಡಿಸುವುದು ಕಾನೂನುಬಾಹಿರವಾಗಿದೆ. ಆದರೆ ಇಲ್ಲಿ 1988 ರ ಮೋಟಾರು ವಾಹನ ಕಾಯ್ದೆಯ ಸೆಕ್ಷನ್ 128 ರ ಉಲ್ಲಂಘನೆಯಾಗಿದೆ. ಇದರ ಜತೆಗೆ ಒಬ್ಬರೂ ಕೂಡ ಹೆಲ್ಮೆಟ್ ಹಾಕಿಲ್ಲ, ಇದು ಕೂಡ ಭಾರತ ಕಾನೂನು ವಿರೋಧಿ ಸಂಚಾರ ಎಂದು ಹೇಳಲಾಗಿದೆ.

# ಒಂದು ವಾರದೊಳಗೆ ಎತ್ತಿನಹೊಳೆ ಬಾಕಿ ಕಾಮಗಾರಿ ಪ್ರಾರಂಭ

ಬೆಂಗಳೂರು



"ಕೇಂದ್ರ ಪರಿಸರ ಇಲಾಖೆಯವರು ದಂಡ ಹಾಗೂ ಮಿಟಿಗೇಷನ್ ಪ್ಲಾನ್ ಸೇರಿ 257 ಕೋಟಿ ರೂಪಾಯಿ ಹಣ ಸಂದಾಯ ಮಾಡಬೇಕು ಎಂದು ಸೂಚಿಸಿದ್ದಾರೆ. ಇಂದೇ ಈ ಹಣ ಪಾವತಿ ಮಾಡಿ ಎಂದು ಮಾರ್ಗದರ್ಶನ ನೀಡಿದ್ದೇನೆ. ಕಟ್ಟಿದ ಕೂಡಲೇ ಈ ವಾರದೊಳಗೆ ಎತ್ತಿನಹೊಳೆ ಕೆಲಸ ಪ್ರಾರಂಭ ಮಾಡಿ ಎಂದು ಗುತ್ತಿಗೆದಾರರಿಗೆ ಸೂಚಿಸಿದ್ದೇವೆ" ಎಂದು ಡಿಸಿಎಂ ಡಿ.ಕೆ. ಶಿವಕುಮಾರ್ ಅವರು ಹೇಳಿದರು.

ಎತ್ತಿನಹೊಳೆ, ಮೇಕೆದಾಟು, ಭದ್ರಾ ಮೇಲ್ದಂಡೆ ವಿಚಾರವಾಗಿ ವಿಧಾನಸೌಧದಲ್ಲಿ ನಡೆದ ಸಭೆಯ ನಂತರ ಮಾಧ್ಯಮಗಳ ಪ್ರಶ್ನೆಗಳಿಗೆ ಶಿವಕುಮಾರ್ ಅವರು ಗುರುವಾರ ಪ್ರತಿಕ್ರಿಯೆ ನೀಡಿದರು.

"ತುಮಕೂರು ಭಾಗದಲ್ಲೂ ಭೂಸ್ವಾಧೀನಕ್ಕೆ ಸರ್ವೆ ನಡೆಸಲು ಕ್ರಮ ತೆಗೆದುಕೊಳ್ಳಲಾಗುವುದು. ಆದಷ್ಟು ಬೇಗ ಚಿಕ್ಕಬಳ್ಳಾಪುರ ಹಾಗೂ ಕೋಲಾರಕ್ಕೆ ನೀರನ್ನು ತೆಗೆದುಕೊಂಡು ಹೋಗಲಾಗುವುದು. ಎತ್ತಿನಹೊಳೆ ಯೋಜನೆಗೆ ಕೇಂದ್ರ ಪರಿಸರ ಇಲಾಖೆಯವರು ಒಂದಷ್ಟು ಷರತ್ತುಗಳನ್ನು ವಿಧಿಸಿ ಕಡತವನ್ನು ವಾಪಸ್ ಕಳುಹಿಸಿದ್ದರು. ಕಂದಾಯ ಇಲಾಖೆಯಿಂದ ಅರಣ್ಯ ಇಲಾಖೆಗೆ ಬದಲಿ ಭೂಮಿಯನ್ನು ಹಸ್ತಾಂತರ ಮಾಡಲಾಗುತ್ತಿದೆ. ಶೇ 10 ರಷ್ಟು ಭೂಮಿ ವರ್ಗಾವಣೆ ಬಾಕಿಯಿತ್ತು. ಮುಂದಿನ ಒಂದು ವಾರದೊಳಗೆ ಈ ಪ್ರಕ್ರಿಯೆ ನಡೆಯಲಿದೆ" ಎಂದರು.

"ಎತ್ತಿನಹೊಳೆ, ಭದ್ರಾ ಮೇಲ್ದಂಡೆ ಹಾಗೂ ಮೇಕೆದಾಟು ವಿಚಾರವಾಗಿ ಸಂಬಂಧಪಟ್ಟ ಶಾಸಕರ, ಅಧಿಕಾರಿಗಳ ಸಭೆ ನಡೆಸಲಾಯಿತು. ಕಂದಾಯ, ಅರಣ್ಯ ಹಾಗೂ ಗೃಹಸಚಿವರು ಭಾಗವಹಿಸಿದ್ದರು.

ಎತ್ತಿನಹೊಳೆ ವಿಚಾರವಾಗಿ ಕೇಂದ್ರ ಸರ್ಕಾರದ ಸಂಬಂಧಪಟ್ಟ ಸಚಿವರನ್ನು ಭೇಟಿಯಾಗಿದ್ದೆ. ನಾವು ಅವರ ಷರತ್ತುಗಳನ್ನು ಒಪ್ಪಿಕೊಂಡು ಮುಂದುವರೆದಿದ್ದೇವೆ" ಎಂದರು.

"ಮೇಕೆದಾಟು ವಿಚಾರವಾಗಿ ಡಿಪಿಆರ್ ಸಿದ್ಧವಾಗಿದ್ದು ಅದನ್ನು ಸಹ ಸಮಿತಿ ಮುಂದೆ ಸಲ್ಲಿಕೆ ಮಾಡಲಾಗುವುದು. ಮತ್ತೊಮ್ಮೆ ವೆಚ್ಚ ಪರಿಷ್ಕರಣೆ ಮಾಡಿದ್ದೇವೆ. ಸುಮಾರು 5,300 ಎಕರೆ ಜಮೀನನ್ನು ನಾವು ಅರಣ್ಯ ಇಲಾಖೆಗೆ ನೀಡಬೇಕಿದೆ. ಇದರ ಬಗ್ಗೆಯೂ ಕಂದಾಯ ಇಲಾಖೆ ಜೊತೆ ಮಾತನಾಡಲಾಗುವುದು" ಎಂದರು.

ಬೆಂಗಳೂರು ನಗರ ಪ್ರದಕ್ಷಿಣೆ ಬಗ್ಗೆ ಕೇಳಿದಾಗ, "ಈಗಾಗಲೇ ಶಿಥಿಲ ಮರಗಳು, ಹಾಗೂ ಕೊಂಬೆಗಳ ತೆರವಿಗೆ ಸೂಚಿಸಲಾಗಿದೆ. ನೀರು ಹರಿವಿಗೆ ತಡೆಗಳನ್ನು ತೆರವುಗೊಳಿಸಲಾಗುವುದು. ಮೊದಲು ಮಳೆ ಬರಲಿ ಎಂದು ಪ್ರಾರ್ಥನೆ ಮಾಡುತ್ತೇನೆ.

ನಾಳೆ ಮೂರು ಗಂಟೆಗೆ ಬೆಂಗಳೂರು ನಗರ ಸಂಚಾರ ಮಾಡಲಿದ್ದೇನೆ. ಒಂದೆರಡು ಮೇಲ್ಸೇತುವೆಗಳ ಲೋಕಾರ್ಪಣೆಗೂ ಪೂಜೆ ನೆರವೇರಿಸಲಾಗುವುದು" ಎಂದರು.

# ಪ್ರಕರಣ ಇತ್ಯರ್ಥ



ಬೆಂಗಳೂರುರಾಮನಗರದ ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ನ್ಯಾಯಾಲಯದ ನ್ಯಾಯಾಧೀಶರಾದ ಅವಿನಾಶ್ ಚಿಂದು ಎಚ್ ಅವರು 11 ವರ್ಷಗಳಿಂದ ವಿಲೇ ಇದ್ದ ಅಸಲು ದಾವೆ ಸಂಖ್ಯೆ.307/2015 ಪ್ರಕರಣವನ್ನು ಪ್ರತಿ ದಿನದ ಲೋಕ್ ಅದಾಲತ್‌ನಲ್ಲಿ ಬಗೆಹರಿಸಿದ್ದು, ಈ ಪ್ರಕರಣವು ಮುಕ್ತಾಯಗೊಳ್ಳುವಲ್ಲಿ ಮತ್ತು ಬಗೆಹರಿಸುವಲ್ಲಿ ಪಕ್ಷಗಾರರ ಪರ ಹಾಜರಾಗಿದ್ದ ವಕೀಲರುಗಳಾದ ಶಿವಸ್ವಾಮಿ, ಜಿ.ವಿ. ಶ್ರೀನಿವಾಸ್, ಆನಂದ ಭೈರವ, ಶಿವಣ್ಣಗೌಡ ಅವರು ಪಕ್ಷಗಾರರನ್ನು ಮನ ಒಲಿಸುವಲ್ಲಿ ಪ್ರಮುಖ ಪಾತ್ರ ವಹಿಸಿರುತ್ತಾರೆ.

ಈ ಕೇಸಿನ 5ನೇ ಪ್ರತಿವಾದಿಯಾಗಿದ್ದ 82 ವರ್ಷದ ಸಿಂಗಮ್ಮ ಅವರು ನ್ಯಾಯಾಲಯದ ಒಳಗೆ ಬರಲು ಸಾಧ್ಯವಿಲ್ಲದೇ ನ್ಯಾಯಾಲಯದ ಹೊರಗೆ ಕಾರಿನಲ್ಲಿ ಕುಳಿತಿದ್ದು, ನ್ಯಾಯಾಧೀಶರು ಸ್ವತಃ ಅಲ್ಲಿಗೆ ಹೋಗಿ ವಿಚಾರಣೆ ಮಾಡಿ ಆಕೆಯ ಒಪ್ಪಿಗೆಯನ್ನು ವಕೀಲರ ಸಮಕ್ಷಮ ಪಡೆದು ಪ್ರಕರಣವನ್ನು ಇತ್ಯರ್ಥಪಡಿಸಿರುತ್ತಾರೆ.

ಈ ಕೇಸಿನಲ್ಲಿ ಐದು ಜನ ಹಿರಿಯ ನಾಗರಿಕರಿದ್ದು, ಪ್ರಕರಣವನ್ನು ಪ್ರತಿ ದಿನದ ಲೋಕ್ ಆದಾಲತ್‌ನಲ್ಲಿ ಬಗೆಹರಿಸಲಾಯಿತು ಮತ್ತು ನ್ಯಾಯಾಲಯದ ಆದೇಶದ ಮೇಲೆ ಯಾವುದೇ ಮೇಲ್ಮನವಿ ಇಲ್ಲ ಎಂದು ಪಕ್ಷಗಾರರಿಗೆ ತಿಳಿಸಲಾಗಿರುತ್ತದೆ. ಈ ರೀತಿ ಸದರಿ ಪ್ರಕರಣವು ಇಬ್ಬರು ಪಕ್ಷಗಾರರಿಗೂ ಅನುಕೂಲವಾಗುವಂತೆ ನ್ಯಾಯಾಲಯದಲ್ಲಿ ಸುಖಾಂತ್ಯವನ್ನು ಕಂಡಿರುತ್ತದೆ.

# ಭಗವಾನ್ ಬುದ್ಧ ಜಯಂತಿ ಆಚರಣೆ

ಬೆಂಗಳೂರು

ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯಿತಿ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ವತಿಯಿಂದ ಭಗವಾನ್ ಬುದ್ಧ ಜಯಂತಿಯನ್ನು ಮೇ.1ರಂದು ಬೆಳಗ್ಗೆ 11 ಗಂಟೆಗೆ ದೇವನಹಳ್ಳಿ ಟೌನ್‌ನ ಡಾ॥ ಬಿ.ಆರ್. ಅಂಬೇಡ್ಕರ್ ಭವನದಲ್ಲಿ ಆಚರಿಸಲಾಗುತ್ತದೆ.

ಆಹಾರ, ನಾಗರೀಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಸಚಿವರು, ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಹೆಚ್.ಮುನಿಯಪ್ಪ ಜಯಂತಿ ಉದ್ಘಾಟನೆ ಮತ್ತು ಕಾರ್ಯಕ್ರಮದ ಅಧ್ಯಕ್ಷತೆ ವಹಿಸಲಿದ್ದಾರೆ.

ಹಿಂದುಳಿದ ವರ್ಗಗಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವ ತಂಗಡಗಿ ಶಿವರಾಜ್ ಸಂಗಪ್ಪ, 5ನೇ ಹಣಕಾಸು ಆಯೋಗದ ಅಧ್ಯಕ್ಷ ಸಿ. ನಾರಾಯಣಸ್ವಾಮಿ, ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ ರಾಜ್ಯ ವಿದ್ಯುನ್ಮಾನ ಅಭಿವೃದ್ಧಿ ನಿಗಮ ನಿಯಮಿತ ಅಧ್ಯಕ್ಷರು ಹಾಗೂ ಹೊಸಕೋಟೆ ವಿಧಾನಸಭಾ ಕ್ಷೇತ್ರದ ಶಾಸಕ ಶರತ್ ಕುಮಾರ್ ಬಚ್ಚೇಗೌಡ, ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಸಂಸದ ಡಾ. ಕೆ. ಸುಧಾಕರ್,

ವಿಧಾನ ಪರಿಷತ್ ಶಾಸಕರಾದ ಎಸ್. ರವಿ, ಪುಟ್ಟಣ್ಣ, ರಾಮೋಜಿ ಗೌಡ, ಎನ್. ನಾಗರಾಜ್ (ಎಂ.ಟಿ.ಬಿ), ದೊಡ್ಡಬಳ್ಳಾಪುರ ಶಾಸಕ ಧೀರಜ್ ಮುನಿರಾಜ್, ನೆಲಮಂಗಲ ಶಾಸಕ ಎನ್. ಶ್ರೀನಿವಾಸ್, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷ ಬಿ. ರಾಜಣ್ಣ, ಅಂತರರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶಾಭಿವೃದ್ಧಿ ಯೋಜನಾಪ್ರಾಧಿಕಾರ ಅಧ್ಯಕ್ಷ ವಿ. ಶಾಂತಕುಮಾರ್, ದೇವನಹಳ್ಳಿ ತಾಲ್ಲೂಕಿನ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಸಿ. ಜಗನ್ನಾಥ್, ಸರ್ಕಾರದ ಕಾರ್ಯದರ್ಶಿ, ಆರ್ಥಿಕ ಇಲಾಖೆ ಆಡಳಿತಾಧಿಕಾರಿಗಳು, ಜಿಲ್ಲಾ ಪಂಚಾಯತ್ ಮತ್ತು ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಪಿ.ಸಿ. ಜಾಫರ್ ಉಪಸ್ಥಿತರಿರಲಿದ್ದಾರೆ.

## ನೀರಿನ ಅದಾಲತ್ ಕಾರ್ಯಕ್ರಮ

ಬೆಂಗಳೂರು

ಕೋಲಾರ ನಗರಸಭೆಯಿಂದ ನಗರದಲ್ಲಿನ ಎಲ್ಲಾ 35 ವಾರ್ಡ್‌ಗಳಲ್ಲಿನ ನೀರಿನ ಅದಾಲತ್ ಕಾರ್ಯಕ್ರಮವನ್ನು ನಗರಸಭೆ ಕಛೇರಿಯಲ್ಲಿ ಮೇ–2026ರ ಮಾಹೆಯಲ್ಲಿ ಮೇ 05, 15 ಮತ್ತು 25 ರಂದು ಬೆಳಿಗ್ಗೆ 10 ಗಂಟೆಯಿಂದ 1 ಗಂಟೆಯವರೆಗೆ ಆಯೋಜಿಸಲಾಗಿರುತ್ತದೆ.

ಕುಡಿಯುವ ನೀರಿನ ಕೊರತೆ, ಲಭ್ಯತೆ ಹಾಗೂ ನೀರು ಸರಬರಾಜು ಸಂಬಂಧಿತ ಸಾರ್ವಜನಿಕ ಅಹವಾಲುಗಳನ್ನು ಪರಿಶೀಲಿಸುವುದಾಗಿದೆ. ತಮ್ಮ ತಮ್ಮ ವಾರ್ಡ್‌ಗಳಲ್ಲಿ ನೀರು ಸರಬರಾಜು ಸಂಬಂಧಿತ ಸಮಸ್ಯೆಗಳು ಮತ್ತು ಅಹವಾಲುಗಳನ್ನು ನೋಂದಾಯಿಸಿಕೊಳ್ಳಬೇಕು. ನೋಂದಾಯಿಸಲಾದ ಅಹವಾಲುಗಳನ್ನು ಗಂಭೀರವಾಗಿ ಪರಿಗಣಿಸಿ, ಸಾಧ್ಯವಾದಷ್ಟು 24 ಗಂಟೆಗಳೊಳಗಾಗಿ ಸಮಸ್ಯೆಯನ್ನು ಪರಿಹರಿಸಲು ಕ್ರಮ ಕೈಗೊಳ್ಳಲಾಗುತ್ತದೆ. ನಗರದ ಎಲ್ಲಾ ನಾಗರಿಕರು ಈ ಕಾರ್ಯಕ್ರಮದ ಸದುಪಯೋಗ ಪಡೆದುಕೊಳ್ಳಬೇಕೆಂದು ನಗರಸಭೆಯ ಪೌರಾಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕಟ್ಟಡಕಾರ್ಮಿಕರಿಗೆ ವಿಶ್ರಾಂತಿ ನೀಡಲು ಸೂಚನೆ

ಬೆಂಗಳೂರು

ಜಿಲ್ಲೆಯಲ್ಲಿ ಬಿಸಿಲಿನ ತಾಪಮಾನಅತೀ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ಕಟ್ಟಡ ಕಾರ್ಮಿಕರಿಗೆ ಮಧ್ಯಾಹ್ನ 1 ರಿಂದ ಮಧ್ಯಾಹ್ನ 3 ಗಂಟೆಯವರೆಗೆ ವಿಶ್ರಾಂತಿ ನೀಡುವುದು ಗುತ್ತಿದಾರರ, ಮಾಲೀಕರ ಜವಾಬ್ದಾರಿಯಾಗಿದೆ ಎಂದು ಕಾರ್ಮಿಕ ಅಧಿಕಾರಿ ತಿಳಿಸಿದ್ದಾರೆ.

ಕಟ್ಟಡ ಕಾಮಗಾರಿ ಸ್ಥಳಗಳಲ್ಲಿ ಕೆಲಸ ಮಾಡುತ್ತಿರುವ ಕಾರ್ಮಿಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ಸಂಭವ ಇರುವುದರಿಂದ, ಕಾರ್ಮಿಕರ ಆರೋಗ್ಯದ ಹಿತದೃಷ್ಟಿ ಹಿನ್ನೆಯಲ್ಲಿ ಮಧ್ಯಾಹ್ನದ ವೇಳೆ ವಿಶ್ರಾಂತಿಗೆ ಅವಕಾಶ ನೀಡುವಂತೆ ಹಾಗೂ ಕಾರ್ಮಿಕರ ಆರೋಗ್ಯವನ್ನು ರಕ್ಷಿಸಿಕೊಳ್ಳಲು ಕೆಲವು ಮಾರ್ಗಸೂಚಿಗಳನ್ನು ಅನುಸರಿಸಲು ಸೂಚಿಸಿದ್ದಾರೆ.

ಕಾರ್ಮಿಕರಿಗೆ ಕುಡಿಯುವ ನೀರಿನ ವ್ಯವಸ್ಥೆ, ಶೌಚಾಲಯ ವ್ಯವಸ್ಥೆ ಮತ್ತು ಪ್ರತಿ ಮೂರು ತಿಂಗಳಿಗೊಮ್ಮೆ ಆರೋಗ್ಯ ತಪಾಸಣೆಯನ್ನು ನೀಡುವುದು ಗುತ್ತಿಗೆದಾರರ, ಮಾಲೀಕರ ಜವಾಬ್ದಾರಿಯಾಗಿದ್ದು, ಈ ಬಗ್ಗೆ ಸೂಕ್ತ ಕ್ರಮವಹಿಸಬೇಕು. ಈ ಕುರಿತು ಯಾವುದೇ ಅಹಿತಕರ ಘಟನೆಗಳು ನಡೆದಲ್ಲಿ ಸಂಬಂಧಿಸಿದ ಗುತ್ತಿಗೆದಾರರು, ಮಾಲೀಕರುಗಳೇ ನೇರ ಹೊಣೆಗಾರರಾಗಿರುತ್ತಾರೆಂದು



ಮಧುಗಿರಿ ಪಟ್ಟಣದ ಶ್ರೀ ಶಂಕರ ಮಠದಲ್ಲಿ ಶ್ರೀ ನರಸಿಂಹಸ್ವಾಮಿಯವರ ಜಯಂತಿ ನಡಸಲಾಯಿತು. ಈ ಸಂಧರ್ಭದಲ್ಲಿ ವೇದ ಬ್ರಹ್ಮ ಶ್ರೀ ಕೆ.ನಾಗರಾಜ್ ಶಾಸ್ತ್ರೀ, ಶಂಕರ ಸೇವಾ ಸಮಿತಿ ಅಧ್ಯಕ್ಷ ಬಿ. ಸತ್ಯನಾರಾಯಣ್, ಬ್ರಾಹ್ಮಣ ಸಂಘದ ತಾಲ್ಲೂಕು ಅಧ್ಯಕ್ಷ ದತ್ತಾತ್ರೇಯ ಖಂಜಾಚಿ ಕೆ.ಲಕ್ಷ್ಮೀ ಪ್ರಸಾದ್, ನಿರ್ದೇಶಕರುಗಳಾದ ಕೆ.ನಾರಾಯಣ್, ಭೀಮೇಶ್ ಶರ್ಮಾ, ವಿಪ್ರ ಸಮುದಾಯದ ಮುಖಂಡರಾದ ನಾಗೇಶ್ವರ್ ರಾವ್, ಅಶ್ವತ್, ಕಿರಣ್, ಚೇತನ್, ಪುರಸಭೆ ಮಾಜಿ ಅಧ್ಯಕ್ಷ ಲಾಲಾಪೇಟೆ ಮಂಜುನಾಥ್, ಅನಂತಕೃಷ್ಣ ರಾಜು, ಭಾಸ್ಕರ್ ಇದ್ದರು.

# ರೈತರ ಮೇಲೆ ಪೋಲಿಸರ ಹಲ್ಲೆ ಖಂಡಿಸಿ ಪ್ರತಿಭಟನೆ

ಬೆಂಗಳೂರು

ಚಿಕ್ಕಬಳ್ಳಾಪುರದ ಜಿಲ್ಲಾ ಕಚೇರಿಯ ಬಳಿ ನ್ಯಾಯಯುತವಾಗಿ ಪ್ರತಿಭಟನೆ ನಡೆಸುತ್ತಿದ್ದ ರೈತರ ಮೇಲೆ ದರ್ಪ ತೋರಿಸಿ ಹಲ್ಲೆ ಮಾಡಿದ ಪೋಲಿಸರನ್ನು ಕೂಡಲೇ ಅಮಾನತ್ತು ಮಾಡುವಂತೆ ಒತ್ತಾಯಿಸಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆ (ಕೋಡಿಹಳ್ಳಿ ಚಂದ್ರಶೇಖರ್ ಬಣ) ವತಿಯಿಂದ ಪಟ್ಟಣದ ಪೊಲೀಸ್ ಠಾಣೆಯ ಮುಂಭಾಗ ಪ್ರತಿಭಟನೆ ನಡೆಸಿ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮುತ್ತುರಾಜ್ ರವರಿಗೆ ಮನವಿ ಪತ್ರ ಸಲ್ಲಿಸಲಾಯಿತು.

ಈ ಸಮಯದಲ್ಲಿ ಮಾತನಾಡಿದ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಜಿಲ್ಲಾಧ್ಯಕ್ಷ ಹೆಚ್.ಪಿ.ರಾಮನಾಥ್, ಸುಮಾರು ದಿನಗಳಿಂದ ನಮ್ಮ ರೈತರು ಕೆಐಡಿಬಿ ಅಧಿಕಾರಿಗಳ ವಿರುದ್ದ ಪ್ರತಿಭಟನೆ ನಡೆಸುತ್ತಿದ್ದೇವೆ.

ಶಿಡ್ಲಘಟ್ಟ ತಾಲೂಕಿನ ಜಂಗಮಕೋಟೆ ಹೋಬಳಿಯ ರೈತರು ಸೇರಿದಂತೆ ಜಿಲ್ಲೆಯ ರೈತರು ಹಾಗೂ ಪ್ರಗತಿಪರ ಸಂಘಟನೆಗಳ ಸಹಯೋಗದಲ್ಲಿ ಶಾಂತಿಯುತ ಚಳುವಳಿ ಮಾಡಲಾಗುತ್ತಿದೆ. ಕಳೆದೆರಡು ದಿನಗಳ ಹಿಂದೆ ಚಿಕ್ಕಬಳ್ಳಾಪುರದಲ್ಲಿ ನಡೆಯುತ್ತಿದ್ದ ಕೆಡಿಪಿ ಸಭೆಯಲ್ಲಿ ಸಚಿವರನ್ನು ಭೇಟಿ ಮಾಡಲು ಹೋದಾಗ ಅಲ್ಲಿದ್ದ ಪೊಲೀಸರು ರೈತರ ಮೇಲೆ ದರ್ಪ ತೋರಿಸಿ ಹಲ್ಲೆ ನಡೆಸಿದ್ದಾರೆ.

ಸುಮಾರು 2823 ಎಕರೆಯಷ್ಟು ಜಮೀನನ್ನು ಕೆಐಡಿಬಿ ರವರು ಭೂ ಸ್ವಾಧೀನ ಪ್ರಕ್ರಿಯೆಯನ್ನು ನಡೆಸುತ್ತಿದ್ದಾರೆ. ಆದರೆ ನಮ್ಮ ರೈತರು ಕೃಷಿ ಯೋಗ್ಯ



ಭೂಮಿಯನ್ನು ನಾವು ಕೊಡುವುದಿಲ್ಲ ಎಂದು ಧರಣಿ ಮಾಡುತ್ತಿದ್ದಾರೆ.

ಈ ಧರಣಿಯನ್ನು ಹತ್ತಿಕ್ಕಲು ಪೊಲೀಸರನ್ನು ಬಳಸಿಕೊಂಡು ರೈತರ ಮೇಲೆ ಹಲ್ಲೆ ಮಾಡಿರುವುದು ಖಂಡನಾರ್ಹ ಎಂದರು.

ಇನ್ನೂ ನಾವು ಕೃಷಿಗೆ ಯೋಗ್ಯವಲ್ಲದ ಭೂಮಿಯಲ್ಲಿ ಕೈಗಾರಿಕಾ ಪ್ರದೇಶ ಮಾಡಿದರೇ ನಾವು ವಿರೋಧ ಮಾಡಲ್ಲ. ಆದರೆ ಕೃಷಿ ಯೋಗ್ಯ ಭೂಮಿಯನ್ನು ಸ್ವಾಧೀನ ಪ್ರಕ್ರಿಯೆ ಮಾಡುತ್ತಿರುವ ಕಾರಣದಿಂದ ರೈತರು ಪ್ರತಿಭಟನೆ ನಡೆಸುತ್ತಿದ್ದಾರೆ.

ಪ್ರತಿಭಟನಾ ನಿರತ ರೈತರಿಗೆ ರಕ್ಷಣೆ ಕೊಡುವಲ್ಲ ಜಿಲ್ಲಾಡಳಿತ ಹಾಗೂ ಪೊಲೀಸ್ ಇಲಾಖೆ ಸಂಪೂರ್ಣ ವಿಫಲವಾಗಿದೆ. ರಕ್ಷಣೆ ಕೊಡಲು ವಿಫಲವಾಗುವುದರ ಜೊತೆಗೆ ಪ್ರತಿಭಟನಾ ನಿರತ ರೈತರ ಮೇಲೆಯೇ ಹಲ್ಲೆ ಮಾಡಿದ್ದಾರೆ. ಈ ಹಿನ್ನೆಲೆಯಲ್ಲಿ ರಾಜ್ಯದಾದ್ಯಂತ ಪೊಲೀಸ್ ಠಾಣೆಗಳ ಮುಂಭಾಗ ಪ್ರತಿಭಟನೆ ನಡೆಸಿ ಮನವಿ ಪತ್ರ ಸಲ್ಲಿಸಲಾಗಿದೆ. ಕೂಡಲೇ ರೈತರ ಮೇಲೆ ಹಲ್ಲೆ ನಡೆಸಿದ ಎಲ್ಲಾ ಪೊಲೀಸರನ್ನು ಅಮಾನತ್ತು ಮಾಡಬೇಕು ಇಲ್ಲವಾದಲ್ಲಿ ಮತ್ತಷ್ಟು ಉಗ್ರ ಹೋರಾಟಕ್ಕೆ ಮುಂದಾಗಬೇಕಾಗುತ್ತದೆ ಎಂದು ಎಚ್ಚರಿಕೆ ನೀಡಿದರು.

ಈ ಸಮಯದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ತಾಲೂಕು ಅಧ್ಯಕ್ಷ ಸೋಮಶೇಖರ್, ಉಪಾಧ್ಯಕ್ಷ ರವೀಂದ್ರರೆಡ್ಡಿ, ಗೌರವಾಧ್ಯಕ್ಷ ವೆಂಕಟರೋಣಪ್ಪ, ಮುಖಂಡರಾದ ರಾಮರೆಡ್ಡಿ, ಶ್ರೀನಿವಾಸ್, ಶಿವಪ್ಪ, ಚೌಡರೆಡ್ಡಿ, ವೆಂಕಟರೆಡ್ಡಿ, ದೇವರಾಜು ಸೇರಿದಂತೆ ಹಲವರು ಇದ್ದರು.

# ಕಾಮಸಮುದ್ರ ರೈಲ್ವೆ ಗೇಟ್ ಬಳಿ ಮೇಲುಸೇತುವೆಗಾಗಿ ಪ್ರತಿಭಟನೆ



ಬೂದಿಕೋಟೆ

ತಾಲೂಕಿನ ಕಾಮಸಮುದ್ರ ರೈಲ್ವೆ ಗೇಟ್ ಬಳಿ ಮೇಲುಸೇತುವೆ ನಿರ್ಮಿಸಲು ಅನುದಾನ ಬಿಡುಗಡೆ ಮಾಡಿ, ಸಾರ್ವಜನಿಕರಿಗೆ ಆಗುತ್ತಿರುವ ತೊಂದರೆ ನಿವಾರಿಸುವಂತೆ ಆಗ್ರಹಿಸಿ ಮೇ 4ರಂದು ರೈತ ಸಂಘದಿಂದ ಪ್ರತಿಭಟನೆ ನಡೆಸಲು ತೀರ್ಮಾನಿಸಲಾಗಿದೆ ಎಂದು ರೈತ ಸಂಘದ ರಾಜ್ಯ ಉಪಾಧ್ಯಕ್ಷ ಕೆ. ನಾರಾಯಣಗೌಡ ತಿಳಿಸಿದ್ದಾರೆ.

ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, “ಬೆಂಗಳೂರು–ಚೆನ್ನೈ ಮಾರ್ಗಕ್ಕೆ ಸಂಪರ್ಕ ಕಲ್ಪಿಸುವ ಕಾಮಸಮುದ್ರ ರೈಲ್ವೆ ಗೇಟ್ ಬಳಿ ಮೇಲುಸೇತುವೆ ನಿರ್ಮಾಣದ ಬೇಡಿಕೆಯನ್ನು ಕಳೆದ ಎರಡು ದಶಕಗಳಿಂದ ರೈತರು, ಕೂಲಿಕಾರ್ಮಿಕರು ಹಾಗೂ ಸ್ಥಳೀಯರು ಮುಂದಿಟ್ಟಿದ್ದರೂ ಸಮಸ್ಯೆಯನ್ನು ಗಂಭೀರವಾಗಿ ಪರಿಗಣಿಸಲಾಗಿಲ್ಲ” ಎಂದು ಆರೋಪಿಸಿದರು.

“ಪ್ರತಿದಿನ ಗೇಟ್ ಸುಮಾರು 30 ನಿಮಿಷಕ್ಕೊಮ್ಮೆ ಮುಚ್ಚಲಾಗುವುದರಿಂದ ವಿದ್ಯಾರ್ಥಿಗಳು, ರೈತರು ಹಾಗೂ ಸಾರ್ವಜನಿಕರು ತೀವ್ರ ತೊಂದರೆ ಅನುಭವಿಸುತ್ತಿದ್ದಾರೆ. ತುರ್ತು ಪರಿಸ್ಥಿತಿಗಳಲ್ಲಿಯೂ ಸಂಚಾರ ಅಡಚಣೆ ಉಂಟಾಗಿ ಅಪಘಾತಗಳು ಹಾಗೂ ಆರೋಗ್ಯ ಸಮಸ್ಯೆಗಳು ಎದುರಾಗುತ್ತಿವೆ. ರೈತರು ತರಕಾರಿ ಸಾಗಿಸಲು ಕೂಡ ಸಂಕಷ್ಟ ಪಡುತ್ತಿದ್ದಾರೆ” ಎಂದು ಹೇಳಿದರು.

ಸಂಸದರು ಈಗಾಗಲೇ ಕೇಂದ್ರ ರೈಲ್ವೆ ಸಚಿವರೊಂದಿಗೆ ಚರ್ಚಿಸಿ ಮೇಲುಸೇತುವೆ ನಿರ್ಮಾಣಕ್ಕೆ –28 ಕೋಟಿ ಅನುದಾನ ಮಂಜೂರು ಮಾಡಿಸಿಕೊಂಡಿದ್ದು, ಸಂಬಂಧಪಟ್ಟ ಅಧಿಕಾರಿಗಳು ಸ್ಥಳ ಪರಿಶೀಲನೆ ನಡೆಸಿ ಅಗತ್ಯ ಭೂಸ್ವಾಧೀನ ಪ್ರಕ್ರಿಯೆ ಪೂರ್ಣಗೊಳಿಸಿ ಕಾಮಗಾರಿ ಆರಂಭಿಸಬೇಕು ಎಂದು ಒತ್ತಾಯಿಸಿದರು.

ತಾ. ಅಧ್ಯಕ್ಷ ಕದರಿನತ್ತ ಅಪ್ಪೂಜಿರಾವ್ ಮಾತನಾಡಿ, “ರೈಲು ನಿಲ್ದಾಣಗಳಲ್ಲಿ ನೀರು, ಶೌಚಾಲಯ ಹಾಗೂ ಸ್ವಚ್ಛತೆ ಸೇರಿದಂತೆ ಮೂಲಭೂತ ಸೌಕರ್ಯಗಳ ಕೊರತೆ ಇದೆ. ರೈಲುಗಳಲ್ಲಿ ಭದ್ರತೆ ಕಡಿಮೆಯಾಗಿದ್ದು, ಟಿಕೆಟ್ ಇಲ್ಲದೇ ಪ್ರಯಾಣಿಸುವವರ ಸಂಖ್ಯೆ ಹೆಚ್ಚುತ್ತಿದೆ. ಭೋಗಿಗಳಲ್ಲಿ ಶೌಚಾಲಯ ಸ್ವಚ್ಛತೆ ಇಲ್ಲ, ಕುಡಿಯುವ ನೀರಿನ ವ್ಯವಸ್ಥೆಯೂ ಇಲ್ಲ. ಪ್ರಯಾಣಿಕರು ಸಂಕಷ್ಟ ಅನುಭವಿಸುತ್ತಿದ್ದಾರೆ” ಎಂದು ಆರೋಪಿಸಿದರು.

ಈ ಎಲ್ಲಾ ಸಮಸ್ಯೆಗಳ ಪರಿಹಾರಕ್ಕಾಗಿ ಮೇ 4ರಂದು ಕಾಮಸಮುದ್ರ ರೈಲ್ವೆ ಗೇಟ್ ಎದುರು ಪ್ರತಿಭಟನೆ ನಡೆಸಿ ನ್ಯಾಯ ಪಡೆಯಲು ನಿರ್ಧರಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಜಿಲ್ಲಾ ಅಧ್ಯಕ್ಷ ಈಕಂಬಳ್ಳಿ ಮಂಜುನಾಥ, ಕಾಮಸಮುದ್ರ ಹೋಬಳಿ ಅಧ್ಯಕ್ಷ ಮುನಿಕೃಷ್ಣ, ಬೀಮಗಾನಹಳ್ಳಿ ಮುನಿರಾಜು, ಸಂತೋಷ್, ಲಕ್ಷ್ಮಣ್, ಗೋವಿಂದಪ್ಪ, ಪುತ್ತೇರಿರಾಜು, ಗಿರೀಶ್, ಕಿರಣ್, ಚಾಂದ್ ಪಾಷ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ಬೆಂಗಳೂರು ಮಳೆ: ಸಾವಿನ ಸಂಖ್ಯೆ 10ಕ್ಕೆ ಏರಿಕೆ

ಬೆಂಗಳೂರು

ಮಳೆಯ ಅವಾಂತರಕ್ಕೆ ಬೆಂಗಳೂರಿನಲ್ಲಿ ಮೃತಪಟ್ಟವರ ಸಂಖ್ಯೆ 10ಕ್ಕೆ ಏರಿಕೆಯಾಗಿದೆ. ಮನೆಯ ಮೇಲ್ಛಾವಣಿ, ಸಿಮೆಂಟ್ ಇಟ್ಟಿಗೆ ಬಿದ್ದು ವ್ಯಕ್ತಿಯೋರ್ವ ಮೃತಪಟ್ಟಿರುವ ಘಟನೆ ಚಾಮರಾಜಪೇಟೆ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ನಡೆದಿದೆ. ಮೃತ ವ್ಯಕ್ತಿಯನ್ನು ಮಂಜುನಾಥ್ ಎಂದು ಗುರುತಿಸಲಾಗಿದ್ದು, ವಿಕ್ಟೋರಿಯಾ ಆಸ್ಪತ್ರೆಗೆ ಮಂಜುನಾಥ್ ಮೃತದೇಹ ಶಿಫ್ಟ್ ಮಾಡಲಾಗಿದೆ. ಮನೆಯ ಮೇಲಿನ ಶೀಟ್ ಹಾರದಂತೆ ಕಲ್ಲು ಇಡಲಾಗಿತ್ತು. ಗಾಳಿ ಮಳೆಗೆ ಶೀಟ್ ಬಿದ್ದಿದ್ದು ಈ ವೇಳೆ ಶೀಟ್ ಮೇಲಿಟ್ಟಿದ್ದ ಕಲ್ಲು ಮನೆಯಲ್ಲಿ ಮಲಗಿದ್ದ ಮಂಜುನಾಥ್ ಮೇಲೆ ಬಿದ್ದ ಪರಿಣಾಮ ಸಾವು ಸಂಭವಿಸಿದೆ.

ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಕುಸಿದು ಸಂಭವಿಸಿದ ಘೋರ ದುರಂತದಲ್ಲಿ ಮಗು ಸೇರಿ ಒಟ್ಟು 7 ಜನ ದಾರುಣವಾಗಿ ಮೃತಪಟ್ಟಿದ್ದರು. ಬೆಂಗಳೂರಿನ ಜೆಸಿ ನಗರದ ಮೊಹಮ್ಮದ್ ಅಬ್ದುಲ್ (52), ಡಿ.ಜೆ. ಹಳ್ಳಿಯ ಫಯಾಜ್ ಅಹ್ಮದ್ (39), ಕೆ.ಜೆ.ಹಳ್ಳಿಯ ಮುಸಾವಿರ್ ಬೇಗಂ (6), ಕೇರಳದ ಎರ್ನಾಕುಲಂನ ಸ್ಮಿತಾ (47) ಹಾಗೂ ಲತಾ (57), ಕಾರ್ ಸ್ಟಿಕ್ಕರಿಂಗ್ ಕೆಲಸ ಮಾಡುತ್ತಿದ್ದ ಅಸ್ಸಾಂನ ನಸೀಮುಲ್ಲಾ (19) ಮತ್ತು ಉತ್ತರ ಪ್ರದೇಶದ ವ್ಯಾಪಾರಿ ಸಲಾವುದ್ದೀನ್ ಅನ್ಸಾರಿ (36) ಅವಘಡದಲ್ಲಿ ಪ್ರಾಣಬಿಟ್ಟಿದ್ದರು. ಗಾಳಿ ಮಳೆಯ ಕಾರಣಕ್ಕೆ ಪಾದಚಾರಿಗಳು ಮತ್ತು ಬೀದಿ ಬದಿಯ ವ್ಯಾಪಾರಿಗಳು ಬೌರಿಂಗ್ ಆಸ್ಪತ್ರೆಯ ಹಳೆಯ ಕಾಂಪೌಂಡ್ ಗೋಡೆಯ ಕೆಳಗೆ ಆಶ್ರಯ ಪಡೆದಿದ್ದರು. ಮಳೆಯ ತೀವ್ರತೆಗೆ ದುರ್ಬಲವಾಗಿದ್ದ ಗೋಡೆ ಏಕಾಏಕಿ ಕುಸಿದ ಪರಿಣಾಮ ಅವಶೇಷಗಳಡಿ ಸಿಲುಕಿದವರ ಪೈಕಿ 7 ಮಂದಿ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದರು.

## ಸಬ್‌ಇನ್ಸ್‌ಪೆಕ್ಟರ್ ಸಿ.ನಾರಾಯಣಸ್ವಾಮಿರಿಗೆ

# ಬೀಳ್ಕೊಡುಗೆ

ಬೆಂಗಳೂರು



ಬೆಂಗಳೂರು

ಪೊಲೀಸ್ ಇಲಾಖೆಯಲ್ಲಿ ಸುಮಾರು 36 ವರ್ಷಗಳ ಕಾಲ ಕರ್ತವ್ಯನಿಷ್ಠೆಯಿಂದ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದ ಚಿಂತಾಮಣಿ ಗ್ರಾಮಾಂತರ ಪೊಲೀಸ್ ಠಾಣೆಯ ಸಬ್ ಇನ್ಸ್‌ಪೆಕ್ಟರ್ ಸಿ.ನಾರಾಯಣಸ್ವಾಮಿ ಅವರಿಗೆ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಕಚೇರಿಯಲ್ಲಿ ಗೌರವಪೂರ್ಣವಾಗಿ ಬೀಳ್ಕೊಡುಗೆ ನೀಡಲಾಯಿತು.

ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಸಮಾರಂಭದಲ್ಲಿ ಮಾತನಾಡಿದ ಆಡಳಿತಾಧಿಕಾರಿ ಎಸ್. ಅಶೋಕ್, “ವಿಭಾಗದಲ್ಲಿ ಸೇವೆ ಸಲ್ಲಿಸಿದವರನ್ನು ಇಲಾಖೆ ಎಂದಿಗೂ ಮರೆಯುವುದಿಲ್ಲ. ತಮ್ಮ ಕರ್ತವ್ಯವನ್ನು ಶ್ರದ್ಧೆ ಮತ್ತು ಪ್ರಾಮಾಣಿಕತೆಯಿಂದ ನಿರ್ವಹಿಸಿದ ಸಿ. ನಾರಾಯಣಸ್ವಾಮಿ ಅವರು ಅಧಿಕಾರಿಗಳು ಮತ್ತು ಸಾರ್ವಜನಿಕರ ವಿಶ್ವಾಸ ಗಳಿಸಿದ್ದಾರೆ. ಅವರ ಸೇವೆ ಇಲಾಖೆಗೆ ಹೆಮ್ಮೆಯಾಗಿದೆ. ನಿವೃತ್ತಿ ಜೀವನ ಸುಖಕರ ಹಾಗೂ ಆರೋಗ್ಯಕರವಾಗಿರಲಿ” ಎಂದು ಶುಭ ಹಾರೈಸಿದರು.

ಬಳಿಕ ಸನ್ಮಾನ ಸ್ವೀಕರಿಸಿ ಮಾತನಾಡಿದ ಸಿ. ನಾರಾಯಣಸ್ವಾಮಿ, “ನನ್ನ ಸೇವಾ ಅವಧಿಯಲ್ಲಿ ಯಾವುದೇ ಕಪ್ಪು ಚುಕ್ಕೆ ಬಾರದಂತೆ ಹಿರಿಯ ಅಧಿಕಾರಿಗಳ ಮಾರ್ಗದರ್ಶನದಲ್ಲಿ ಕೆಲಸ ಮಾಡಿದ್ದೇನೆ ಎಂಬ ಆತ್ಮತೃಪ್ತಿ ಇದೆ. ಕರ್ತವ್ಯವನ್ನು ಮೊದಲಿಗೆಯಾಗಿ ಕಂಡು ಕುಟುಂಬದ ಹಲವು ಕಾರ್ಯಕ್ರಮಗಳಲ್ಲಿ ಭಾಗಿಯಾಗಲು ಸಾಧ್ಯವಾಗಲಿಲ್ಲ ಎಂಬ ನೋವು ಇದೆ. ಆದರೂ ನನಗೆ ನೀಡಿದ ಎಲ್ಲಾ ಜವಾಬ್ದಾರಿಗಳನ್ನು ನಿಷ್ಠೆಯಿಂದ ನಿರ್ವಹಿಸಿದ್ದೇನೆ. ಈ ಸೇವೆ ಅವಕಾಶ ನೀಡಿದ ಪೊಲೀಸ್ ಇಲಾಖೆಗೆ ನಾನು ಸದಾ ಋಣಿ” ಎಂದು ಹೇಳಿದರು.

ತಮ್ಮ ವೃತ್ತಿಜೀವನವನ್ನು ಚಿಕ್ಕಬಳ್ಳಾಪುರ ನಗರ ಪೊಲೀಸ್ ಠಾಣೆಯಲ್ಲಿ ಆರಂಭಿಸಿದ ಅವರು, ಬಳಿಕ ಬಾಗೇಪಲ್ಲಿ, ಚಿಕ್ಕಬಳ್ಳಾಪುರ ಗ್ರಾಮಾಂತರ, ಶಿಡ್ಲಘಟ್ಟ ನಗರ, ಮಂಚೇನಹಳ್ಳಿ ಹಾಗೂ ಚಿಂತಾಮಣಿ ಗ್ರಾಮಾಂತರ ಠಾಣೆಗಳಲ್ಲಿ ಸೇವೆ ಸಲ್ಲಿಸಿ 36 ವರ್ಷಗಳಿಗೂ ಅಧಿಕ ಅವಧಿಯನ್ನು ಯಶಸ್ವಿಯಾಗಿ ಪೂರ್ಣಗೊಳಿಸಿದ್ದಾರೆ.

ಸಮಾರಂಭದಲ್ಲಿ ಅವರಿಗೆ ಶಾಲು ಹೊದಿಸಿ, ಹಣ್ಣು–ಹಂಪಲು, ಸ್ಮರಣಿಕೆ ಹಾಗೂ ಸೇವಾ ಪ್ರಮಾಣಪತ್ರ ನೀಡಿ ಗೌರವಿಸಲಾಯಿತು.

ಈ ಸಂದರ್ಭದಲ್ಲಿ ಅವರ ಪತ್ನಿ ಲಕ್ಷ್ಮಿ ನಾರಾಯಣಸ್ವಾಮಿ, ಪುತ್ರರಾದ ಮಂಜುನಾಥ್ ಮತ್ತು ಚಂದನ್ ಸೇರಿದಂತೆ ಶಾಖಾ ಅಧೀಕ್ಷಕರಾದ ಶ್ರೀನಿವಾಸರೆಡ್ಡಿ, ಮಹದೇವ್, ಆಪ್ತ ಸಹಾಯಕಿ ಶಹತಾಜ್ ಹಾಗೂ ಸಿಬ್ಬಂದಿ ರವಿಶಂಕರ್ ನಾಯಕ್ ಮತ್ತು ಇತರರು ಉಪಸ್ಥಿತರಿದ್ದರು.

# ಪಕ್ಷದ ಸಂಘಟನೆಗೆ ಶ್ರಮಿಸಲು ಜಿಲ್ಲಾಧ್ಯಕ್ಷ ಹೆಚ್.ನಿಂಗಪ್ಪ ಮನವಿ

ಬೆಂಗಳೂರು

ನಗರಸಭೆ ಮಾಜಿ ಅಧ್ಯಕ್ಷ ಟಿ.ಹೆಚ್. ಜಯರಾಮ್ ಅವರು ತುಮಕೂರು ನಗರ ಜೆಡಿಎಸ್ ಅಧ್ಯಕ್ಷರಾಗಿ ನೂತನವಾಗಿ ನೇಮಕವಾದರು.

ಗುರುವಾರ ನಗರದ ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ನಡೆದ ಸಭೆಯಲ್ಲಿ ಪಕ್ಷದ ಜಿಲ್ಲಾಧ್ಯಕ್ಷ ಹೆಚ್. ನಿಂಗಪ್ಪ ಅವರು ಟಿ.ಹೆಚ್. ಜಯರಾಮ್ ಅವರನ್ನು ನಗರ ಅಧ್ಯಕ್ಷರನ್ನಾಗಿ ನೇಮಕ ಮಾಡಿ, ನೇಮಕಾತಿ ಪತ್ರ ವಿತರಿಸಿದರು.

ಈ ವೇಳೆ ಮಾತನಾಡಿದ ಜಿಲ್ಲಾಧ್ಯಕ್ಷ ಹೆಚ್. ನಿಂಗಪ್ಪ, ವಿವಿಧ ಘಟಕಗಳ ಪದಾಧಿಕಾರಿಗಳನ್ನು ಮುಂದಿನ ದಿನಗಳಲ್ಲಿ ನೇಮಕ ಮಾಡಲಾಗುವುದು. ಪಕ್ಷದಲ್ಲಿ ಹಲವಾರು ವರ್ಷಗಳಿಂದ ದುಡಿದ ಬಹಳಷ್ಟು ಹಿರಿಯರಿದ್ದಾರೆ. ಎಲ್ಲರಿಗೂ ಅಧಿಕಾರ ನೀಡಲು ಅವಕಾಶವಾಗುವುದಿಲ್ಲ. ಆದರೆ ನೇಮಕವಾದ ಪದಾಧಿಕಾರಿಗಳೊಂದಿಗೆ ಉಳಿದವರು ಸಹಕರಿಸಿ ಪಕ್ಷ ಸಂಘಟನೆಗೆ ಕಾಳಜಿವಹಿಸಬೇಕು ಎಂದು ಮನವಿ ಮಾಡಿದರು.

ಮುಂಬರುವ ಸ್ಥಳೀಯ ಸಂಸ್ಥೆಗಳ ಚುನಾವಣೆಗೆ ಜೆಡಿಎಸ್ ಅನ್ನು ಬಲಪಡಿಸಿ ಅಧಿಕಾರ ಹಿಡಿಯಲು ಎಲ್ಲಾ ಮುಖಂಡರು, ಕಾರ್ಯಕರ್ತರು ಶ್ರಮಿಸಬೇಕು. ಮುಂದಿನ ವಿಧಾನಭಾ ಚುನಾವಣೆಯಲ್ಲಿ ಮೈತ್ರಿ ಪಕ್ಷವನ್ನು ರಾಜ್ಯದಲ್ಲಿ ಅಧಿಕಾರಕ್ಕೆ ತರಬೇಕು. ಹೆಚ್.ಡಿ. ಕುಮಾರಸ್ವಾಮಿಯವರು ಮತ್ತೊಮ್ಮೆ ಮುಖ್ಯಮಂತ್ರಿಯಾಗಬೇಕು ಎಂಬ ಕಾರ್ಯಕರ್ತರ ಅಪೇಕ್ಷೆ ಈಡೇರಲಿ ಎಂದು ಹೇಳಿದರು.

ಜೆಡಿಎಸ್ ಜಿಲ್ಲಾ ಕಾರ್ಯಾಧ್ಯಕ್ಷ ಟಿ.ಆರ್. ನಾಗರಾಜು, ಮುಖಂಡರಾದ ಟಿ.ಎಲ್. ಕುಂಭಯ್ಯ, ಎಸ್. ಪುಟ್ಟೀರಪ್ಪ, ರಾಜ್ಯ ಹಿರಿಯ ಉಪಾಧ್ಯಕ್ಷ ಗಂಗಣ್ಣ, ರಾಜ್ಯ ಎಸ್ಸಿ ಘಟಕ ಕಾರ್ಯದರ್ಶಿ ಸೋಲಾರ್ ಕೃಷ್ಣಮೂರ್ತಿ, ನಿಕಟಪೂರ್ವ ನಗರ ಅಧ್ಯಕ್ಷ ವಿಜಯ್‌ಗೌಡ, ನಗರಸಭೆ ಮಾಜಿ ಉಪಾಧ್ಯಕ್ಷ ಶ್ರೀನಿವಾಸ್‌ಪ್ರಸಾದ್, ಮಾಜಿ ಸದಸ್ಯರಾದ ಟಿ.ಜಿ. ನರಸಿಂಹರಾಜು, ಟಿ.ಎ. ಬಾಲಕೃಷ್ಣ, ಮೋಹನ್‌ಕುಮಾರ್, ಶ್ರೀನಿವಾಸ್, ಮುಖಂಡರಾದ ಯೋಗಾನಂದಕುಮಾರ್,

# ಬರಗಾಲದಲ್ಲೂ ಬತ್ತದ ‘ಮುನಿಯಮ್ಮ ಬಾವಿ’ ಮೂಕ ಪ್ರಾಣಿಗಳಿಗೆ ಜೀವನಾಡಿ

ಬೂದಿಕೋಟೆ

ರಾಜ್ಯದ ಹಲವೆಡೆ ಬರಗಾಲ ತೀವ್ರಗೊಂಡು ಕೆರೆ–ಕುಂಟೆಗಳು ಸಂಪೂರ್ಣ ಒಣಗಿರುವ ಈ ಸಂದರ್ಭದಲ್ಲೂ ತಾಲೂಕಿನ ಆಲಂಬಡಿ ಗ್ರಾಮದ ‘ಮುನಿಯಮ್ಮ ಬಾವಿ’ ಮಾತ್ರ ಬಿರು ಬಿಸಿಲಿನಲ್ಲೂ ನೀರನ್ನು ಉಳಿಸಿಕೊಂಡು ಅಚ್ಚರಿ ಮೂಡಿಸಿದೆ. ಬೇಸಿಗೆ ಕಾಲದಲ್ಲಿಯೂ ನೀರಿನ ಕೊರತೆ ಇಲ್ಲದೆ ಜೀವಂತವಾಗಿರುವ ಈ ಬಾವಿ, ಸುತ್ತಮುತ್ತಲಿನ ರೈತರು ಹಾಗೂ ಮೂಕ ಪ್ರಾಣಿಗಳಿಗೆ ಜೀವನಾಡಿಯಾಗಿ ಪರಿಣಮಿಸಿದೆ.

ಸುಮಾರು 300 ವರ್ಷಗಳ ಇತಿಹಾಸ ಹೊಂದಿರುವ ಈ ಬಾವಿ, ಸುತ್ತಮುತ್ತಲಿನ



ಜಲಾಶಯಗಳು ಬತ್ತಿಹೋಗಿದ್ದರೂ ನೀರನ್ನು ಉಳಿಸಿಕೊಂಡಿರುವುದು ವಿಶೇಷ. ಮಳೆಯ ಕೊರತೆಯಿಂದ ದನ–ಕರುಗಳು, ಕುರಿ–ಮೇಕೆಗಳಿಗೆ ನೀರಿನ ಅಭಾವ ಉಂಟಾಗಿರುವ ಸಂದರ್ಭದಲ್ಲಿ, ಈ ಬಾವಿಯ ನೀರು ಅವುಗಳಿಗೆ ಅಮೃತದಂತೆ ಪರಿಣಮಿಸಿದೆ.

ಬಿಸಿಲಿನ ತಾಪಮಾನ ದಿನದಿಂದ ದಿನಕ್ಕೆ ಏರಿಕೆಯಾಗುತ್ತಿರುವ ಹಿನ್ನೆಲೆ, ರೈತರು ಮತ್ತು ಹೈನುಗಾರಿಕೆ ನಡೆಸುವವರು ಸಂಕಷ್ಟಕ್ಕೆ ಸಿಲುಕಿದ್ದಾರೆ. ಕೃಷಿ ಚಟುವಟಿಕೆಗಳು ಕುಂಠಿತಗೊಂಡಿರುವ ಈ ಪರಿಸ್ಥಿತಿಯಲ್ಲಿ, ಆಲಂಬಡಿ ಗ್ರಾಮದ ಮುನಿಯಮ್ಮ ಬಾವಿ ಗ್ರಾಮಸ್ಥರಿಗೆ ಆಶಾಕಿರಣವಾಗಿದೆ.

ಸುತ್ತಮುತ್ತಲಿನ ಹಲವು ಗ್ರಾಮಗಳ ರೈತರು ತಮ್ಮ ಪಶುಗಳಿಗೆ ನೀರು ಒದಗಿಸಲು ಈ ಬಾವಿಯನ್ನೇ ಅವಲಂಬಿಸಿಕೊಂಡಿದ್ದಾರೆ. ಪ್ರತಿದಿನವೂ ಅನೇಕರು ತಮ್ಮ ದನ–ಕರುಗಳನ್ನು ಕರೆದುಕೊಂಡು ಬಂದು ಇಲ್ಲಿ ನೀರು ಕುಡಿಸುತ್ತಿರುವ ದೃಶ್ಯ ಸಾಮಾನ್ಯವಾಗಿದೆ. “ಕೆರೆಗಳು ಬತ್ತಿದರೂ ಮುನಿಯಮ್ಮ ಬಾವಿ ಎಂದಿಗೂ ಬತ್ತುವುದಿಲ್ಲ. ನಮ್ಮ ಪಶುಗಳಿಗೂ ಬದುಕಿಗೂ ಇದು ದೊಡ್ಡ ಆಧಾರವಾಗಿದೆ” ಎಂದು ಸ್ಥಳೀಯರು ಹೇಳುತ್ತಾರೆ.

ಗ್ರಾಮದ ಹಿರಿಯರ ಪ್ರಕಾರ, ಹಲವು ದಶಕಗಳಿಂದ ಬರಗಾಲದ ಸಂದರ್ಭಗಳಲ್ಲಿ ಈ ಬಾವಿ ಜನರಿಗೆ ನೆರವಾಗುತ್ತ ಬಂದಿದೆ. ಈ ಹಿನ್ನೆಲೆದಲ್ಲಿ ಐತಿಹಾಸಿಕ ಮಹತ್ವ ಹೊಂದಿರುವ ಮುನಿಯಮ್ಮ ಬಾವಿಯ ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಸರ್ಕಾರ ಮುಂದಾಗಬೇಕು ಎಂಬುದು ಗ್ರಾಮಸ್ಥರ ಒತ್ತಾಯವಾಗಿದೆ.

ಬರಗಾಲದ ಕಠಿಣ ಸಮಯದಲ್ಲಿಯೂ ‘ಮುನಿಯಮ್ಮ ಬಾವಿ’ ಗ್ರಾಮೀಣ ಬದುಕಿಗೆ ಆಶೆಯ ಸಂಕೇತವಾಗಿ ಬೆಳಗುತ್ತಿದೆ.

ಭಾರತ ಸಾರಥಿ
02/05/2026
BHARATHA SARATHI KANNADA DAILY NEWS PAPER
ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ
ಇ-ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

## ಶ್ರೀ ವೇದ ಮಾತೆ ತ್ರಿಪಾದ ಗಾಯತ್ರಿ ದೇವಿಗೆ ವಿಶೇಷ ಅಲಂಕಾರ



ಮಾಲೂರು

ನಗರದ ಮಾಲೂರು ಬೆಂಗಳೂರು ರಸ್ತೆಯ ರಿಲಯನ್ಸ್ ಪೆಟ್ರೋಲ್ ಬಂಕ್ ಬಳಿ ಇರುವ ಶ್ರೀ ಶ್ರೀ ಶ್ರೀ ತ್ರಿಪಾದ ಗಾಯತ್ರಿದೇವಿ ದೇವಾಲಯದಲ್ಲಿ 20ನೇ ವರ್ಷದ ವಾರ್ಷಿಕೋತ್ಸವದ ಪ್ರಯುಕ್ತ ಶ್ರೀ ವೇದ ಮಾತೆ ತ್ರಿಪಾದ ಗಾಯತ್ರಿ ದೇವಿಗೆ ವಿಶೇಷ ಆಭರಣ ಸಮೇತ ಹೂವಿನ ಅಲಂಕಾರ ಮಾಡಲಾಗಿತ್ತು ಭಕ್ತಾದಿಗಳು ದೇವಾಲಯಕ್ಕೆ ಆಗಮಿಸಿ ದೇವಿಯ ದರ್ಶನ ಪಡೆದು ತೀರ್ಥ ಪ್ರಸಾದ ಸ್ವೀಕರಿಸಿದರು.

ನಗರದ ಮಾಲೂರು ಬೆಂಗಳೂರು ರಸ್ತೆಯ ರಿಲಯನ್ಸ್ ಪೆಟ್ರೋಲ್ ಬಂಕ್ ಬಳಿ ಇರುವ ಗಾಯತ್ರಿ ದೇವಿ ದೇವಾಲಯದಲ್ಲಿ 20ನೇ ವರ್ಷದ ವಾರ್ಷಿಕೋತ್ಸವ ಪ್ರಯುಕ್ತ ಬುಧುವಾರ ದೇವಾಲಯದ ಪ್ರಧಾನ ಅರ್ಚಕ ಚೇತನ್ ಆಚಾರ್ಯ ಅವರ ಅರ್ಚಕತ್ವದಲ್ಲಿ ವಿವಿಧ ಪೂಜಾ ಕೈಕಾರ್ಯಗಳೊಂದಿಗೆ ಆರಂಭವಾಗಿ ಗುರುವಾರ ಬೆಳಗ್ಗೆ ಸುಪ್ರಭಾತ ಸೇವೆ, ವೇದಪಾರಾಯಣ, ಗಣಪತಿ ಹೋಮ, ಗಾಯತ್ರಿ ದೇವಿಯ ಪ್ರಧಾನ ಹೋಮ, ಶಾಂತಿ ಹೋಮ, ಮಹಾ ಪೂರ್ಣಾವತಿ, ಮಹಾಸಂಕಲ್ಪ ಸಮೇತ ಕುಂಕುಮರ್ಚನೆ, ಕಳಶಗಳ ಉದ್ಘಾಟನೆ ಕಳಶಗಳ ಪ್ರದಕ್ಷಿಣೆ, ಮಹಾಕುಂಭಾಭಿಷೇಕ, ಹಾಲಿನ ಅಭಿಷೇಕ, ಪಂಚಾಮೃತ ಅಭಿಷೇಕ, ಅಷ್ಟಾವಧಾನ ಸೇವೆ ಮಹಾನೈವದ್ಯ, ಮಹಾಮಂಗಳಾರತಿ ನಂತರ ತೀರ್ಥ ಪ್ರಸಾದ ವಿನಿಯೋಗಿಸಲಾಯಿತು.

ಬೆಳಗ್ಗೆ ಸುಮಂಗಲರಿಂದ ಲಲಿತ ಸಹಸ್ರನಾಮ ಪಾರಾಯಣ, ಮಧ್ಯಾಹ್ನ 12 ಗಂಟೆಗೆ ಅನ್ನ ಪ್ರಸಾದವನ್ನು ಸಹ ಏರ್ಪಡಿಸಲಾಗಿತ್ತು ಸಂಜೆ ಅಮ್ಮನವರ ಗ್ರಾಮ ಪ್ರದಕ್ಷಿಣೆ ನಡೆಯಿತು.

ವಾರ್ಷಿಕೋತ್ಸವ ಪ್ರಯುಕ್ತ ಭಕ್ತಾದಿಗಳು ದೇವಾಲಯಕ್ಕೆ ಆಗಮಿಸಿ ದೇವರ ದರ್ಶನ ಪಡೆದು ತೀರ್ಥ ಪ್ರಸಾದ ಸ್ವೀಕರಿಸಿದರು.

### ಹಸ್ತ ಪ್ರತಿಗಳ ಸಂರಕ್ಷಣೆ, ಡಿಜಿಟಲೀಕರಣ

## ಕಾರ್ಯ ಯೋಜನೆಗೆ ಸಹಕರಿಸಲು ಸೂಚನೆ

ರಾಮನಗರ

ಕೇಂದ್ರ ಸರ್ಕಾರದ ಜ್ಞಾನನ ಭಾರತಂ ಮಿಷನ್ ಯೋಜನೆಯಡಿ ಇಡೀ ದೇಶದಲ್ಲಿರುವ ಹಸ್ತಪ್ರತಿಗಳ ಮಾಹಿತಿಯನ್ನು ಕೇಂದ್ರ ಸರ್ಕಾರವು ಅಭಿವೃದ್ಧಿಪಡಿಸಿರುವ ಮೊಬೈಲ್ ಅಪ್ಲಿಕೇಷನ್‌ನಲ್ಲಿ ಅಪ್ಲೋಡ್ ಮಾಡುವ ಮೂಲಕ ಸಂಗ್ರಹಣೆಗೊಳ್ಳುವ ರಾಷ್ಟ್ರೀಯ ಭಂಡಾರವು ದತ್ತಾಂಶದ ಮಾಹಿತಿಯನ್ನು ವಿಶ್ವಕ್ಕೆ ಹಂಚಿಕೊಳ್ಳುವ ಉದ್ದೇಶದಿಂದ ಈ ಯೋಜನೆಯನ್ನು ಜಾರಿಗೊಳಿಸಲಾಗಿದೆ ಎಂದು ಅಪರ ಜಿಲ್ಲಾಧಿಕಾರಿ ಆರ್. ಚಂದ್ರಯ್ಯ ಅವರು ತಿಳಿಸಿದರು.



ಅವರು ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಜ್ಞಾನ ಭಾರತಂ ಮಿಷನ್ ಯೋಜನೆಯಡಿ ಹಸ್ತ ಪ್ರತಿಗಳ ಸಂರಕ್ಷಣೆ ಮತ್ತು ಡಿಜಿಟಲೀಕರಣ ಕಾರ್ಯ ಯೋಜನೆ ಕುರಿತು ನಡೆದ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದರು.

ಕೇಂದ್ರ ಸರ್ಕಾರದ ಜ್ಞಾನ ಭಾರತಂ ಮಿಷನ್ ಯೋಜನೆಯಡಿಯಲ್ಲಿ ರಾಷ್ಟ್ರದಾದ್ಯಂತ ಶತಮಾನಗಳಷ್ಟು ಹಳೆಯ ಕೈಬರಹ ಪತ್ರಗಳು, ಹಸ್ತ ಪ್ರತಿಗಳು ಮತ್ತು ದಾಖಲೆಗಳ ಇಂದಿನ ತಂತ್ರಜ್ಞಾನ ಮೂಲಕ ಶಾಶ್ವತವಾಗಿ ಉಳಿಸಲು ಇವುಗಳ ಸಮೀಕ್ಷೆ, ಸಂರಕ್ಷಣೆ, ರಕ್ಷಣೆ, ಡಿಜಿಟಲೀಕರಣ, ನೋಂದಣಿ, ವಿಮರ್ಶಾತ್ಮಕ ಸಂಪಾದನೆ, ಅನುವಾದ ಮತ್ತು ಪ್ರಕಟಣೆಯನ್ನು ಮಾಡುವ ಮೂಲಕ ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಒಂದೇ ರಾಷ್ಟ್ರೀಯ ವೇದಿಕೆಯ ಮೂಲಕ ಸಾರ್ವಜನಿಕ ಪ್ರವೇಶವನ್ನು ಒದಗಿಸಿ ಭವಿಷ್ಯದ ಪೀಳಿಗೆಗೆ ಅವುಗಳ ಜ್ಞಾನ ಸಂಪತ್ತಿನ ಸಂರಕ್ಷಣೆ ಮತ್ತು ಬಳಕೆಗೆ ಹಸ್ತಪ್ರತಿಗಳ ಸಂರಕ್ಷಣೆ ಹಾಗೂ ಡಿಜಿಟಲೀಕರಣ ಯೋಜನೆಯನ್ನು ಹಮ್ಮಿಕೊಂಡಿದೆ ಎಂದರು.

ಈ ಯೋಜನೆಗೆ ಸಂಬಂಧಿಸಿದಂತೆ ಆರ್ಟ್ ಆಫ್ ಲಿವಿಂಗ್ ಸಂಸ್ಥೆ ವತಿಯಿಂದ ಹಾಜರಿದ್ದ ಸಿಬ್ಬಂದಿಗಳಿಗೆ ಹಸ್ತ ಪ್ರತಿಗಳನ್ನು ಪತ್ತೆ ಹಚ್ಚಲು ಹಾಗೂ ತಮ್ಮ ಸಂಸ್ಥೆಯಲ್ಲಿ ಯಾವುದೇ ದಾಖಲೆಗಳು ಇದ್ದರೆ ಮಾಹಿತಿ ನೀಡಲು ಸೂಚಿಸಿದರು. ಈ ಸಂಬಂಧ ಆರ್ಟ್ ಆಫ್ ಲಿವಿಂಗ್ ಸಂಸ್ಥೆಯ ಪ್ರತಿನಿಧಿಯಾದ ಪ್ರೇಮಪುರಿ ಶಿವಂ ಅವರು ಮಾತನಾಡುತ್ತಾ ನಮ್ಮ ಬಳಿ ಕೆಲವು ಹಸ್ತ ಪ್ರತಿಗಳು ಇರಬಹುದು ಇದರ ಬಗ್ಗೆ ಕೂಡಲೇ ಪರಿಶೀಲಿಸಿ ಮಾಹಿತಿಯನ್ನು ಪ್ರವಾಸೋದ್ಯಮ ಇಲಾಖೆಗೆ ತಿಳಿಸಲಾಗುದು ಎಂದು ಮಾಹಿತಿ ನೀಡಿದರು.

ಆಡಳಿತ ಅಧಿಕಾರಿಗಳು ಚುಂಚನಗಿರಿ ಮಠ ರಾಮನಗರ ಹಾಗೂ ದೇಗುಲ ಮಠ ಕನಕಪುರ ಅವರು ತಮ್ಮ ಬಳಿ ಯಾವುದೇ ರೀತಿಯ ಹಸ್ತ ಪ್ರತಿಗಳು ಇರುವುದಿಲ್ಲ ಎಂದು ಸಭೆಗೆ ಮಾಹಿತಿ ನೀಡಿದರು ಹಾಗೂ ಚುಂಚನಗಿರಿ ಮಠದವರು ಹಸ್ತ ಪ್ರತಿಗಳನ್ನು ಮಂಡ್ಯ ಜಿಲ್ಲೆಯ ಆದಿ ಚುಂಚನಗಿರಿ ಮಠದಲ್ಲಿ ಸಂಗ್ರಹಿಸಲಾಗಿದೆ ಎಂದು ತಿಳಿಸಿದಾಗ ಅಪರ ಜಿಲ್ಲಾಧಿಕಾರಿಗಳು ಯಾವುದಾದರೂ ಹಸ್ತ ಪ್ರತಿಗಳು ಲಭ್ಯವಾದಲ್ಲಿ ಪ್ರವಾಸೋದ್ಯಮ ಇಲಾಖೆಗೆ ಮಾಹಿತಿ ನೀಡುವಂತೆ ಸೂಚಿಸಿದರು.

# ‘ಶಿಕ್ಷಕ ವೃತ್ತಿ ಸಮಾಜದಲ್ಲಿ ಎಲ್ಲಾ ವೃತ್ತಿಗಳಿಗೂ ಪವಿತ್ರವಾದ ವೃತ್ತಿ’

ಮಾಲೂರು

ಶಿಕ್ಷಕ ವೃತ್ತಿ ಅತ್ಯಂತ ಪವಿತ್ರವಾದದ್ದು ಶಿಕ್ಷಕರಾಗಿ ಉತ್ತಮ ಸೇವೆ ಸಲ್ಲಿಸಿದವರು ಅಪಾರ ಶಿಷ್ಯರ ಪ್ರೀತಿಯನ್ನು ಗಳಿಸಿರುತ್ತಾರೆ ನಿವೃತ್ತಿಯ ನಂತರ ಜೀವನವು ಆರೋಗ್ಯ ಮತ್ತು ಸುಖಕರವಾಗಿರಲಿ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಬಿಪಿ ಕೆಂಪಯ್ಯ ಹೇಳಿದರು.

ನಗರದ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯದ ಆವರಣದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಾರ್ಯಾಲಯ ಹಾಗೂ ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ವತಿಯಿಂದ ವಯೋ ಸಹಜ ನಿವೃತ್ತಿ ಹೊಂದಿದ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದ ದೈಹಿಕ ಶಿಕ್ಷಕ ಸುಧಾಕರ್, ಸೊಣಪನಟ್ಟಿ ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ಆರ್ ಕೆ ನಾಗರಾಜ್, ಆನೆಪುರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಹನುಮಂತಪ್ಪ,, ತೊರ್ನಹಳ್ಳಿ ಗ್ರಾಮದ ಉರ್ದು ಕಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕಿ ವನಜಮ್ಮ, ಅವರಿಗೆ ಹಮ್ಮಿಕೊಳ್ಳಲಾಗಿದ್ದ ಬೀಳ್ಕೊಡುಗೆ ಸಮಾರಂಭದಲ್ಲಿ ಅಭಿನಂದಿಸಿ ಮಾತನಾಡಿದರು.



ಶಿಕ್ಷಕ ವೃತ್ತಿ ಸಮಾಜದಲ್ಲಿ ಎಲ್ಲಾ ವೃತ್ತಿಗಳಿಗೂ ಪವಿತ್ರವಾದ ವೃತ್ತಿಯಾಗಿದೆ ಶಿಕ್ಷಕ ವೃತ್ತಿಯನ್ನು ನಿರ್ವಹಿಸುವವರು ಅಪಾರ ಮಕ್ಕಳ ಪ್ರೀತಿ ವಿಶ್ವಾಸವನ್ನು ಗಳಿಸಿರುತ್ತಾರೆ. ಮುಂದಿನ ಭವಿಷ್ಯದ ಪ್ರಜೆಗಳಾದ ವಿದ್ಯಾರ್ಥಿಗಳಿಗೆ ಶಿಕ್ಷಕರು ಮಾರ್ಗದರ್ಶಕರಾಗಿ ಮೌಲ್ಯ ದಾರಿತ ಶಿಕ್ಷಣವನ್ನು ನೀಡುತ್ತಾರೆ ಸರ್ಕಾರಿ ಶಾಲೆಗಳಲ್ಲಿ ಇತ್ತೀಚಿನ ದಿನಗಳಲ್ಲಿ ಮಕ್ಕಳ ದಾಖಲಾತಿ ಸಂಖ್ಯೆ ಕಡಿಮೆಯಾಗುತ್ತಿದ್ದು, ಶಿಕ್ಷಕರು ಶಿಸ್ತು, ಸಮಯಪ್ರಜ್ಞೆ, ಸತತವಾಗಿ ಓದುವ ಹವ್ಯಾಸ ಅಳವಡಿಸಿಕೊಂಡು, ತಮ್ಮ ಪರಿಸರವ ಶುಚಿತ್ವವನ್ನು ಕಾಪಾಡಿಕೊಳ್ಳಬೇಕು ಖಾಸಗಿ ಶಾಲೆಗಳಲ್ಲಿ ಸಿಗುವ ಶಿಕ್ಷಣಕ್ಕೆ ಪೈಪೋಟಿ ನೀಡುವಂತಹ ಸರ್ಕಾರಿ ಸುತ್ತೋಲೆಯನ್ವಯ ಗುಣಾತ್ಮಕವಾದ ಮೌಲ್ಯ ದಾರಿತ ಶಿಕ್ಷಣವನ್ನು ನೀಡಿದಾಗ ಸಾರ್ವಜನಿಕರು ಪ್ರಶಂಶಿಸುತ್ತಾರೆ, ವಿದ್ಯಾರ್ಥಿಗಳು ಹಾಗೂ ಸಾರ್ವಜನಿಕರು ನೀಡುವ ಪ್ರಶಂಸೆಗೆ ಯಾವುದೇ ರೀತಿಯ ಬಿರುದು ಸನ್ಮಾನಗಳಿಲ್ಲ, ತಾಲೂಕಿನಲ್ಲಿ ಕಾರ್ಯನಿರ್ವಹಿಸುತ್ತಿರುವ ಕಿರಿಯ ಹಿರಿಯ ಪ್ರೌಢಶಾಲೆಗಳಲ್ಲಿ ಶಿಕ್ಷಕರು ಉತ್ತಮ ರೀತಿಯಲ್ಲಿ ಕಾರ್ಯನಿರ್ವಹಿಸುತ್ತಿದ್ದು ಪ್ರಸಕ್ತ ವರ್ಷದಲ್ಲಿ ಎಸ್ ಎಸ್ ಎಲ್ ಸಿ ವಾರ್ಷಿಕ ಪರೀಕ್ಷೆಯಲ್ಲಿ ಶೇಕಡ 97 ರಷ್ಟು ಫಲಿತಾಂಶ ಬಂದಿರುವುದು ತಾಲೂಕಿಗೆ ಕೀರ್ತಿಯನ್ನು ಹೆಚ್ಚಿಸಿದೆ.

ನಗರದ ಬಾಲಕಿಯರ ಪದವಿಪೂರ್ವ ಕಾಲೇಜಿನ ಪ್ರೌಢಶಾಲಾ ವಿಭಾಗದಲ್ಲಿ ಸೇವೆ ಸಲ್ಲಿಸುತ್ತಿರುವ ದೈಹಿಕ ಶಿಕ್ಷಣ ಶಿಕ್ಷಕ ಸುಧಾಕರ್ ಅವರು ಹೊಸಕೋಟೆ ತಾಲೂಕಿನ ಎಡಕನಹಳ್ಳಿ ಗ್ರಾಮದಲ್ಲಿ ತಮ್ಮ ಶಿಕ್ಷಕ ವೃತ್ತಿಯನ್ನು ಆರಂಭಿಸಿ ನರಸಾಪುರ, ಕೆಜಿಹಳ್ಳಿ, ಕುಡಿಯನೂರು, ಬೂದಿಕೋಟೆ, ದೊಡ್ಡ ಶಿವಾರ ಪ್ರೌಢಶಾಲೆಗಳಲ್ಲಿ ಉತ್ತಮ ರೀತಿಯಲ್ಲಿ 39 ವರ್ಷಗಳ ಕಾಲ ಸೇವೆಯನ್ನು ಸಲ್ಲಿಸುವುದರ ಮೂಲಕ ಅಪಾರ ಶಿಷ್ಯರು ಹಾಗೂ ಪೋಷಕರ ಪ್ರೀತಿಯನ್ನು ಗಳಿಸಿದ್ದಾರೆ.

30ಕ್ಕೂ ಹೆಚ್ಚು ವರ್ಷಗಳ ಕಾಲ ಶಿಕ್ಷಕರಾಗಿ ಸೇವೆ ಸಲ್ಲಿಸಿ ನಿವೃತ್ತಿ ಹೊಂದಿರುವ ಶಿಕ್ಷಕರಿಗೆ ದೇವರು ಉತ್ತಮ ರೀತಿಯ ಆರೋಗ್ಯ ಮತ್ತು ಆಯಸ್ಸು ನೀಡುವುದರ ಮೂಲಕ ತಮ್ಮ ಕುಟುಂಬದೊಂದಿಗೆ ಸುಖಕರವಾದ ಜೀವನ ನಡೆಸುವಂತೆ ಹೇಳಿದರು.

ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಅಧ್ಯಕ್ಷ ಷಣ್ಮುಖಯ್ಯ ಮಾತನಾಡಿ 30ಕ್ಕೂ ಹೆಚ್ಚು ವರ್ಷಗಳ ಕಾಲ ಶಿಕ್ಷಕರಾಗಿ ಸೇವೆ ಸಲ್ಲಿಸಿ ವಯೋ ಸಹಜ ನಿವೃತ್ತಿ ಹೊಂದುತ್ತಿರುವ ಶಿಕ್ಷಕರನ್ನು ಸಂಘದ ವತಿಯಿಂದ ಅಭಿನಂದಿಸುತ್ತ ಬರಲಾಗಿದೆ ಪ್ರಸಕ್ತ ವರ್ಷ ನಿವೃತ್ತಿ ಹೊಂದುತ್ತಿರುವ ಶಿಕ್ಷಕರ ಜೀವನ ಸುಖಕರವಾಗಿರಲಿ ಎಂದು ಶುಭ ಹಾರೈಸಿದರು.

ಈ ಸಂದರ್ಭದಲ್ಲಿ ಬಿಆರ್‌ಸಿ ಸಮನ್ವಯ ಅಧಿಕಾರಿ ಟಿ.ವೆಂಕಟಸ್ವಾಮಿ, ಪ್ರಾಥಮಿಕ ಶಾಲಾ ಶಿಕ್ಷಕರ ಸಂಘದ ಪ್ರಧಾನ ಕಾರ್ಯದರ್ಶಿ ಪಿ.ರಮೇಶ್, ಖಜಾಂಚಿ ಅರ್ಜುನ್, ಪ್ರೌಢಶಾಲಾ ಶಿಕ್ಷಕರ ಸಂಘದ ಕಾರ್ಯದರ್ಶಿ ರಾಮಯ್ಯ, ಶಿಕ್ಷಣಾಧಿಕಾರಿಗಳಾದ ಶಶಿಧರ್, ಅಶೋಕ್, ಕೃಷ್ಣೇಗೌಡ, ಮಂಜಪ್ಪ, ಬಿಆರ್‌ಪಿ ಮೋಹನ್, ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ ಸಿಬ್ಬಂದಿ ಬಿಆರ್‌ಸಿ ಕಛೇರಿಯ ಸಿಬ್ಬಂದಿ ಹಾಜರಿದ್ದರು.

# ‘ಶಾಸಕರ ಬಗ್ಗೆ ಮಾತನಾಡುವ ನೈತಿಕತೆಯಿಲ್ಲ’

ಗುಡಿಬಂಡೆ

ಚುನಾವಣಾ ಸಮಯ ಹತ್ತಿರವಾಗುತ್ತಿದ್ದಂತೆ ಕೆಲ ರಾಜಕಾರಣಿಗಳು ಟೂರ್‌ಗೆ ಬಂದಂತೆ ಕ್ಷೇತ್ರಕ್ಕೆ ಬರುತ್ತಿದ್ದು, ಇಂತಹವರಿಗೆ ಜನಮನ ಗೆದ್ದ ಶಾಸಕರ ಬಗ್ಗೆ ಮಾತನಾಡುವ ನೈತಿಕತೆ ಇಲ್ಲ ಎಂದು ಕಾಂಗ್ರೆಸ್ ಮುಖಂಡ ಲಕ್ಷ್ಮೀನಾರಾಯಣ ತೀವ್ರ ಟೀಕೆ ಮಾಡಿದ್ದಾರೆ.

ಪಟ್ಟಣದ ಪತ್ರಕರ್ತರ ಭವನದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯಲ್ಲಿ ಮಾತನಾಡಿದ ಅವರು, ಇತ್ತೀಚೆಗೆ ಮುಖಂಡ ಡಿ.ಜೆ. ನಾಗರಾಜರೆಡ್ಡಿ ಅವರು ಶಾಸಕ ಸುಬ್ಬಾರೆಡ್ಡಿಯವರ ವಿರುದ್ಧ ನೀಡಿದ ಹೇಳಿಕೆಗಳಿಗೆ ತಿರುಗೇಟು ನೀಡಿದರು. “ಗುಡಿಬಂಡೆ ತಾಲೂಕಿನವರೇ ಆದ ನೀವು ರಾಜಕೀಯ ಮಾಡುವುದು ತಪ್ಪಲ್ಲ, ಆದರೆ ಚುನಾವಣೆ ಹತ್ತಿರ ಬಂದಾಗ ಕ್ಷೇತ್ರಕ್ಕೆ ಬಂದು ಸತತ ಮೂರು ಬಾರಿ ಗೆದ್ದ ಶಾಸಕರ ವಿರುದ್ಧ ಆಧಾರವಿಲ್ಲದ ಆರೋಪ ಮಾಡುವುದು ಸರಿಯಲ್ಲ” ಎಂದು ಹೇಳಿದರು.



ಇನ್ನೂ ಮುಂದೆ ಮಾತನಾಡಿದ ಅವರು, “ಶಾಸಕರನ್ನು ಚರ್ಚೆಗೆ ಆಹ್ವಾನಿಸಲು ನೀವು ಸೂಕ್ತರಲ್ಲ. ನಿಮಗೆ ಉತ್ತರ ಕೊಡಲು ನಾವು ಸಾಕು. ಗುಡಿಬಂಡೆಗೆ ನೀವು ಕೊಟ್ಟ ಕೊಡುಗೆ ಏನು ಎಂಬುದನ್ನು ಜನರಿಗೆ ಹೇಳಿ. ಶಾಸಕರು ಕಾನೂನಿನಂತೆ ಭೂಮಿ ಖರೀದಿ ಮಾಡಿದ್ದಾರೆ. ಇದರಲ್ಲಿ ತಪ್ಪೇನಿಲ್ಲ” ಎಂದು ಆಕ್ರೋಶ ವ್ಯಕ್ತಪಡಿಸಿದರು.

ಬಳಿಕ ಮುಖಂಡ ಪ್ರಕಾಶ್ ಮಾತನಾಡಿ, “ಬಾಗೇಪಲ್ಲಿ–ಗುಡಿಬಂಡೆ ಕ್ಷೇತ್ರದಲ್ಲಿ ಒಮ್ಮೆ ಗೆದ್ದವರು ಮತ್ತೊಮ್ಮೆ ಗೆಲ್ಲದ ಇತಿಹಾಸವಿದೆ. ಆದರೆ ಸುಬ್ಬಾರೆಡ್ಡಿಯವರು ಸತತ ಮೂರು ಬಾರಿ ಶಾಸಕರಾಗಿ ಆಯ್ಕೆಯಾಗಿರುವುದು ಅವರ ಕಾರ್ಯಕ್ಷಮತೆಯ ಸಾಕ್ಷಿ. ಜನರ ಪರ ಕೆಲಸ ಮಾಡದೇ ಇದ್ದರೆ ಜನರು ಅವರನ್ನು ಮತ್ತೆ ಮತ್ತೆ ಆಯ್ಕೆ ಮಾಡುವುದಿಲ್ಲ” ಎಂದರು.

“ಚುನಾವಣೆ ಹತ್ತಿರ ಬಂದಂತೆ ಶಾಸಕರ ವಿರುದ್ಧ ಆಧಾರವಿಲ್ಲದ ಆರೋಪಗಳು ಸಾಮಾನ್ಯವಾಗಿವೆ. ಇಂತಹ ಆರೋಪಗಳು ಮುಂದುವರಿದರೆ ತಕ್ಕ ಪಾಠ ಕಲಿಸುತ್ತೇವೆ” ಎಂದು ಎಚ್ಚರಿಕೆ ನೀಡಿದರು.

ಈ ವೇಳೆ ಮುಖಂಡರಾದ ದಪ್ಪರ್ತಿ ನಂಜುಂಡ, ಕೆಡಿಪಿ ಸದಸ್ಯ ರಿಯಾಜ್ ಪಾಷಾ, ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆದಿರೆಡ್ಡಿ, ಆನಂದರೆಡ್ಡಿ, ರಮೇಶ್, ಮಂಜುನಾಥ್, ನವೀನ್ ರಾಜ್ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# 25ವರ್ಷದ ದಾಖಲೆ ಮುರಿದ ಮಳೆ

ಬೆಂಗಳೂರು

**ನಿನ್ನೆ ಒಂದೆರಡು ಗಂಟೆಗಳ ಮಳೆಯು ಈ ಶತಮಾನದಲ್ಲಿ ಎಪ್ರಿಲ್‌ನಲ್ಲಿ ಸುರಿದ ದಾಖಲೆಯ ಮಳೆಯಾಗಿದೆ. ಇದು ಹವಾಮಾನ ವೈಪರಿತ್ಯ ಸೂಚಿಸುತ್ತದೆ ಎಂದು ಐಎಂಡಿ ಅಧಿಕಾರಿಗಳು ತಿಳಿಸಿದ್ದಾರೆ.**

ಗುರುವಾರ ಬೆಳಗ್ಗೆ 8.30ಕ್ಕೆ ಕೊನೆಗೊಂಡಂತೆ ದಕ್ಷಿಣ ಒಳನಾಡಿನ ಕೆಲವಡೆ, ಕರಾವಳಿ ಕರ್ನಾಟಕ ಹಾಗೂ ಉತ್ತರ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ದಕ್ಷಿಣ ಒಳನಾಡಿನ ಕೆಲವಡೆ, ಕರಾವಳಿ ಕರ್ನಾಟಕ ಹಾಗೂ ಉತ್ತರ ಒಳನಾಡಿನ ಒಂದೆರಡು ಕಡೆಗಳಲ್ಲಿ ಮಳೆಯಾಗಿದೆ. ಬೆಂಗಳೂರು ನಗರದಲ್ಲಿ 11 ಸೆಂಟಿ ಮೀಟರ್ ಮಳೆಯಾಗಿದೆ. ಚಿತ್ರದುರ್ಗ 7, ಚಿಂತಾಮಣಿ 4, ಮಂಡ್ಯ 3, ಹೊಸಕೋಟೆಯಲ್ಲಿ 2 ಸೆಂಟಿ ಮೀಟರ್ ಮಳೆಯಾಗಿದೆ.

ಮುಂದಿನ 48 ಗಂಟೆ ಈ ಜಿಲ್ಲೆಗಳಲ್ಲಿ ಗುಡುಗು ಸಹಿತ ಮಳೆ: ಮುಂದಿನ 48 ಗಂಟೆಗಳಲ್ಲಿ ಬೆಂಗಳೂರು, ಹಾಸನ, ಮೈಸೂರು, ಚಿಕ್ಕಬಳ್ಳಾಪುರ, ತುಮಕೂರು ಸೇರಿದಂತೆ ರಾಜ್ಯದ ಕೆಲವೆಡೆ ಗುಡುಗು ಸಹಿತ ಮಳೆಯಾಗುವ ಸಾಧ್ಯತೆಯಿದೆ. ಗರಿಷ್ಠ ಉಷ್ಣಾಂಶ 35 ಡಿಗ್ರಿಗೆ ಸೀಮಿತವಾಗಿರಲಿದೆ ಎಂದು ಹವಾಮಾನ ಇಲಾಖೆ ಮುನ್ಸೂಚನೆ

# ಜೆಡಿಎಸ್ ಬೂತ್ ಮಟ್ಟದ ಏಜೆಂಟರ ಕಾರ್ಯಾಗಾರ

ಚಿಂತಾಮಣಿ

ನಗರದ ಹೊರವಲಯದ ಬೈಪಾಸ್ ರಸ್ತೆಯಲ್ಲಿರುವ ಜೆಕೆ ಭವನದಲ್ಲಿ ಜೆಡಿಎಸ್ ಪಕ್ಷದ ಬೂತ್ ಮಟ್ಟದ ಏಜೆಂಟರ ಕಾರ್ಯಾಗಾರ ಯಶಸ್ವಿಯಾಗಿ ನಡೆಯಿತು.

ಕಾರ್ಯಾಗಾರದಲ್ಲಿ ಮತದಾರರ ಪಟ್ಟಿಯ ವಿಶೇಷ ಸಮಗ್ರ ಪರಿಷ್ಕರಣೆ (ಖಐಖ) ಪ್ರಕ್ರಿಯೆಯ ಮಹತ್ವ, ಹೊಸ ಮತದಾರರ ಸೇರ್ಪಡೆ ಹಾಗೂ ಹೆಸರು ತಿದ್ದುಪಡಿ ಕುರಿತಾಗಿ ಸಮಗ್ರ ಮಾಹಿತಿ ನೀಡಲಾಯಿತು.




ಜೊತೆಗೆ, ಮತದಾರರ ಪಟ್ಟಿಯ ನಿಖರತೆ ಸಾಧಿಸಲು ಕೈಗೊಳ್ಳಬೇಕಾದ ಕ್ರಮಗಳ ಕುರಿತು ವಿವರವಾದ ಚರ್ಚೆ ನಡೆಯಿತು.

ಪ್ರತಿ ಬೂತ್ ಮಟ್ಟದಲ್ಲೂ ಅರ್ಹ ಮತದಾರರನ್ನು ಪಟ್ಟಿಗೆ ಸೇರಿಸುವುದು ಹಾಗೂ ಅನರ್ಹ ಹೆಸರುಗಳನ್ನು ತೆರವುಗೊಳಿಸುವ ಕಾರ್ಯದಲ್ಲಿ ಬೂತ್ ಮಟ್ಟದ ಏಜೆಂಟರು ಸಕ್ರಿಯವಾಗಿ ತೊಡಗಿಸಿಕೊಳ್ಳಬೇಕು ಎಂಬುದನ್ನು ಒತ್ತಿಹೇಳಲಾಯಿತು.

ಈ ಸಂದರ್ಭದಲ್ಲಿ ಸಂಪನ್ಮೂಲ ವ್ಯಕ್ತಿಗಳಾಗಿ ಜೆಡಿಎಸ್ ರಾಜ್ಯ ವಕ್ತಾರ ಹೆಚ್. ಎನ್ ದೇವರಾಜ್ ಹಾಗೂ ಜೆ.ಡಿ ಅಶ್ವಿನ್ ಕುಮಾರ್ ಭಾಗವಹಿಸಿ ಕಾರ್ಯಕರ್ತರಿಗೆ ಅಗತ್ಯ ಮಾರ್ಗದರ್ಶನ ನೀಡಿದರು.

ಇದೇ ವೇಳೆ ವಿಧಾನಸಭಾ ಮಾಜಿ ಉಪಾಧ್ಯಕ್ಷರು ಹಾಗೂ ಕ್ಷೇತ್ರದ ಮಾಜಿ ಶಾಸಕರಾದ ಜೆಕೆ ಕೃಷ್ಣಾರೆಡ್ಡಿ ಸೇರಿದಂತೆ ಜೆಡಿಎಸ್ ಪಕ್ಷದ ಹಲವಾರು ಮುಖಂಡರು ಮತ್ತು ಕಾರ್ಯಕರ್ತರು ಉಪಸ್ಥಿತರಿದ್ದರು.

# ಮಳೆಹಾನಿ ಪ್ರದೇಶಗಳಿಗೆ ಜಿಲ್ಲಾಧಿಕಾರಿ ಭೇಟಿ; ಸಂತ್ರಸ್ತರಿಗೆ ಸಾಂತ್ವನ, ಪರಿಹಾರಕ್ಕೆ ಸೂಚನೆ

ತುಮಕೂರು

ಜಿಲ್ಲಾಧಿಕಾರಿ ಶುಭ ಕಲ್ಯಾಣ್ ಅವರು ಚಿಕ್ಕನಾಯಕನಹಳ್ಳಿ ತಾಲ್ಲೂಕು ವ್ಯಾಪ್ತಿಯಲ್ಲಿ ಇತ್ತೀಚಿನ ಭಾರಿ ಮಳೆ ಹಾಗೂ ಬಿರುಗಾಳಿಯಿಂದ ಹಾನಿಗೊಳಗಾದ ವಿವಿಧ ಪ್ರದೇಶಗಳಿಗೆ ಗುರುವಾರ ಭೇಟಿ ನೀಡಿ ಸ್ಥಳ ಪರಿಶೀಲನೆ ನಡೆಸಿದರು. ಪ್ರಕೃತಿ ವಿಕೋಪದಿಂದ ಮಾನವ ಜೀವಹಾನಿ, ಬೆಳೆ ನಷ್ಟ ಹಾಗೂ ಮೂಲಸೌಕರ್ಯ ಹಾನಿಯ ಕುರಿತು ಸಮಗ್ರ ಮಾಹಿತಿ ಪಡೆದು ಸಂಬಂಧಪಟ್ಟ ಅಧಿಕಾರಿಗಳಿಗೆ ತಕ್ಷಣದ ಕ್ರಮ ಕೈಗೊಳ್ಳುವಂತೆ ಸೂಚಿಸಿದರು.

ಚಿಕ್ಕನಾಯಕನಹಳ್ಳಿ ಪಟ್ಟಣದ ನಿವಾಸಿ ಪುಟ್ಟಯ್ಯ (70 ವರ್ಷ) ಅವರು ಏಪ್ರಿಲ್ 28ರಂದು ಸಂಜೆ ತೋಟದಿಂದ ಮನೆಗೆ ತೆರಳುವ ವೇಳೆ ಆಕಸ್ಮಿಕ ಗಾಳಿ–ಮಳೆಯ ಪರಿಣಾಮ ಮರದ ಕೊಂಬೆ ತಲೆಯ ಮೇಲೆ ಬಿದ್ದು ಮೃತಪಟ್ಟ ಘಟನೆ ಹಿನ್ನೆಲೆ, ಜಿಲ್ಲಾಧಿಕಾರಿಗಳು ಮೃತರ ನಿವಾಸಕ್ಕೆ ಭೇಟಿ ನೀಡಿ ಕುಟುಂಬ ಸದಸ್ಯರಿಗೆ ಸಂತಾಪ ಸೂಚಿಸಿ ಸಾಂತ್ವನ ಹೇಳಿದರು.

ಈ ವೇಳೆ ತಹಶೀಲ್ದಾರ್, ಮುಖ್ಯಾಧಿಕಾರಿ ಹಾಗೂ ಗ್ರಾಮ ಆಡಳಿತಾಧಿಕಾರಿಗಳಿಗೆ ಮೃತರ ಕುಟುಂಬಕ್ಕೆ ತಕ್ಷಣ ಮರಣ ಪ್ರಮಾಣ ಪತ್ರ ವಿತರಿಸುವುದು, ಹಕ್ಕುಪತ್ರ ಸಂಬಂಧಿತ ಪ್ರಕ್ರಿಯೆಯನ್ನು ಶೀಘ್ರ ಪೂರ್ಣಗೊಳಿಸುವುದು ಹಾಗೂ ಅರ್ಹ ಪಿಂಚಣಿ ಸೇರಿದಂತೆ ಸರ್ಕಾರದ ಸೌಲಭ್ಯಗಳನ್ನು ವಿಳಂಬವಿಲ್ಲದೆ ಮಂಜೂರು ಮಾಡುವಂತೆ ನಿರ್ದೇಶನ ನೀಡಿದರು.

ಸರ್ಕಾರದಿಂದ ಲಭ್ಯವಿರುವ ಪರಿಹಾರ ಧನ ಮತ್ತು ಅಗತ್ಯ ನೆರವುಗಳನ್ನು ಶೀಘ್ರ ಕುಟುಂಬಕ್ಕೆ ತಲುಪಿಸಲು ಕ್ರಮವಹಿಸುವಂತೆ ಸೂಚಿಸಿದರು.

ತಿಪಟೂರು ತಾಲ್ಲೂಕಿನ ಹಟ್ನ ಗ್ರಾಮದ ಸರ್ವೆ ನಂ. 97 ಪ್ರದೇಶಕ್ಕೆ ಭೇಟಿ ನೀಡಿ ಭಾರಿ ಮಳೆಯಿಂದ ಉಂಟಾದ ಬೆಳೆ ಹಾಗೂ ಭೂ ಹಾನಿಯನ್ನು ಪರಿಶೀಲಿಸಿದ ಅವರು, ರೈತರಿಗೆ ಸಂಭವಿಸಿದ ನಷ್ಟ, ಭೂಮಿಯ ಸ್ಥಿತಿ ಹಾಗೂ ಬೆಳೆ ಹಾನಿಯ ಕುರಿತು ಅಧಿಕಾರಿಗಳಿಂದ ವಿವರವಾದ ಮಾಹಿತಿ ಪಡೆದು, ಸರ್ಕಾರದ ನಿಯಮಾನುಸಾರ ಭೂ ಆಧಾರಿತ ಮೌಲ್ಯಮಾಪನದಲ್ಲಿ ಶೇ.33 ಕ್ಕಿಂತ ಹೆಚ್ಚು ಹಾನಿಗೊಳಗಾದ ರೈತರಿಗೆ ಪ್ರತಿ ಎಕರೆಗೆ 22,000 ರೂ.ಪರಿಹಾರ ಮಂಜೂರು ಮಾಡುವುದಾಗಿ ತಿಳಿಸಿದರು.

ಅರ್ಹ ರೈತರ ಸಂಪೂರ್ಣ ವಿವರಗಳನ್ನು ತ್ವರಿತವಾಗಿ ಸಂಗ್ರಹಿಸಿ ಪರಿಹಾರ ವಿತರಣೆಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.




ಅದೇ ರೀತಿ, ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಶೆಟ್ಟಿಕೆರೆ ಹೋಬಳಿ ವ್ಯಾಪ್ತಿಯ ಹಾಲುಗೊಣ ಗ್ರಾಮಕ್ಕೆ ಭೇಟಿ ನೀಡಿ ಗಾಳಿ–ಮಳೆಯಿಂದ ತೆಂಗು, ಬಾಳೆ ಹಾಗೂ ಅಡಿಕೆ ಬೆಳೆಗಳಿಗೆ ಉಂಟಾದ ಹಾನಿಯನ್ನು ಪರಿಶೀಲಿಸಿದರು. ಅನೇಕ ಮರಗಳು ಉರುಳಿ ಬೆಳೆ ನಷ್ಟವಾಗಿರುವುದು ಹಾಗೂ ಬೆಸ್ಕಾಂ ವಿದ್ಯುತ್ ಲೈನ್‌ಗಳ ಮೇಲೆ ಮರಗಳು ಮತ್ತು ಕೊಂಬೆಗಳು ಬಿದ್ದು ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಿರುವುದನ್ನು ಗಮನಿಸಿದ ಜಿಲ್ಲಾಧಿಕಾರಿಗಳು, ಗ್ರಾಮ ಆಡಳಿತಾಧಿಕಾರಿಗಳಿಗೆ ಬೆಳೆ ಹಾನಿಯ ಸಮಗ್ರ ದಾಖಲೆ ಸಿದ್ಧಪಡಿಸುವುದು, ಪ್ರತಿ ರೈತನ ನಷ್ಟವನ್ನು ನಿಖರವಾಗಿ ದಾಖಲಿಸುವುದು ಹಾಗೂ ತ್ವರಿತ ವರದಿ ಸಲ್ಲಿಸುವಂತೆ ಸೂಚಿಸಿದರಲ್ಲದೆ, ಜೊತೆಗೆ ಉರುಳಿದ ಮರಗಳು ಮತ್ತು ಕೊಂಬೆಗಳನ್ನು ತಕ್ಷಣ ತೆರವುಗೊಳಿಸಿ ಬೆಸ್ಕಾಂ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ವಿದ್ಯುತ್ ಸರಬರಾಜನ್ನು ಶೀಘ್ರ ಪುನಃಸ್ಥಾಪಿಸುವಂತೆ ನಿರ್ದೇಶನ ನೀಡಿದರು. ಅರ್ಹ ರೈತರ ಸಂಪೂರ್ಣ ವಿವರಗಳನ್ನು ತ್ವರಿತವಾಗಿ ಸಂಗ್ರಹಿಸಿ ಪರಿಹಾರ ವಿತರಣೆಯಲ್ಲಿ ಯಾವುದೇ ವಿಳಂಬವಾಗದಂತೆ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಅರ್ಹ ರೈತರಿಗೆ ಸರ್ಕಾರದ ಮಾರ್ಗಸೂಚಿಗಳಂತೆ ಪರಿಹಾರ ಸೌಲಭ್ಯಗಳನ್ನು ತ್ವರಿತವಾಗಿ ಒದಗಿಸಲು, ಹಾನಿ ಮೌಲ್ಯಮಾಪನ ಕಾರ್ಯಗಳನ್ನು ಆದ್ಯತೆಯಿಂದ ಪೂರ್ಣಗೊಳಿಸಲು ಹಾಗೂ ಎಲ್ಲಾ ವರದಿಗಳನ್ನು ಶೀಘ್ರ ಸಲ್ಲಿಸುವಂತೆ ಜಿಲ್ಲಾಧಿಕಾರಿಗಳುಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಪರಿಶೀಲನಾ ಸಂದರ್ಭದಲ್ಲಿ ತಿಪಟೂರು ಹಾಗೂ ಚಿಕ್ಕನಾಯಕನಹಳ್ಳಿ ತಹಶೀಲ್ದಾರ್, ಚಿಕ್ಕನಾಯಕನಹಳ್ಳಿ ಮುಖ್ಯಾಧಿಕಾರಿ, ಜಿಲ್ಲಾ ತೋಟಗಾರಿಕೆ ಉಪ ನಿರ್ದೇಶಕಿ ಶಾರದಮ್ಮ ಹಾಗೂ ವಿವಿಧ ಇಲಾಖೆಗಳ ಅಧಿಕಾರಿಗಳು ಉಪಸ್ಥಿತರಿದ್ದರು.

# ಹಂದಿ ಸಾಕಾಣಿಕಾ ಕೇಂದ್ರ ತೆರವಿಗೆ ಗ್ರಾಮಸ್ಥರ ಆಗ್ರಹ

ದೊಡ್ಡಬಳ್ಳಾಪುರ

ಬೈರಸಂದ್ರ ಗ್ರಾಮದಲ್ಲಿ ದುರ್ವಾಸನೆ ಬೀರುತ್ತಿರುವ ಹಂದಿ ಸಾಕಾಣಿಕಾ ಕೇಂದ್ರವನ್ನು ತಕ್ಷಣ ತೆರವುಗೊಳಿಸುವಂತೆ ಗ್ರಾಮಸ್ಥರು ಒತ್ತಾಯಿಸಿದ್ದಾರೆ. ಹೈಕೋರ್ಟ್ ಆದೇಶ ಇದ್ದರೂ ಅಧಿಕಾರಿಗಳು ಕ್ರಮ ಕೈಗೊಳ್ಳದಿರುವುದು ಜನರ ಆಕ್ರೋಶಕ್ಕೆ ಕಾರಣವಾಗಿದೆ.

ನಗರದ ತಾಲ್ಲೂಕು ಪಂಚಾಯತಿ ಆವರಣದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಗ್ರಾಮದ ನಿವಾಸಿ ಲಕ್ಷೀ ಸಾಗರ್, “ಗ್ರಾಮದಲ್ಲಿ ತೀವ್ರ ದುರ್ವಾಸನೆ ವ್ಯಾಪಿಸುತ್ತಿದ್ದು ಜನರು ಸಂಕಷ್ಟದಲ್ಲಿ ಬದುಕುತ್ತಿದ್ದಾರೆ. ಸಮಸ್ಯೆ ಕುರಿತು ಹಲವಾರು ಬಾರಿ ಅಧಿಕಾರಿಗಳಿಗೆ ಮನವಿ ಸಲ್ಲಿಸಿದ್ದರೂ ಯಾವುದೇ ಕ್ರಮ ಕೈಗೊಳ್ಳಲಾಗಿಲ್ಲ” ಎಂದು ಆರೋಪಿಸಿದರು.



ಅವರು ಮುಂದುವರೆದು, “ಹಂದಿ ಸಾಕಾಣಿಕೆ ಕೇಂದ್ರದ ವಿರುದ್ಧ ನ್ಯಾಯಾಲಯದ ಮೊರೆ ಹೋಗಿದ್ದೇವೆ. ಮಾಲಿನ್ಯ ನಿಯಂತ್ರಣ ಮಂಡಳಿಯ ವರದಿ ಆಧರಿಸಿ ಹೈಕೋರ್ಟ್ ಕೇಂದ್ರವನ್ನು ತೆರವುಗೊಳಿಸಲು ಆದೇಶಿಸಿದೆ. ಆದೇಶ ನೀಡಿ ಒಂದು ತಿಂಗಳು ಕಳೆದರೂ ಅಧಿಕಾರಿಗಳು ನಿರ್ಲಕ್ಷ್ಯ ತೋರಿದ್ದಾರೆ. ತಕ್ಷಣ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸ್ಥಳಕ್ಕೆ ಭೇಟಿ ನೀಡಿ ಕ್ರಮ ಕೈಗೊಳ್ಳಬೇಕು, ಇಲ್ಲವಾದರೆ ಲೋಕಾಯುಕ್ತಕ್ಕೆ ದೂರು ನೀಡಲಾಗುವುದು” ಎಂದು ಎಚ್ಚರಿಸಿದರು.

ಗ್ರಾಮಸ್ಥ ಮುನಿಓಬಳಯ್ಯ ಮಾತನಾಡಿ, “ಗ್ರಾಮದಲ್ಲಿ ದುರ್ವಾಸನೆ ಮಿತಿಮೀರಿದ್ದು ಊಟ ಮಾಡಲೂ ಆಗದ ಪರಿಸ್ಥಿತಿ ಇದೆ. ಜನರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತಿದೆ. ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ಕೇಂದ್ರವನ್ನು ಸ್ಥಳಾಂತರಿಸಬೇಕು” ಎಂದು ಒತ್ತಾಯಿಸಿದರು.

ಯುವ ಮುಖಂಡ ಸಿದ್ದರಾಜು ಮಾತನಾಡಿ, “ಬೈರಸಂದ್ರದಲ್ಲಿ ದಲಿತರ ಜಮೀನು ಒತ್ತುವರಿ ಮಾಡಲಾಗಿದೆ. ಸ್ಮಶಾನದ ಜಾಗದಲ್ಲಿ ತ್ಯಾಜ್ಯ ಹಾಕಿ ಪರಿಸರ ಹಾಳು ಮಾಡುತ್ತಿದ್ದಾರೆ. ಅಧಿಕಾರಿಗಳು ಗಮನ ಹರಿಸದಿದ್ದರೆ ಉಗ್ರ ಹೋರಾಟ ನಡೆಸಲಾಗುವುದು” ಎಂದು ಎಚ್ಚರಿಸಿದರು.

ಘಟನೆಯ ತೀವ್ರತೆಯನ್ನು ಗಮನಿಸಿದ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ರವೀಂದ್ರ ಸ್ಥಳಕ್ಕೆ ಭೇಟಿ ನೀಡಿ, “ಒಂದು ವಾರದೊಳಗೆ ಸಮಸ್ಯೆಗೆ ಪರಿಹಾರ ನೀಡಲಾಗುವುದು” ಎಂದು ಭರವಸೆ ನೀಡಿದ್ದಾರೆ.

ಈ ಭರವಸೆಯನ್ನು ಗ್ರಾಮಸ್ಥರು ಸ್ವಾಗತಿಸಿದ್ದು, ಕ್ರಮ ಕೈಗೊಳ್ಳದಿದ್ದರೆ ತಾವೇ ಹಂದಿ ಸಾಕಾಣಿಕಾ ಕೇಂದ್ರ ತೆರವುಗೊಳಿಸಲು ಮುಂದಾಗುವುದಾಗಿ ತಿಳಿಸಿದ್ದಾರೆ.

ಈ ಪ್ರದರ್ಶನಕ್ಕೆ ಲಡಾಖ್ ಏಕೆ ಅತ್ಯಂತ ಸೂಕ್ತವಾದ ಸ್ಥಳ ಎಂಬುದನ್ನು ಅರ್ಥಮಾಡಿಕೊಳ್ಳಲು, ಮೊದಲು ಲಡಾಖ್ ಎಂತಹುದು ಎಂಬುದನ್ನು ನಾವು ಅರ್ಥಮಾಡಿಕೊಳ್ಳಬೇಕಿದೆ. ಇದು ಕೇವಲ ಮಠಗಳು ಮತ್ತು ಪರ್ವತಗಳ ಮನಮೋಹಕ ಭೂಸದೃಶ್ಯವಲ್ಲ. ಇದು ಧರ್ಮದ ಒಂದು ಜೀವಂತ ವಿಶ್ವವಿದ್ಯಾಲಯ. ಹಿಮಾಲಯದಾದ್ಯಂತದ ಯಾತ್ರಿಕರನ್ನು ಸೆಳೆಯುವ ಎತ್ತರದ ಪ್ರದೇಶದ ಹೇಮಿಸ್ ಮಠದ ಪ್ರಶಾಂತತೆಯಿಂದ ಹಿಡಿದು, 10ನೇ ಶತಮಾನದಲ್ಲಿ ಚಿತ್ರಿಸಲ್ಪಟ್ಟ ಮತ್ತು ಇಂದಿಗೂ ಭಕ್ತಿಯ ಪ್ರತಿಭೆಯಿಂದ ಕಂಗೊಳಿಸುತ್ತಿರುವ ಅಲ್ಚಿಯ ಪ್ರಾಚೀನ ಭಿತ್ತಿಚಿತ್ರಗಳವರೆಗೆ; ಶ್ಯೋಕ್ ನದಿಯ ಕಡೆಗೆ ಅನಂತ ಕರುಣೆಯ ನೋಟವನ್ನು ಬೀರುತ್ತಿರುವ ಡಿಸ್ಕಿಟ್‌ನ ಎತ್ತರದ ಮೈತ್ರೇಯ ಬುದ್ಧನಿಂದ ಹಿಡಿದು, ಟಿಬೆಟ್‌ನ ಮಹಾನ್ ಮಠಗಳಿಗೆ ಹೋಲಿಸಲ್ಪಡುವ ಥಿಕ್ಸೆಯ ಪದರ-ಪದರವಾದ ಜ್ಞಾನದವರೆಗೆ-ಲಡಾಖ್ ಒಂದು ಸಾವಿರ ವರ್ಷಗಳಿಗೂ ಅಧಿಕ ಕಾಲದಿಂದ ಬೌದ್ಧ ದರ್ಶನ, ಕಲೆ, ಹಸ್ತಪ್ರತಿ ಸಂಪ್ರದಾಯ ಮತ್ತು ಜೀವಂತ ಆಚರಣೆಗಳ ಜಗತ್ತಿನ ಅತ್ಯಂತ ಅಸಾಮಾನ್ಯ ಭಂಡಾರಗಳಲ್ಲಿ ಒಂದಾಗಿದೆ.

# ಬುದ್ಧ ಮನೆಗೆ ಮರಳಿದಾಗ

ಒಂದು ರಾಷ್ಟ್ರದ ಜೀವನದಲ್ಲಿ ಕೆಲವು ಕ್ಷಣಗಳು ಕೇವಲ ಪುನರಾವರ್ತನೆಯಾಗುವುದಷ್ಟೇ ಅಲ್ಲ, ಅವು ಮತ್ತಷ್ಟು ಗಾಢವಾಗುತ್ತವೆ. ಈ ಬುಧವಾರ ತಥಾಗತ ಬುದ್ಧನ ಪವಿತ್ರ ಅವಶೇಷಗಳು ಭಾರತದಲ್ಲಿ ಮೊದಲ ಬಾರಿಗೆ ಇಷ್ಟು ದೊಡ್ಡ ಮಟ್ಟದ ಸಾರ್ವಜನಿಕ ಪೂಜೆ ಹಾಗೂ ಗೌರವದೊಂದಿಗೆ ಲಡಾಖ್‌ಗೆ ಆಗಮಿಸುತ್ತಿರುವಾಗ, ನಾನು ಅಧಿಕೃತ ಭಾಷೆಗಿಂತಲೂ ಹಳೆಯದಾದ 'ಶ್ರದ್ಧೆ'ಯ ಭಾಷೆಯನ್ನು ಬಳಸಲು ಇಚ್ಛಿಸುತ್ತೇನೆ.

ಶತಮಾನಗಳಿಂದ ಲಡಾಖ್ ಈ ಧರ್ಮದ ಜ್ವಾಲೆಯನ್ನು ಎತ್ತಿ ಹಿಡಿದಿದೆ. ನದಿಗಳನ್ನೇ ಘನೀಕರಿಸುವ ಭಯಂಕರ ಚಳಿಗಾಲ, ದೃಢ ಮನಸ್ಸುಗಳನ್ನೇ ಪರೀಕ್ಷಿಸುವ ಭೌಗೋಳಿಕ ರಾಜಕೀಯ ಒತ್ತಡಗಳು, ಎತ್ತರದ ಪ್ರದೇಶದ ಪ್ರತ್ಯೇಕತೆ ಮತ್ತು ದುರ್ಗಮ ಹಾದಿಗಳ ನಡುವೆಯೂ ಲಡಾಖ್‌ನ ಜನರು ಅತ್ಯಂತ ನಿಷ್ಠೆಯಿಂದ ಧರ್ಮವನ್ನು ಜೀವಂತವಾಗಿರಿಸಿದ್ದು, ಈ ನಿಷ್ಠೆಯು ಪ್ರತಿಯೊಂದು ಸಂಸ್ಥೆ ಮತ್ತು ಸರ್ಕಾರವನ್ನು ವಿನಯದಿಂದ ಇರುವಂತೆ ಮಾಡುವುದಾಗಿದೆ. ಹಾಗಾಗಿ, ತಥಾಗತ ಅವಶೇಷಗಳ ಭಾರತದ ಮೊದಲ ಐತಿಹಾಸಿಕ ಸಾರ್ವಜನಿಕ ಪ್ರದರ್ಶನವು ಯಾವುದೋ ಮಹಾನಗರದ ಹವಾನಿಯಂತ್ರಿತ ವಸ್ತುಸಂಗ್ರಹಾಲಯದಲ್ಲಿ ನಡೆಯದೆ, ನಂಬಿಕೆಯೇ ದೈನಂದಿನ ಜೀವನದ ಬುನಾದಿಯಾಗಿರುವ ಈ 'ವಿಶ್ವದ ಛಾವಣಿ'ಯ ಮೇಲೆ ನಡೆಯುತ್ತಿರುವುದು ಅತ್ಯಂತ ಸೂಕ್ತವಾಗಿದೆ.

ಈ ಅವಶೇಷಗಳು ಎಲ್ಲಿಂದ ಬಂದಿವೆ ಎನ್ನುವುದನ್ನು ಗಮನಿಸಿ. ಅವು ಉತ್ತರ ಪ್ರದೇಶದ ಪಿಪ್ರಾಹ್ವಾದಿಂದ ಬಂದಿವೆ – ಇದು ಸಿದ್ಧಾರ್ಥ ಗೌತಮನ ಜನ್ಮಸ್ಥಳವಾದ ಪ್ರಾಚೀನ ಕಪಿಲವಸ್ತು ಎಂದು ಐತಿಹಾಸಿಕವಾಗಿ ಗುರುತಿಸಲ್ಪಟ್ಟಿದೆ. ಅವುಗಳನ್ನು ಲಡಾಖ್‌ಗೆ ತರುವುದು ಅಕ್ಷರಶಃ ಅವು 'ಮನೆಗೆ ಮರಳಿದಂತಿದೆ'.

### ಯುಗಗಳ ಇತಿಹಾಸವನ್ನು ಹೊತ್ತು ತರುತ್ತಿರುವ ಪ್ರಪ್ರಥಮ ಘಟನೆ

ತಥಾಗತ ಬುದ್ಧನ ಪವಿತ್ರ ಅವಶೇಷಗಳ ಈ ಪವಿತ್ರ ಪ್ರದರ್ಶನವು ಕೇವಲ ಒಂದು ಅಧಿಕೃತ ಶೀರ್ಷಿಕೆಯಲ್ಲ, ಅದೊಂದು "ಸಂಘರ್ಷದ ಕಾಲದಲ್ಲಿ ಶಾಂತಿ" ಎಂಬ ಘೋಷಣೆಯಾಗಿದೆ. ಯುದ್ಧ, ಭಿನ್ನಾಭಿಪ್ರಾಯ ಮತ್ತು ಹೆಚ್ಚುತ್ತಿರುವ ದ್ವೇಷದಿಂದ ತತ್ತರಿಸುತ್ತಿರುವ ಜಗತ್ತಿನಲ್ಲಿ, ಈ ಮಾತುಗಳು ಒಂದು ಸವಾಲಿನಂತಿವೆ–ಸಂಘರ್ಷವು ಅನಿವಾರ್ಯ, ಆಕ್ರಮಣಶೀಲತೆಯೇ ಶಕ್ತಿ ಮತ್ತು ಅನಿಶ್ಚಿತತೆಗೆ ಬಲಪ್ರಯೋಗವೇ ಏಕೈಕ ಉತ್ತರ ಎಂಬ ನಂಬಿಕೆಗಳಿಗೆ ಇವು ಸವಾಲು ಹಾಕುತ್ತವೆ. ಎರಡೂವರೆ ಸಾವಿರ ವರ್ಷಗಳ ಹಿಂದೆಯೇ ಭಗವಾನ್ ಬುದ್ಧ ಈ ಸವಾಲಿಗೆ ಉತ್ತರಿಸಿದ್ದರು. ಆ ಉತ್ತರ ಇಂದಿಗೂ ಪ್ರಸ್ತುತ ಎಂಬುದನ್ನು ಜಗತ್ತಿಗೆ ನೆನಪಿಸಲು ನಾವು ಅವರ ಭೌತಿಕ ಅಸ್ತಿತ್ವವನ್ನು ಮರಳಿ ತರುತ್ತಿದ್ದೇವೆ.

ಗೌತಮ ಬುದ್ಧನ ಪವಿತ್ರ ಅವಶೇಷಗಳನ್ನು ಅತ್ಯಂತ ಪಾವಿತ್ರ್ಯತೆಯಿಂದ ಸಂರಕ್ಷಿಸಲಾಗಿದೆ. ಅವುಗಳು ತಮ್ಮ ಕಾಯಂ ಸಂರಕ್ಷಣಾ ಸ್ಥಳದಿಂದ ಹೊರಬಂದು, ಇಷ್ಟು ದೊಡ್ಡ ಮಟ್ಟದ ಸಾರ್ವಜನಿಕ ಗೌರವದೊಂದಿಗೆ ಭಾರತದ ಮಣ್ಣಿನಲ್ಲಿ ಪ್ರದರ್ಶನಗೊಳ್ಳುತ್ತಿರುವುದು ಇದೇ ಮೊದಲು. ಝಡ್–ದರ್ಜೆಯ ಭದ್ರತೆಯೊಂದಿಗೆ, ವಿಶೇಷ ವಿಮಾನದ ಮೂಲಕ ಏಪ್ರಿಲ್ 29 ರಂದು ಇವು ಲೇಹ್‌ಗೆ ಆಗಮಿಸಿದವು. 2569ನೇ ವೈಶಾಖ ಬುದ್ಧ ಪೂರ್ಣಿಮೆಯ ಶುಭ ಸಂದರ್ಭದಲ್ಲಿ ಆರಂಭವಾಗಿ ಮೇ 1 ರಿಂದ 15 ರವರೆಗೆ ಹದಿನೈದು ದಿನಗಳ ಕಾಲ ಪ್ರಪಂಚದಾದ್ಯಂತದ ಭಕ್ತರು, ಭಿಕ್ಷುಗಳು, ವಿದ್ವಾಂಸರು ಮತ್ತು ಯಾತ್ರಿಕರಿಗೆ ಈ ಅವಶೇಷಗಳ ದರ್ಶನ ಲಭ್ಯವಿರುತ್ತದೆ.



ಈ ಸ್ಥಳಗಳೇ ತಮ್ಮದೇ ಆದ ಮಹತ್ವವನ್ನು ಸಾರುತ್ತವೆ. ಮಹಾಬೋಧಿ ಅಂತಾರಾಷ್ಟ್ರೀಯ ಧ್ಯಾನ ಕೇಂದ್ರ, ಐತಿಹಾಸಿಕ ಲೇಹ್ ಅರಮನೆಯ ಧರ್ಮ ಕೇಂದ್ರ ಮತ್ತು ಪರಮಪೂಜ್ಯ ದಲೈ ಲಾಮಾ ಅವರು ಪ್ರವಚನ ನೀಡಿದ ಅದೇ ಪವಿತ್ರ ಭೂಮಿ ಜಿವೆ–ತ್ಸಲ್ ಪ್ರವಚನ ಮೈದಾನ ಈ ಪ್ರದರ್ಶನಕ್ಕೆ ಆತಿಥ್ಯ ವಹಿಸಲಿವೆ. ಅಲ್ಲದೆ, ಈ ಅವಶೇಷಗಳು ಕೇವಲ ಲೇಹ್‌ಗೆ ಮಾತ್ರ ಸೀಮಿತವಾಗಿರುವುದಿಲ್ಲ. ಮೇ 11 ಮತ್ತು 12 ರ ನಡುವೆ, ಅವು ದೂರದ ಝಾನ್ಸ್ಕರ್ ಕಣಿವೆಗೆ ಪ್ರಯಾಣ ಬೆಳೆಸಲಿವೆ. ಅಲ್ಲಿನ ಭೌಗೋಳಿಕ ಕಂದಕಗಳಷ್ಟೇ ಆಳವಾಗಿರುವ ಬೌದ್ಧ ಸಂಪ್ರದಾಯಗಳನ್ನು ಪಾಲಿಸಿಕೊಂಡು ಬಂದಿರುವ ಸಮುದಾಯಕ್ಕೆ ಬುದ್ಧನ ಆಶೀರ್ವಾದವನ್ನು ಹೊತ್ತು ತರಲಿವೆ.

"ಇದು ಭಾರತದ ಆತ್ಮದ, ಆಳವಾದ ನಾಗರಿಕತೆಯ ಮತ್ತು ಛಿದ್ರಗೊಂಡಿರುವ ಈ ಜಗತ್ತಿಗೆ ಆಕೆ ನೀಡುತ್ತಿರುವ ಶಾಶ್ವತ ಸಂದೇಶದ ಆಚರಣೆಯಾಗಿದೆ".

### ಜ್ವಾಲೆಯನ್ನು ಎಂದಿಗೂ ಆರಲು ಬಿಡದ ನಾಡು

ಈ ಪ್ರದರ್ಶನಕ್ಕೆ ಲಡಾಖ್ ಏಕೆ ಅತ್ಯಂತ ಸೂಕ್ತವಾದ ಸ್ಥಳ ಎಂಬುದನ್ನು ಅರ್ಥಮಾಡಿಕೊಳ್ಳಲು, ಮೊದಲು ಲಡಾಖ್ ಎಂತಹುದು ಎಂಬುದನ್ನು ನಾವು ಅರ್ಥಮಾಡಿಕೊಳ್ಳಬೇಕಿದೆ. ಇದು ಕೇವಲ ಮಠಗಳು ಮತ್ತು ಪರ್ವತಗಳ ಮನಮೋಹಕ ಭೂಸದೃಶ್ಯವಲ್ಲ. ಇದು ಧರ್ಮದ ಒಂದು ಜೀವಂತ ವಿಶ್ವವಿದ್ಯಾಲಯ. ಹಿಮಾಲಯದಾದ್ಯಂತದ ಯಾತ್ರಿಕರನ್ನು ಸೆಳೆಯುವ ಎತ್ತರದ ಪ್ರದೇಶದ ಹೇಮಿಸ್ ಮಠದ ಪ್ರಶಾಂತತೆಯಿಂದ ಹಿಡಿದು, 10ನೇ ಶತಮಾನದಲ್ಲಿ ಚಿತ್ರಿಸಲ್ಪಟ್ಟ ಮತ್ತು ಇಂದಿಗೂ ಭಕ್ತಿಯ ಪ್ರತಿಭೆಯಿಂದ ಕಂಗೊಳಿಸುತ್ತಿರುವ ಅಲ್ಚಿಯ ಪ್ರಾಚೀನ ಭಿತ್ತಿಚಿತ್ರಗಳವರೆಗೆ; ಶ್ಯೋಕ್ ನದಿಯ ಕಡೆಗೆ ಅನಂತ ಕರುಣೆಯ ನೋಟವನ್ನು ಬೀರುತ್ತಿರುವ ಡಿಸ್ಕಿಟ್‌ನ ಎತ್ತರದ ಮೈತ್ರೇಯ ಬುದ್ಧನಿಂದ ಹಿಡಿದು, ಟಿಬೆಟ್‌ನ ಮಹಾನ್ ಮಠಗಳಿಗೆ ಹೋಲಿಸಲ್ಪಡುವ ಥಿಕ್ಸೇಯ ಪದರ–ಪದರವಾದ ಜ್ಞಾನದವರೆಗೆ–ಲಡಾಖ್ ಒಂದು ಸಾವಿರ ವರ್ಷಗಳಿಗೂ ಅಧಿಕ ಕಾಲದಿಂದ ಬೌದ್ಧ ದರ್ಶನ, ಕಲೆ, ಹಸ್ತಪ್ರತಿ ಸಂಪ್ರದಾಯ ಮತ್ತು ಜೀವಂತ ಆಚರಣೆಗಳ ಜಗತ್ತಿನ ಅತ್ಯಂತ ಅಸಾಮಾನ್ಯ ಭಂಡಾರಗಳಲ್ಲಿ ಒಂದಾಗಿದೆ.

ಈ ಮಠಗಳು ಮತ್ತು ಅಲ್ಲಿ ನೆಲೆಸಿರುವ ಭಿಕ್ಷುಗಳು–ಹಿಮಾಲಯ ಪ್ರದೇಶವು ಕಂಡ ಪ್ರತಿಯೊಂದು ಭೌಗೋಳಿಕ ರಾಜಕೀಯ ಬಿರುಗಾಳಿಗಳ ನಡುವೆಯೂ ಉಳಿದುಬಂದಿರುವ ಸಂಪ್ರದಾಯದ ಸಕ್ರಿಯ ವಾಹಕಗಳಾಗಿದ್ದಾರೆ. ಮತ್ತು ಅವರು ಈ ಸಂರಕ್ಷಣಾ ಕೆಲಸವನ್ನು ಹೆಚ್ಚಿನ ಆಡಳಿತಗಾರರ ಕಲ್ಪನೆಗೂ ನಿಲುಕದಂತಹ ಕಠಿಣ ಪರಿಸ್ಥಿತಿಗಳಲ್ಲಿ ಮಾಡಿದ್ದಾರೆ: ಅತ್ಯಂತ ಕಠಿಣ ಚಳಿ, ಸಂಪನ್ಮೂಲಗಳ ಕೊರತೆ, ಮೂಲಸೌಕರ್ಯಗಳ ಪ್ರತ್ಯೇಕತೆ ಮತ್ತು ಕೇವಲ ಬದುಕಲು ಅಪಾರ ಧೈರ್ಯವನ್ನು ಬಯಸುವ ಭೌಗೋಳಿಕ ಪರಿಸ್ಥಿತಿಗಳ ನಡುವೆಯೂ ಅವರು ಈ ಕಾರ್ಯ ಮಾಡಿದ್ದಾರೆ.

ಇದು ಲಡಾಖ್ ಸದಾ ಏನಾಗಿದೆಯೋ ಅದಕ್ಕೆ ಭಾರತ ನೀಡುತ್ತಿರುವ ಅಧಿಕೃತ ಮಾನ್ಯತೆಯಾಗಿದೆ–ಲಡಾಖ್ ಎನ್ನುವುದು ಭೂಪಟದ ಅಂಚಿನಲ್ಲಿರುವ ಕೇವಲ ಒಂದು ಪ್ರದೇಶವಲ್ಲ, ಬದಲಾಗಿ ಇದು ರಾಷ್ಟ್ರದ ಗುರುತಿನ ಕೇಂದ್ರಬಿಂದುವಾಗಿರುವ ಒಂದು ಮಿಡಿಯುವ ಆಧ್ಯಾತ್ಮಿಕ ಹೃದಯವಾಗಿದೆ.

### ನಾಗರಿಕತೆಯ ಆಳದಲ್ಲಿ ಅಡಗಿದ ದೂರದೃಷ್ಟಿ

ಧಾನಮಂತ್ರಿ ಶ್ರೀ ನರೇಂದ್ರ ಮೋದಿಯವರು ಲಡಾಖ್ ಅನ್ನು ಬೌದ್ಧ ಸಂಸ್ಕೃತಿ ಮತ್ತು ಆಧ್ಯಾತ್ಮಿಕತೆಯ ಒಂದು ಚೈತನ್ಯದಾಯಕ ಕೇಂದ್ರವೆಂದು ನಿರಂತರವಾಗಿ ಬಣ್ಣಿಸುತ್ತಾ ಬಂದಿದ್ದಾರೆ. ಅವರು ಲಡಾಖ್ ಜನರ ಸಹಿಷ್ಣುತೆ ಮತ್ತು ದೇಶಪ್ರೇಮದ ಬಗ್ಗೆ–ವಿಶೇಷವಾಗಿ ಗಡಿಯ ಕಠಿಣ ಪರಿಸ್ಥಿತಿಗಳಲ್ಲಿ ಅವರ ಧೈರ್ಯದ ಬಗ್ಗೆ–ಪದೇ ಪದೇ ಮಾತನಾಡುತ್ತಿದ್ದಾರೆ. ಅವರ ಆಧ್ಯಾತ್ಮಿಕ ಶಕ್ತಿಯನ್ನು ರಾಷ್ಟ್ರೀಯ ಸಂಕಲ್ಪ ಮತ್ತು ಏಕತೆಯೊಂದಿಗೆ ಅವರು ಬೆಸೆದಿದ್ದಾರೆ. ಲಡಾಖ್‌ನ ಅಭಿವೃದ್ಧಿಯು ಅಲ್ಲಿನ ವಿಭಿನ್ನ ಸಂಸ್ಕೃತಿ ಮತ್ತು ಪರಿಸರದ ಸಂರಕ್ಷಣೆಯೊಂದಿಗೆ ಜೊತೆಜೊತೆಯಾಗಿ ಸಾಗುತ್ತದೆ ಎಂಬುದನ್ನು ಅವರು ಸ್ಪಷ್ಟಪಡಿಸಿದ್ದಾರೆ.

ಪ್ರಧಾನಮಂತ್ರಿಯವರು ಒತ್ತಿಹೇಳಿರುವಂತೆ: ಲಡಾಖ್ ಕೇವಲ ಅಪಾರ ಕಾರ್ಯತಂತ್ರದ ಪ್ರಾಮುಖ್ಯತೆಯ ಭೂಮಿಯಲ್ಲ, ಬದಲಾಗಿ ಇದು ಬುದ್ಧನ ಬೋಧನೆಗಳ ಜೀವಂತ ಕೇಂದ್ರವೂ ಹೌದು. ಈ ಪವಿತ್ರ ಅವಶೇಷಗಳ ಆಗಮನವು ಒಂದು ಆಧ್ಯಾತ್ಮಿಕ ಕೃಪೆ ಮಾತ್ರವಲ್ಲದೆ, ಬೌದ್ಧ ಪರಂಪರೆಯನ್ನು ಸಂರಕ್ಷಿಸುವಲ್ಲಿ ಲಡಾಖ್‌ನ ಶತಮಾನಗಳ ಹಳೆಯ ಪಾತ್ರಕ್ಕೆ ಮತ್ತು ರಾಷ್ಟ್ರದ ಸೇವೆಯಲ್ಲಿ ಅಲ್ಲಿನ ಜನರ ಧೈರ್ಯ ಹಾಗೂ ಸಮರ್ಪಣಾ ಮನೋಭಾವಕ್ಕೆ ಸಂದ ಗೌರವವಾಗಿದೆ.

ಲಡಾಖ್ ರಾಷ್ಟ್ರೀಯ ಭದ್ರತೆಯ ಮುಂಚೂಣಿ ನೆಲೆ ಮತ್ತು ನಾಗರಿಕತೆಯ ಜ್ಞಾನದ ಭದ್ರಕೋಟೆ ಎರಡೂ ಹೌದು ಎನ್ನುವ ಈ ಚಿಂತನೆಯೇ ಒಂದು ಮಹಾನ್ ದೂರದೃಷ್ಟಿಯಾಗಿದ್ದು, ಆ ಪ್ರದೇಶದ ಬಗ್ಗೆ ನಾವು ಹೊಂದಬಹುದಾದ ಅತ್ಯಂತ ಸುಸಂಬದ್ಧವಾದ ತಿಳಿವಳಿಕೆಯಾಗಿದೆ.

### ಛಿದ್ರಗೊಂಡ ಜಗತ್ತಿಗೆ ಲಡಾಖ್ ಏನು ಕಲಿಸುತ್ತದೆ?

ಈ ಪ್ರದರ್ಶನವು ಭಾರತವು ಈವರೆಗೆ ಆಯೋಜಿಸಿದ ಬೌದ್ಧ ಸಮುದಾಯಗಳ ಬೃಹತ್ ಸಭೆಗಳಲ್ಲಿ ಒಂದಾಗಲಿದೆ ಎಂದು ನಿರೀಕ್ಷಿಸಲಾಗಿದೆ. ಹೆಚ್ಚುತ್ತಿರುವ ಸಂಘರ್ಷ, ಧ್ರುವೀಕರಣ ಮತ್ತು ಪರಸ್ಪರ ಸಂಶಯದ ರಾಜಕಾರಣದಿಂದ ವ್ಯಾಖ್ಯಾನಿಸಲ್ಪಡುತ್ತಿರುವ ಇಂದಿನ ಜಗತ್ತಿನಲ್ಲಿ, ಈ ಮಹಾಸಭೆಯು ಕೇವಲ ಧರ್ಮವನ್ನಷ್ಟೇ ಅಲ್ಲದೆ ಅದನ್ನೂ ಮೀರಿದ ಒಂದು ಮಹಾನ್ ಸಂದೇಶವನ್ನು ಸಾರಲಿದೆ.

ಅಹಿಂಸೆ, ಕರುಣೆ ಮತ್ತು ಅಂತರಂಗದ ಜಾಗೃತಿಯ ಬಗ್ಗೆ ಬುದ್ಧ ನೀಡಿರುವ ಬೋಧನೆಗಳು ಯಾವುದೇ ಒಂದು ಸಮುದಾಯ, ಪಂಥ ಅಥವಾ ಪರಂಪರೆಯ ಸ್ವತ್ತಲ್ಲ. ಲಡಾಖ್‌ನಲ್ಲಿ ಪ್ರವರ್ಧಮಾನಕ್ಕೆ ಬಂದಿರುವ ಗೆಲುಗ್, ದ್ರುಕ್ಪಾ, ಕಗ್ಯು ಅಥವಾ ಇತರ ಯಾವುದೇ ಭವ್ಯ ಪರಂಪರೆಗಳಿರಲಿ, ಧರ್ಮದ ಸಾರವು ಮಾತ್ರ ಒಂದೇ ಆಗಿದೆ, ಅದುವೇ ಕರುಣಾ, ಪ್ರಜ್ಞಾ ಮತ್ತು ಸಾಮರಸ್ಯದ ಹಾದಿ.

ಹಿಮಪಾತ ಕಡಿಮೆಯಾಗಿ ಎತ್ತರದ ಪರ್ವತ ಹಾದಿಗಳಲ್ಲಿ ಮಂಜು ಕರಗಿ, ಈ ಪ್ರದೇಶವು ವಸಂತಕಾಲವನ್ನು ಬರಮಾಡಿಕೊಳ್ಳುತ್ತಿರುವ ಈ ಸಮಯದಲ್ಲಿ ನಡೆಯುತ್ತಿರುವ ಈ ಪವಿತ್ರ ಪ್ರದರ್ಶನವು ನಮ್ಮನ್ನು ವಿಭಜಿಸುವ ಪ್ರತಿಯೊಂದು ಗಡಿಗಳನ್ನು–ಪಂಥ, ರಾಷ್ಟ್ರೀಯತೆ ಮತ್ತು ಭಯದ ಗಡಿಗಳನ್ನು–ದಾಟಲು ನೀಡುತ್ತಿರುವ ಒಂದು ಆಹ್ವಾನವಾಗಿದೆ. "ಈ ಪವಿತ್ರ ಅವಶೇಷಗಳು ಭಕ್ತರನ್ನು ಹರಸುತ್ತವೆ. ಆದರೆ, ಅತ್ಯಂತ ಶಾಂತವಾಗಿರುವ ಶಕ್ತಿಯ ರೂಪಗಳೇ ಸದಾ ಕಾಲ ಬಾಳಿಕೆ ಬರುತ್ತವೆ ಎಂಬುದನ್ನು ಇಡೀ ಜಗತ್ತಿಗೆ ನೆನಪಿಸುತ್ತವೆ".

### ಈ ಜೀವಂತ ಪರಂಪರೆಗೆ ನಮ್ಮ ಬದ್ಧತೆ

ಲಡಾಖ್ ಅನ್ನು ವಿಶ್ವದ ಬೌದ್ಧ ಸಂಸ್ಕೃತಿಯ ಅತ್ಯಂತ ಪ್ರಮುಖ ಜೀವಂತ ಕೇಂದ್ರಗಳಲ್ಲಿ ಒಂದೆಂದು ಭಾರತ ಸರ್ಕಾರವು ಗುರುತಿಸಿದೆ. ಕೇವಲ ನೀತಿ ದಾಖಲೆಗಳ ಭಾಷೆಯಲ್ಲಷ್ಟೇ ಅಲ್ಲದೆ, ಪ್ರಾಯೋಗಿಕವಾಗಿಯೂ ನಾವು ಅಲ್ಲಿನ ಮಠಗಳ ಸಂರಕ್ಷಣೆ, ಬೌದ್ಧ ವಿದ್ವತ್ತಿನ ಉತ್ತೇಜನ ಮತ್ತು ಅಲ್ಲಿನ ವಿಶಿಷ್ಟ ಸಾಂಸ್ಕೃತಿಕ ಸಂಪ್ರದಾಯಗಳ ರಕ್ಷಣೆಗೆ ಬದ್ಧರಾಗಿದ್ದೇವೆ. ಈ ಪ್ರದರ್ಶನದ ಭಾಗವಾಗಿ ಭಾರಿ ಸಂಖ್ಯೆಯ ಭಿಕ್ಷುಗಳನ್ನು ಒಳಗೊಂಡ ಬೃಹತ್ ಬೌದ್ಧ ಜಪ ಕಾರ್ಯಕ್ರಮವನ್ನು ಆಯೋಜಿಸಲಾಗುತ್ತಿದೆ–ಇದು ಗಿನ್ನೆಸ್ ವಿಶ್ವ ದಾಖಲೆಗೆ ಸೇರ್ಪಡೆಯಾಗಲಿದೆ ಎಂಬುದು ಆಯೋಜಕರ ಆಶಯವಾಗಿದೆ. ಇದು ಈ ಭೂಮಿಯು ಹೊಂದಿರುವ ಅಗಾಧ ಭಕ್ತಿಯ ಸಂಕೇತವೂ ಆಗಿದೆ.

ಈ ಶ್ರೀಮಂತ ಪರಂಪರೆಯು ಪ್ರವರ್ಧಮಾನಕ್ಕೆ ಬರಲು ಮತ್ತು ಜಗತ್ತನ್ನು ತಲುಪಲು ಕೇಂದ್ರ ಸರ್ಕಾರವು ಮಠಗಳ ಸಂಸ್ಥೆಗಳೊಂದಿಗೆ ಮತ್ತು ಲಡಾಖ್ ಜನರೊಂದಿಗೆ ನಿಕಟವಾಗಿ ಕಾರ್ಯನಿರ್ವಹಿಸುವುದನ್ನು ಮುಂದುವರಿಸುತ್ತದೆ. ಲಡಾಖ್ ಪ್ರವಾಸೋದ್ಯಮ ಮತ್ತು ಈ ಪವಿತ್ರ ಪ್ರದರ್ಶನಕ್ಕಾಗಿ ಇತ್ತೀಚೆಗೆ ಆರಂಭಿಸಲಾದ ಡಿಜಿಟಲ್ ಪೋರ್ಟಲ್‌ಗಳು ಈ ನಿಟ್ಟಿನಲ್ಲಿ ಮಹತ್ವದ ಹೆಜ್ಜೆಗಳಾಗಿವೆ.

ಸಂಸ್ಕೃತಿ ಸಚಿವಾಲಯ, ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ, ಅಂತರಾಷ್ಟ್ರೀಯ ಬೌದ್ಧ ಒಕ್ಕೂಟ (ಐಬಿಸಿ) ಮತ್ತು ಲಡಾಖ್‌ನ ಸ್ಥಳೀಯ ಸಂಸ್ಥೆಗಳಾದ ಗೊಂಪಾ ಅಸೋಸಿಯೇಷನ್, ಬೌದ್ಧ ಅಸೋಸಿಯೇಷನ್ ಹಾಗೂ ಲೆಫ್ಟಿನೆಂಟ್ ಗವರ್ನರ್ ಶ್ರೀ ವಿನಯ್ ಕುಮಾರ್ ಸಕ್ಸೇನಾ ಅವರ ನೇತೃತ್ವದ ಕೇಂದ್ರಾಡಳಿತ ಪ್ರದೇಶದ ಆಡಳಿತವು ಒಗ್ಗೂಡಿ ಕಾರ್ಯನಿರ್ವಹಿಸಿವೆ. ಈ ಒಗ್ಗಟ್ಟು ಪವಿತ್ರ ಅವಶೇಷಗಳು ಸಾರುವ ಬೋಧನೆಗೆ ಕನ್ನಡಿ ಹಿಡಿದಂತಿದೆ.

### ನಮ್ಮೆಲ್ಲರಿಗೂ ಸೇರಿದ ಕ್ಷಣ

ಈ ಬುಧವಾರ ತಥಾಗತ ಬುದ್ಧನ ಪವಿತ್ರ ಅವಶೇಷಗಳು ಲಡಾಖ್‌ಗೆ ಆಗಮಿಸುತ್ತಿದ್ದಂತೆ, ಯಾವುದೋ ಒಂದು ಪ್ರಾಚೀನ ಶಕ್ತಿ ಜಾಗೃತಗೊಂಡಂತಾಗುತ್ತಿದೆ. ಯಾವುದೋ ಒಂದು ನಿರ್ದಿಷ್ಟ ಕಾಲದ ರಾಜಕೀಯ ಚಕ್ರಕ್ಕಿಂತ ಹೆಚ್ಚಾಗಿ, ಒಂದು ನಾಗರಿಕತೆಯ ಜೀವನದಲ್ಲಿ ಕೆಲವು ವಿಷಯಗಳು ಅತ್ಯಂತ ಮಹತ್ವದ್ದಾಗಿರುತ್ತವೆ ಎಂಬುದರ ಸಾಕ್ಷಾತ್ಕಾರವಿದು. ಬುದ್ಧನ ಕರುಣೆಯ ಸಂದೇಶ ಅಂತಹ ಒಂದು ವಿಷಯ. ಆ ಸಂದೇಶಕ್ಕೆ ಲಡಾಖ್ ತೋರುತ್ತಿರುವ ನಿಷ್ಠೆ ಮತ್ತೊಂದು ಮಹತ್ವದ ಸಂಗತಿಯಾಗಿದೆ.

ಬುದ್ಧನ ಆಶೀರ್ವಾದವು ಲಡಾಖ್‌ನ ಪ್ರತಿಯೊಂದು ಮನೆಗೆ ಶಾಂತಿಯನ್ನು, ಎಲ್ಲಾ ಸಮುದಾಯಗಳ ನಡುವೆ ಸಾಮರಸ್ಯವನ್ನು ಮತ್ತು ಎಲ್ಲಾ ಜೀವಿಗಳಿಗೆ ಆಧ್ಯಾತ್ಮಿಕ ಜಾಗೃತಿಯನ್ನು ತರಲಿ. ಈ ಪವಿತ್ರ ಪ್ರದರ್ಶನವು–ಯಾವುದೇ ಧರ್ಮವಿರಲಿ, ನಾವು ಎಲ್ಲೇ ಇರಲಿ–ನಮ್ಮೆಲ್ಲರಿಗೂ ಒಂದು ವಿಷಯವನ್ನು ನೆನಪಿಸಲಿ: ಮನುಷ್ಯನ ಅತ್ಯಂತ ಆಳವಾದ ಆಕಾಂಕ್ಷೆ ಸದಾ ಒಂದೇ ಆಗಿರುತ್ತದೆ. ಅದುವೇ ಇತರರಿಗೆ ನೋವುಂಟು ಮಾಡದೆ ಬದುಕುವುದು, ವಿವೇಕದಿಂದ ವರ್ತಿಸುವುದು ಮತ್ತು ನಾವು ಈ ಜಗತ್ತಿಗೆ ಬಂದಾಗ ಇದ್ದುದಕ್ಕಿಂತ ಸ್ವಲ್ಪ ಹೆಚ್ಚು ಶಾಂತಿಯುತವಾಗಿರುವಂತೆ ಈ ಜಗತ್ತನ್ನು ಬಿಟ್ಟು ಹೋಗುವುದು.

ಬುದ್ಧಂ ಶರಣಂ ಗಚ್ಛಾಮಿ ಧಮ್ಮಂ ಶರಣಂ ಗಚ್ಛಾಮಿ ಸಂಘಂ ಶರಣಂ ಗಚ್ಛಾಮಿ



- ಶ್ರೀ ಗಜೇಂದ್ರ ಸಿಂಗ್ ಶೇಖಾವತ್
(ಲೇಖಕರು ಕೇಂದ್ರ ಸಂಸ್ಕೃತಿ ಮತ್ತು ಪ್ರವಾಸೋದ್ಯಮ ಸಚಿವರು, ಭಾರತ ಸರ್ಕಾರ)

# 'ನೇಮಕಾತಿಯಲ್ಲಿ ಒಳಮೀಸಲಾತಿ ಆದೇಶ ವಾಪಸ್'

ಬೆಂಗಳೂರು

ಈ ಉದ್ದೇಶಿತ ಯೋಜನೆಗಾಗಿ 115.84 ಕೋಟಿ ರೂ.ಗಳ ಅಂದಾಜು ಮೊತ್ತದಲ್ಲಿ ಕಿಟ್‌ಗಳನ್ನು ವಿತರಿಸಲು ಸರ್ಕಾರ ಅನುಮೋದನೆ ನೀಡಿದೆ.

ಕನಿಷ್ಠ ಬೆಂಬಲ ಬೆಲೆ ಯೋಜನೆಯಡಿ ರೈತರಿಂದ ಬಿಳಿಜೋಳವನ್ನು ಖರೀದಿಸಲು ಸರ್ಕಾರ ನಿರ್ಧರಿಸಿದ್ದು, ಈ ಖರೀದಿ ಪ್ರಕ್ರಿಯೆಗೆ ಅತ್ಯಗತ್ಯವಾಗಿರುವ ಗೋಣಿ ಚೀಲಗಳನ್ನು ಖರೀದಿಸಲು ಸಚಿವ ಸಂಪುಟ ಅನುಮೋದನೆ ನೀಡಿದೆ. ಈ ಉದ್ದೇಶಕ್ಕಾಗಿ 21.35 ಕೋಟಿ ರೂ.ಗಳ ಮೊತ್ತವನ್ನು ವ್ಯಯಿಸಿ ಗೋಣಿ ಚೀಲಗಳನ್ನು ಖರೀದಿಸಲು ಸರ್ಕಾರ ಕ್ರಮ ಕೈಗೊಂಡಿದೆ ಎಂದು ಸಚಿವರು ತಿಳಿಸಿದರು.

ಸೌಜನ್ಯ ಅತ್ಯಾಚಾರ ಹಾಗೂ ಕೊಲೆ ಪ್ರಕರಣದ ವಿವರಣೆ ಸುಪ್ರೀಂಕೋರ್ಟ್ ಕೇಳಿದರೆ ಕೊಡುತ್ತೇವೆ. ಮರುತನಿಖೆ ವಿಚಾರವಾಗಿ ಸುಪ್ರೀಂಕೋರ್ಟ್‌ಗೆ ಸೌಜನ್ಯ ಅವರ ತಾಯಿ ಕುಸುಮಾವತಿ ಅರ್ಜಿ ಸಲ್ಲಿಸಿದ್ದಾರೆ. ಹೀಗಾಗಿ ಸುಪ್ರೀಂಕೋರ್ಟ್ ಪ್ರಕರಣದ ಕುರಿತಾದ ಸಂಪೂರ್ಣ ವಿವರಗಳನ್ನು ಸಲ್ಲಿಸುವಂತೆ ಸಿಬಿಐ ಹಾಗೂ ರಾಜ್ಯ ಸರ್ಕಾರಕ್ಕೆ ನಿರ್ದೇಶನ ನೀಡಿದೆ ಎಂದರು. ಆಂಧ್ರಪ್ರದೇಶದ ತಿರುಮಲದಲ್ಲಿರುವ ರಾಜ್ಯ ಸರ್ಕಾರಿ ಛತ್ರದ ನಿರ್ವಹಣೆಯ ಕುರಿತು ಮಹತ್ವದ ಬದಲಾವಣೆ ತರಲಾಗಿದ್ದು, ಇದುವರೆಗೂ ಕಂದಾಯ ಇಲಾಖೆಯ ಸುಪರ್ದಿಯಲ್ಲಿದ್ದ ಛತ್ರದ ನಿರ್ವಹಣೆಯನ್ನು ಇನ್ನು ಮುಂದೆ ಕರ್ನಾಟಕ ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮಕ್ಕೆ ವಹಿಸಲು ನಿರ್ಧರಿಸಲಾಗಿದೆ.

ಸಾರಿಗೆ ವಲಯಕ್ಕೆ ಉತ್ತೇಜನ ನೀಡುವ ನಿಟ್ಟಿನಲ್ಲಿ, ವಾಯವ್ಯ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಗೆ 80 ಹೊಸ ನಗರ ಸಾರಿಗೆ ಬಸ್‌ಗಳನ್ನು ಖರೀದಿಸಲು ಸಚಿವ ಸಂಪುಟ ಆಡಳಿತಾತ್ಮಕ ಅನುಮೋದನೆ ನೀಡಿದೆ. ಈ ಬಸ್‌ಗಳನ್ನು ಖರೀದಿಸಲು ಸುಮಾರು 32 ಕೋಟಿ ರೂ ಅಂದಾಜು ವೆಚ್ಚವನ್ನು ನಿಗದಿಪಡಿಸಲಾಗಿದೆ. ಇನ್ನು, ರಾಜ್ಯ ಶಿಕ್ಷಣ ನೀತಿ ಆಯೋಗ ಸಲ್ಲಿಸಿರುವ ಅಂತಿಮ ವರದಿಯ ಕುರಿತು ಸಂಪುಟ ಸಭೆಯಲ್ಲಿ ಚರ್ಚೆ ನಡೆದಿದೆಯಾದರೂ, ಈ ಬಗ್ಗೆ ಯಾವುದೇ ಅಂತಿಮ ನಿರ್ಣಯವನ್ನು ಕೈಗೊಂಡಿಲ್ಲ. ಹೆಚ್ಚಿನ ಮಾಹಿತಿಗಳೊಂದಿಗೆ ಮುಂದಿನ ಸಚಿವ ಸಂಪುಟ ಸಭೆಯಲ್ಲಿ ಈ ಕುರಿತು ಗಂಭೀರವಾಗಿ ಚರ್ಚಿಸಲು ಸರ್ಕಾರ ನಿರ್ಧರಿಸಿದೆ ಎಂದು ಸಚಿವರು ಮಾಹಿತಿ ನೀಡಿದರು.

# ಬೌರಿಂಗ್ ಆಸ್ಪತ್ರೆ ದುರಂತ: ಅಧಿಕಾರಿಗಳ ವಿರುದ್ಧ ಕ್ರಮ

ಬೆಂಗಳೂರು

ನಗರದ ಬೌರಿಂಗ್ ಆಸ್ಪತ್ರೆಯ ಕಾಂಪೌಂಡ್ ಗೋಡೆ ಕುಸಿದು ಏಳು ಮಂದಿ ಸಾವನ್ನಪ್ಪಿದ ದುರಂತದ ಹಿನ್ನೆಲೆಯಲ್ಲಿ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಆಯುಕ್ತರ ಸಭೆ ನಡೆಯಿತು.

ಘಟನೆಗೆ ಸಂಬಂಧಿಸಿದಂತೆ ಕಾರ್ಯಪಾಲಕ ಇಂಜಿನಿಯರ್ ಅವರನ್ನು ಅಮಾನತುಗೊಳಿಸಿ, ನೋಟಿಸ್ ನೀಡುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಸೂಚಿಸಿದರು. ಮಳೆಗಾಲದ ಸಂದರ್ಭದಲ್ಲಿ ಗೋಡೆಗೆ ಹಾನಿಯಾಗುವ ಸಾಧ್ಯತೆ ಇದ್ದರೂ ಕಾಮಗಾರಿ ವೇಳೆ ಮಣ್ಣು ಸುರಿದಿರುವ ಬಗ್ಗೆ ಮುಖ್ಯಮಂತ್ರಿಗಳು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

"ಗೋಡೆಗೆ ಹಾನಿಯಾಗುವ ಪರಿಸ್ಥಿತಿ ಇದ್ದಾಗಲೂ ಮಣ್ಣು ಸುರಿದದ್ದು ಏಕೆ? ಇದರ ಮೇಲ್ವಿಚಾರಣೆ ಯಾಕೆ ಮಾಡಲಾಗಲಿಲ್ಲ?" ಎಂದು ಆಸ್ಪತ್ರೆಯ ಮುಖ್ಯಸ್ಥರನ್ನು ಪ್ರಶ್ನಿಸಿದರು. ಜೊತೆಗೆ, ಆಸ್ಪತ್ರೆ ಮುಖ್ಯಸ್ಥರಿಗೂ ನೋಟಿಸ್ ನೀಡುವಂತೆ ಸೂಚನೆ ನೀಡಿದರು.

ನಗರದಲ್ಲಿ ಮಳೆಯಿಂದ ಉಂಟಾದ ಹಾನಿಯನ್ನು ಅವಲೋಕಿಸಿದ ಮುಖ್ಯಮಂತ್ರಿಗಳು, ತಕ್ಷಣವೇ ರಸ್ತೆ ಗುಂಡಿಗಳನ್ನು ಮುಚ್ಚುವಂತೆ ಅಧಿಕಾರಿಗಳಿಗೆ



ನಿರ್ದೇಶನ ನೀಡಿದರು. ನಿನ್ನೆ ಸುರಿದ ಭಾರೀ ಮಳೆಯಿಂದ 250ಕ್ಕೂ ಹೆಚ್ಚು ಮರಗಳು ಧರೆಗುರುಳಿದ್ದು, ಏಳು ಮಂದಿ ಮೃತಪಟ್ಟಿದ್ದಾರೆ. ಮೃತರ ಕುಟುಂಬಗಳಿಗೆ ತಲಾ ಐದು ಲಕ್ಷ ರೂಪಾಯಿ ಪರಿಹಾರ ಈಗಾಗಲೇ ಘೋಷಿಸಲಾಗಿದೆ. ಗಾಯಾಳುಗಳಿಗೆ ಉಚಿತ ಚಿಕಿತ್ಸೆ ಒದಗಿಸುವಂತೆ ಸೂಚಿಸಲಾಗಿದೆ.

ಮುಂಗಾರು ಮಳೆ ಆರಂಭಕ್ಕೂ ಮುನ್ನ ಅಗತ್ಯ ಸಿದ್ಧತೆಗಳನ್ನು ಪೂರ್ಣಗೊಳಿಸಬೇಕು ಎಂದು ಮುಖ್ಯಮಂತ್ರಿಗಳು ಸೂಚಿಸಿದರು. ನಗರದ ಐದು ವಲಯಗಳ ಆಯುಕ್ತರು ಮುಂಜಾಗ್ರತಾ ಕ್ರಮಗಳನ್ನು ತಕ್ಷಣ ಕೈಗೊಳ್ಳಬೇಕು. ಅಪಾಯಕಾರಿ ಹಾಗೂ ಒಣಗಿದ ಮರಗಳ ಕೊಂಬೆಗಳನ್ನು ಕಡಿದು ತೆರವುಗೊಳಿಸಬೇಕು ಎಂದು ತಿಳಿಸಿದ್ದಾರೆ.

ಮುಂದಿನ ದಿನಗಳಲ್ಲಿ ಭಾರೀ ಮಳೆಯ ಸಾಧ್ಯತೆ ಇರುವುದರಿಂದ ರಾಜಕಾಲುವೆಗಳಲ್ಲಿ ಹೂಳು ತೆಗೆಯುವ ಕಾರ್ಯವನ್ನು ತ್ವರಿತಗೊಳಿಸಿ, ಪ್ರವಾಹ ಪರಿಸ್ಥಿತಿ ಉಂಟಾಗದಂತೆ ಕ್ರಮ ಕೈಗೊಳ್ಳಬೇಕು ಎಂದರು. ಮಳೆಯಿಂದ ರಸ್ತೆಯಲ್ಲಿ ಬಿದ್ದಿರುವ ಕಸ ಹಾಗೂ ಮರದ ಕೊಂಬೆಗಳನ್ನು ಕೂಡಲೇ ತೆರವುಗೊಳಿಸುವಂತೆ ಸೂಚಿಸಿದರು.

ಅಂಡರ್ ಪಾಸ್‌ಗಳಲ್ಲಿ ಮಳೆ ನೀರು ನಿಲ್ಲದಂತೆ ಕ್ರಮ ಕೈಗೊಳ್ಳುವುದರ ಜೊತೆಗೆ, ಅಗತ್ಯವಿದ್ದಲ್ಲಿ ಜನರು ಬಳಸಬಾರದೆಂದು ಬ್ಯಾರಿಕೇಡ್ ಹಾಕುವಂತೆ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

## ದಾನಾಪುರ–ಬೆಂಗಳೂರು ವಿಶೇಷ ರೈಲು ಅವಧಿ ವಿಸ್ತರಣೆ; ಕೆಲವು ಮಾರ್ಗ ಬದಲಾವಣೆ

ಬೆಂಗಳೂರು

ಪ್ರಯಾಣಿಕರ ಹೆಚ್ಚುತ್ತಿರುವ ದಟ್ಟಣೆಯನ್ನು ನಿಯಂತ್ರಿಸುವ ಉದ್ದೇಶದಿಂದ ಪೂರ್ವ ಮಧ್ಯ ರೈಲ್ವೆ ದಾನಾಪುರ ಮತ್ತು ಸರ್ ಎಂ. ವಿಶ್ವೇಶ್ವರಯ್ಯ ಟರ್ಮಿನಲ್ ಬೆಂಗಳೂರು ನಡುವಿನ ವಿಶೇಷ ರೈಲುಗಳ ಸಂಚಾರ ಅವಧಿಯನ್ನು ವಿಸ್ತರಿಸಿದೆ.

ರೈಲು ಸಂಖ್ಯೆ 03251 ದಾನಾಪುರ–ಬೆಂಗಳೂರು ವಿಶೇಷ ರೈಲು, ಮೊದಲು ಏಪ್ರಿಲ್ 30, 2026ರವರೆಗೆ ಮಾತ್ರ ಸಂಚರಿಸಲು ನಿಗದಿಯಾಗಿದ್ದರೂ, ಇದೀಗ ಮೇ 31, 2026ರವರೆಗೆ ಮುಂದುವರಿಯಲಿದೆ. ಇದೇ ರೀತಿಯಾಗಿ, ರೈಲು ಸಂಖ್ಯೆ 03252 ಬೆಂಗಳೂರು–ದಾನಾಪುರ ವಿಶೇಷ ರೈಲು, ಮೇ 2, 2026ರವರೆಗೆ ಮಾತ್ರ ಸಂಚರಿಸಬೇಕಾಗಿದ್ದುದನ್ನು ಜೂನ್ 2, 2026ರವರೆಗೆ ವಿಸ್ತರಿಸಲಾಗಿದೆ.

ಈ ವಿಸ್ತರಿತ ಅವಧಿಯಲ್ಲಿ ಎರಡೂ ರೈಲುಗಳು ಪ್ರತಿ ದಿಕ್ಕಿನಲ್ಲಿ ತಲಾ 31 ಸುತ್ತುಗಳನ್ನು ಪೂರ್ಣಗೊಳಿಸಲಿವೆ. ಈ ರೈಲುಗಳ ವೇಳಾಪಟ್ಟಿ ಮತ್ತು ನಿಲ್ದಾಣಗಳಲ್ಲಿ ಯಾವುದೇ ಬದಲಾವಣೆ ಇರುವುದಿಲ್ಲ ಎಂದು ರೈಲ್ವೆ ಪ್ರಕಟಣೆ ತಿಳಿಸಿದೆ.

ಇದರೊಂದಿಗೆ, ಶ್ರವಣಬೆಳಗೊಳದಲ್ಲಿ ಹಳಿ ಯಂತ್ರೋಪಕರಣಗಳ ಕೆಲಸ ನಡೆಯುತ್ತಿರುವ ಹಿನ್ನೆಲೆ, ಮೇ 5ರಂದು ಬೆಂಗಳೂರಿನಿಂದ ಹೊರಡುವ ರೈಲು ಸಂಖ್ಯೆ 16511 ಬೆಂಗಳೂರು–ಕೋಝಿಕ್ಕೋಡ್ ವೇಗ ರೈಲು ಮಾರ್ಗ ಬದಲಾವಣೆಗೊಳಿಸಲಾಗಿದೆ.

ಈ ರೈಲು ಯಶವಂತಪುರ, ಚಿಕ್ಕಬಾಣಾವರ, ತುಮಕೂರು, ಅರಸೀಕೆರೆ ಮತ್ತು ಹಾಸನ ಮಾರ್ಗದ ಮೂಲಕ ಸಂಚರಿಸಲಿದ್ದು, ಸಾಮಾನ್ಯವಾಗಿ ನಿಲುಗಡೆಯಿರುವ ಕುಣಿಗಲ್, ಬಿ.ಜಿ. ನಗರ, ಶ್ರವಣಬೆಳಗೊಳ ಹಾಗೂ ಚನ್ನರಾಯಪಟ್ಟಣ ನಿಲ್ದಾಣಗಳಲ್ಲಿ ತಾತ್ಕಾಲಿಕವಾಗಿ ನಿಲುಗಡೆ ಇರುವುದಿಲ್ಲ.

## ಪತ್ರಕರ್ತ ಜಗನ್ಮೋಹನ್‌ರೆಡ್ಡಿ ಹತ್ಯೆ ಖಂಡನೆ

ಬಂಗಾರಪೇಟೆ

ಆಂಧ್ರ ಪ್ರದೇಶದ ಚಿತ್ತೂರು ಜಿಲ್ಲೆಯ ವಿ. ಕೋಟದಲ್ಲಿ ಏಪ್ರಿಲ್ 28ರಂದು ಪತ್ರಕರ್ತ ಜಗನ್ಮೋಹನ್ ರೆಡ್ಡಿ ಅವರ ಹತ್ಯೆ ನಡೆದ ಘಟನೆಗೆ ಕರ್ನಾಟಕ ರಾಜ್ಯ ವೃತ್ತಿನಿರತ ಪತ್ರಕರ್ತರ ಸಂಘ ತೀವ್ರ ಖಂಡನೆ ವ್ಯಕ್ತಪಡಿಸಿದೆ.

ಎಬಿಎನ್ ಆಂಧ್ರ ಜ್ಯೋತಿ ಸಂಸ್ಥೆಯಲ್ಲಿ ಕಾರ್ಯನಿರ್ವಹಿಸುತ್ತಿದ್ದ ಜಗನ್ಮೋಹನ್ ರೆಡ್ಡಿ ಅವರು ಬೆಳಗಿನ ನಡೆಯ ಸಂದರ್ಭದಲ್ಲಿ ಬೈಕ್‌ನಲ್ಲಿ ಬಂದ ದುಷ್ಕರ್ಮಿಗಳ ದಾಳಿಗೆ ಒಳಗಾಗಿ ಹತ್ಯೆಯಾಗಿರುವುದಾಗಿ ತಿಳಿದುಬಂದಿದೆ. ಈ ಘಟನೆ ಪತ್ರಿಕಾ ಸ್ವಾತಂತ್ರ್ಯದ ಮೇಲೆ ನಡೆದ ಗಂಭೀರ ದಾಳಿ ಎಂದು ಸಂಘ ಅಭಿಪ್ರಾಯಪಟ್ಟಿದ್ದು, ಸ್ಥಳೀಯರಲ್ಲಿ ಭೀತಿಯ ವಾತಾವರಣ ಉಂಟಾಗಿದೆ ಎಂದು ತಿಳಿಸಿದೆ.

ಸಂಘದ ರಾಜ್ಯಾಧ್ಯಕ್ಷ ಶಿವಪ್ರಸಾದ್ ಜಿ. ಹಾಗೂ ಗೌರವ ಕಾರ್ಯಾಧ್ಯಕ್ಷ ವೆಂಕಟಶಿವಾರೆಡ್ಡಿ ಅವರು ಚಿತ್ತೂರು ಜಿಲ್ಲಾ ಪೊಲೀಸ್ ಅಧೀಕ್ಷಕರಿಗೆ ಪತ್ರ ಬರೆದು ತಕ್ಷಣ ಕ್ರಮ ಕೈಗೊಳ್ಳುವಂತೆ ಒತ್ತಾಯಿಸಿದ್ದಾರೆ.

ಪತ್ರಕರ್ತರು ಸಮಾಜದ ಕಣ್ಣುಗಳಾಗಿ ಕಾರ್ಯನಿರ್ವಹಿಸುತ್ತಿದ್ದು, ಅವರ ಮೇಲೆ ನಡೆಯುವ ಹಿಂಸಾಚಾರವನ್ನು ಯಾವುದೇ ಕಾರಣಕ್ಕೂ ಸಹಿಸಲಾಗುವುದಿಲ್ಲ ಎಂದು ಸಂಘ ಸ್ಪಷ್ಟಪಡಿಸಿದೆ. ಸಂಬಂಧಿತ ಅಧಿಕಾರಿಗಳು ತಕ್ಷಣ ಕ್ರಮ ಕೈಗೊಂಡು ನ್ಯಾಯ ಒದಗಿಸಬೇಕು ಎಂದು ಸಂಘ ಒತ್ತಾಯಿಸಿದೆ.

# ಹೋರಾಟಕ್ಕೆ ಮತ್ತೊಂದು ಹೆಸರು ಬಿಎಸ್‌ವೈ: ವಿಜಯೇಂದ್ರ

ತುಮಕೂರು

ಅಪ್ರತಿಮ ಹೋರಾಟಗಾರ, ರೈತ ನಾಯಕ, ಬಡವರ ಕಣ್ಮಣಿ, ಮಾಜಿ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಅವರ ರಾಜಕೀಯ ಜೀವನದ 50 ವರ್ಷಗಳ ಪಯಣ ಪೂರೈಸಿದ ಶುಭ ಘಳಿಗೆಯಲ್ಲಿ ಬಿ.ಎಸ್.ವೈ ಅವರ ಅಭಿಮಾನೋತ್ಸವವನ್ನು ನಡೆಸಲಾಗುತ್ತಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಮತ್ತು ಶಾಸಕ ಬಿ.ವೈ.ವಿಜಯೇಂದ್ರ ಅವರು ತಿಳಿಸಿದ್ದಾರೆ.

ಅಭಿಮಾನೋತ್ಸವದ ಪೂರ್ವಭಾವಿ ಸಭೆಯಲ್ಲಿ ಅವರು ಇಂದು ಮಾತನಾಡಿದರು. ಯಡಿಯೂರಪ್ಪ ಅವರು ಕರ್ನಾಟಕದಲ್ಲಿ ಹೋರಾಟಕ್ಕೆ ಮತ್ತೊಂದು ಹೆಸರು ಎಂದು ಅವರು ವಿಶ್ಲೇಷಿಸಿದರು. ಪರಿಶ್ರಮ, ಛಲಕ್ಕೆ ಅವರು ಹೆಸರು ಪಡೆದವರು.

ಬಡವರು, ಶೋಷಿತ– ಪೀಡಿತರು, ರೈತರ ಪರವಾಗಿ ಅವರ ಧ್ವನಿಯಾಗಿ 5 ದಶಕಗಳಿಂದ ನಿರಂತರವಾಗಿ ಕೆಲಸ



ಮಾಡಿದ್ದಾರೆ ಎಂದು ನುಡಿದರು.

ಮಾಜಿ ಉಪ ಮುಖ್ಯಮಂತ್ರಿ ಮತ್ತು ಸಂಸದ ಗೋವಿಂದ ಕಾರಜೋಳ ಅವರು ಮಾತನಾಡಿ, ಈ ಕಾರ್ಯಕ್ರಮಕ್ಕೆ 10 ಲಕ್ಷಕ್ಕೂ ಹೆಚ್ಚು ಜನರನ್ನು ನಿರೀಕ್ಷಿಸಿರುವುದಾಗಿ ತಿಳಿಸಿದರು.

ರಾಜ್ಯ ಬಿಜೆಪಿ ಪ್ರಧಾನ ಕಾರ್ಯದರ್ಶಿ ಪ್ರೀತಂ ಗೌಡ ಅವರು ಮಾತನಾಡಿ, ಪಕ್ಷದ ಒಳಿತಿಗಾಗಿ ಈ ಕಾರ್ಯಕ್ರಮ ನಡೆಸಲು ಯಡಿಯೂರಪ್ಪ ಅವರು ಒಪ್ಪಿದ್ದಾರೆ ಎಂದು ವಿವರಿಸಿದರು.

50 ವರ್ಷಗಳ ಸಾರ್ವಜನಿಕ ಜೀವನದಲ್ಲಿ ಸಾಧನೆ ಮಾತನಾಡುವಂತೆ ಬದುಕಿದ್ದಾರೆ ಎಂದು ತಿಳಿಸಿದರು. ಅಧಿಕಾರ ಬರುವುದಕ್ಕೆ ಮೊದಲು ನಾನು ಅಹಿಂದ ನಾಯಕ ಎಂದು ಹೇಳಿಕೊಂಡವರನ್ನು ನೋಡಿದ್ದೇವೆ. ಮಣ್ಣಿನ ಮಕ್ಕಳು, ಹಿಂದುಳಿದ ವರ್ಗದ ನಾಯಕ ಎಂದವರನ್ನು ನೋಡಿದ್ದೇವೆ.

02/05/2026

ಭಾರತ ಸಾರಥಿ

BHARATHA SARATHI KANNADA DAILY NEWS PAPER

ಬೆಂಗಳೂರು | ಬೆಂ.ಗ್ರಾಮಾಂತರ | ತುಮಕೂರು | ಮೈಸೂರು | ಮಂಡ್ಯ | ರಾಮನಗರ | ಕೋಲಾರ | ಚಿಕ್ಕಬಳ್ಳಾಪುರ | ಚಿತ್ರದುರ್ಗ | ದಾವಣಗೆರೆ | ಶಿವಮೊಗ್ಗ | ಮಂಗಳೂರು | ಉಡುಪಿ | ಹುಬ್ಬಳ್ಳಿ | ಮಡಿಕೇರಿ | ಚಿಕ್ಕಮಗಳೂರು | ಹಾಸನ | ಬಳ್ಳಾರಿ

ಇ:ಪೇಪರ್: www.epaperbharathasarathi.com | ಇಮೇಲ್: desk.newsbox@gmail.com

# ಬಿಸಿಗಾಳಿ ಎಚ್ಚರಿಕೆ: ಆರೋಗ್ಯ ಕಾಪಾಡಿಕೊಳ್ಳಲು ಮನವಿ



ಚಿಕ್ಕಬಳ್ಳಾಪುರ

ಈ ವರ್ಷ ಅಪರೂಪದ ಮಟ್ಟಿಗೆ ತಾಪಮಾನ ಏರಿಕೆಯಾಗುವ ಸಾಧ್ಯತೆ ಇದ್ದು, ಬಿಸಿ ಗಾಳಿ ಹೆಚ್ಚಾಗಲಿದೆ ಎಂದು ಹವಾಮಾನ ಇಲಾಖೆ ಎಚ್ಚರಿಕೆ ನೀಡಿದೆ. ಸಾರ್ವಜನಿಕರು ಆರೋಗ್ಯ ಇಲಾಖೆಯ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸಿ ತಮ್ಮ ಆರೋಗ್ಯ ಕಾಪಾಡಿಕೊಳ್ಳಬೇಕು ಎಂದು ಉನ್ನತ ಶಿಕ್ಷಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಾ.ಎಂ.ಸಿ. ಸುಧಾಕರ್ ಮನವಿ ಮಾಡಿದರು.

ಜಿಲ್ಲಾ ಪಂಚಾಯತ್‌ನ ಸರ್ ಎಂ. ವಿಶ್ವೇಶ್ವರಯ್ಯ ಸಭಾಂಗಣದಲ್ಲಿ ನಡೆದ ತ್ರೈಮಾಸಿಕ ಕೆಡಿಪಿ ಸಭೆಯ ಅಧ್ಯಕ್ಷತೆ ವಹಿಸಿ ವಿವಿಧ ಇಲಾಖೆಗಳ ಪ್ರಗತಿ ಪರಿಶೀಲನೆ ನಡೆಸಿದ ಅವರು, "ರಾಜ್ಯದಲ್ಲಿ ಈ ವರ್ಷ ವಾಡಿಕೆಗಿಂತ ಕಡಿಮೆ ಮಳೆಯಾಗುವ ಸಾಧ್ಯತೆ ಇದೆ. ಆದರೆ ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಸಾಮಾನ್ಯ ಮಳೆಯಾಗಬಹುದು. ಮಳೆಯ ವೈಪರೀತ್ಯಗಳ ನಡುವೆಯೂ ಕುಡಿಯುವ ನೀರಿನ ಪೂರೈಕೆ ಸೇರಿದಂತೆ ಅಗತ್ಯ ಮುನ್ನೆಚ್ಚರಿಕೆ ಕ್ರಮಗಳನ್ನು ಕೈಗೊಳ್ಳಬೇಕು" ಎಂದು ಸೂಚಿಸಿದರು.

ಜಲಜೀವನ್ ಮಿಷನ್ ಯೋಜನೆಯಡಿ ಜಿಲ್ಲೆಯಲ್ಲಿ ಕೊರೆದಿರುವ 313 ಕೊಳವೆಬಾವಿಗಳಿಗೆ ಶೀಘ್ರ ವಿದ್ಯುತ್ ಸಂಪರ್ಕ ಕಲ್ಪಿಸಿ ಜನರಿಗೆ ನೀರು ಪೂರೈಸಲು ಸೂಚಿಸಲಾಗಿದೆ. ಕುಡಿಯುವ ನೀರಿನ ತುರ್ತು ಕ್ರಮಗಳಿಗಾಗಿ ರಾಜ್ಯ ಸರ್ಕಾರದಿಂದ 1.5 ಕೋಟಿ ಅನುದಾನ ಬಿಡುಗಡೆಯಾಗಿದ್ದು, ಅಗತ್ಯವಿದ್ದರೆ ಇನ್ನಷ್ಟು ಅನುದಾನ ಕೂಡ ವಿಳಂಬವಿಲ್ಲದೆ ಬಿಡುಗಡೆ ಮಾಡುವುದಾಗಿ ಮುಖ್ಯಮಂತ್ರಿ ತಿಳಿಸಿದ್ದಾರೆ ಎಂದು ಮಾಹಿತಿ ನೀಡಿದರು.

ಚಿಕ್ಕಬಳ್ಳಾಪುರ ನಗರದ ಕಂದವಾರ ಹಾಗೂ ಗೋಪಾಲಕೃಷ್ಣ ಅಮಾನಿಕೆರೆಗೆ ಒಳಚರಂಡಿ ನೀರು ಸೇರುತ್ತಿರುವ ಸಮಸ್ಯೆಯನ್ನು ತಡೆಗಟ್ಟಲು 30 ಕೋಟಿ ವೆಚ್ಚದಲ್ಲಿ ಪೂರ್ಣ ಪ್ರಮಾಣದ ಒಳಚರಂಡಿ ವ್ಯವಸ್ಥೆ ನಿರ್ಮಾಣ ಕಾಮಗಾರಿ ಟೆಂಡರ್ ಹಂತದಲ್ಲಿದೆ ಎಂದರು.

ಇತ್ತೀಚಿನ ದಿನಗಳಲ್ಲಿ ಕುಡಿಯುವ ನೀರಿನ ಸಮಸ್ಯೆ ತೀವ್ರವಾಗುತ್ತಿದ್ದು, ಫೆಬ್ರವರಿಯಲ್ಲಿ 12 ಗ್ರಾಮಗಳು, ಮಾರ್ಚ್‌ನಲ್ಲಿ 23 ಗ್ರಾಮಗಳು ಮತ್ತು ಪ್ರಸ್ತುತ 31 ಗ್ರಾಮಗಳು ಸಮಸ್ಯೆಯನ್ನು ಎದುರಿಸುತ್ತಿವೆ. ಮುಂದಿನ ದಿನಗಳಲ್ಲಿ 108 ಗ್ರಾಮಗಳಿಗೆ ಸಮಸ್ಯೆ ಎದುರಾಗುವ ಸಾಧ್ಯತೆ ಇದ್ದು, ಖಾಸಗಿ ಕೊಳವೆಬಾವಿಗಳ ಸಹಕಾರದೊಂದಿಗೆ ನೀರು ಪೂರೈಸಲಾಗುತ್ತಿದೆ ಎಂದು ತಿಳಿಸಿದರು.

# ಬಂಗಾರಪೇಟೆ ದೊಡ್ಡ ಕೆರೆ ಸಂಕಟದಲ್ಲಿ; ಕೊಚ್ಚೆ ನೀರಿನಿಂದ ಮಾಲಿನ್ಯ ತೀವ್ರ

ಬಂಗಾರಪೇಟೆ

ನಗರದ ಜೀವನಾಡಿಯಾದ ದೊಡ್ಡ ಕೆರೆ ಗಂಭೀರ ಪರಿಸರ ಸಂಕಟವನ್ನು ಎದುರಿಸುತ್ತಿದೆ. ನಗರದಲ್ಲಿ ಹರಿಯುವ ಕೊಚ್ಚೆ ನೀರು ನೇರವಾಗಿ ಕೆರೆಗೆ ಸೇರುತ್ತಿರುವುದರಿಂದ ನೀರಿನ ಗುಣಮಟ್ಟ ಭಾರೀ ಮಟ್ಟದಲ್ಲಿ ಹದಗೆಟ್ಟಿದೆ.

ಕುಡಿಯುವ ನೀರಿನ ಪ್ರಮುಖ ಮೂಲವಾಗಿರುವ ಈ ಕೆರೆ, ಜೊತೆಗೆ ಅಂತರ್ಜಲ ಮಟ್ಟವನ್ನು ಹೆಚ್ಚಿಸುವ ಮಹತ್ವದ ಸಂಪನ್ಮೂಲವಾಗಿದ್ದು, ಅದರ ಮೇಲೆ ನಿರ್ಲಕ್ಷ್ಯ ತೋರಲಾಗುತ್ತಿರುವುದು ಆತಂಕಕಾರಿ ಬೆಳವಣಿಗೆಯಾಗಿದೆ.

> ಇಂತಹ ಗಂಭೀರ ಪರಿಸ್ಥಿತಿಯಲ್ಲಿಯೂ ನಗರಸಭೆ ಹಾಗೂ ಸಣ್ಣ ನೀರಾವರಿ ಇಲಾಖೆಗಳ ನಿರ್ಲಕ್ಷ್ಯ ಸ್ಪಷ್ಟವಾಗಿ ಗೋಚರಿಸುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಸಮಸ್ಯೆ ಎಲ್ಲರಿಗೂ ತಿಳಿದಿದ್ದರೂ ಸಮರ್ಪಕ ಕ್ರಮಗಳ ಕೊರತೆಯಿಂದ ಕೆರೆಯ ಸ್ಥಿತಿ ದಿನದಿಂದ ದಿನಕ್ಕೆ ಹದಗೆಡುತ್ತಿದೆ. ಕೊಚ್ಚೆ ನೀರು ಕೆರೆಗೆ ಸೇರುವುದನ್ನು ತಡೆಗಟ್ಟಲು ಸೂಕ್ತ ವ್ಯವಸ್ಥೆ ಮಾಡಬೇಕು. ಕೆರೆಯ ಸುತ್ತಮುತ್ತ ಸ್ವಚ್ಛತಾ ಕಾರ್ಯಗಳನ್ನು ಬಲಪಡಿಸಬೇಕು.

ಕೆರೆಗೆ ಸೇರುವ ಕೊಚ್ಚೆ ನೀರು ದುರ್ವಾಸನೆ ಉಂಟುಮಾಡುವುದರ ಜೊತೆಗೆ ಜನರ ಆರೋಗ್ಯಕ್ಕೂ ಗಂಭೀರ ಅಪಾಯವನ್ನುಂಟು ಮಾಡುತ್ತಿದೆ. ನೀರಿನಲ್ಲಿನ ರಾಸಾಯನಿಕ ಹಾಗೂ ಜೈವಿಕ ಮಲಿನಗಳು ಚರ್ಮರೋಗಗಳು, ಹೊಟ್ಟೆ ಸಂಬಂಧಿತ ಕಾಯಿಲೆಗಳು ಸೇರಿದಂತೆ ಹಲವಾರು ಸಮಸ್ಯೆಗಳಿಗೆ ಕಾರಣವಾಗುವ ಸಾಧ್ಯತೆ ಇದೆ. ಇದರ ಪರಿಣಾಮವಾಗಿ ಕೆರೆಯ ಸುತ್ತಮುತ್ತಲಿನ ಪರಿಸರ ಸಮತೋಲನವೂ ಹಾನಿಗೊಳಗಾಗುತ್ತಿದೆ.

ಇಂತಹ ಗಂಭೀರ ಪರಿಸ್ಥಿತಿಯಲ್ಲಿಯೂ ನಗರಸಭೆ ಹಾಗೂ ಸಣ್ಣ ನೀರಾವರಿ ಇಲಾಖೆಗಳ ನಿರ್ಲಕ್ಷ್ಯ ಸ್ಪಷ್ಟವಾಗಿ ಗೋಚರಿಸುತ್ತಿದೆ ಎಂದು ಸ್ಥಳೀಯರು ಆರೋಪಿಸಿದ್ದಾರೆ. ಸಮಸ್ಯೆ ಎಲ್ಲರಿಗೂ ತಿಳಿದಿದ್ದರೂ ಸಮರ್ಪಕ ಕ್ರಮಗಳ ಕೊರತೆಯಿಂದ ಕೆರೆಯ ಸ್ಥಿತಿ ದಿನದಿಂದ ದಿನಕ್ಕೆ ಹದಗೆಡುತ್ತಿದೆ.

ಕೊಚ್ಚೆ ನೀರು ಕೆರೆಗೆ ಸೇರುವುದನ್ನು ತಡೆಗಟ್ಟಲು ಸೂಕ್ತ ವ್ಯವಸ್ಥೆ ಮಾಡಬೇಕು. ಕೆರೆಯ ಸುತ್ತಮುತ್ತ ಸ್ವಚ್ಛತಾ ಕಾರ್ಯಗಳನ್ನು ಬಲಪಡಿಸಬೇಕು. ತ್ಯಾಜ್ಯ ವಿಲೇವಾರಿ ಕ್ರಮಗಳನ್ನು ಕಟ್ಟುನಿಟ್ಟಾಗಿ ಜಾರಿಗೊಳಿಸುವುದು ಅಗತ್ಯ.

ಜೊತೆಗೆ ಜನರಲ್ಲಿ ಪರಿಸರ ಜಾಗೃತಿ ಮೂಡಿಸಿ, ಕೆರೆ ಸಂರಕ್ಷಣೆಯಲ್ಲಿ ಅವರನ್ನು ಸಹಭಾಗಿಗಳನ್ನಾಗಿಸಬೇಕು.

ಕೆರೆಯ ಸಂರಕ್ಷಣೆ ಕೇವಲ ಅಧಿಕಾರಿಗಳ ಹೊಣೆಗಾರಿಕೆಯಲ್ಲ; ಪ್ರತಿಯೊಬ್ಬ ನಾಗರಿಕನ ಕರ್ತವ್ಯವೂ ಆಗಿದೆ. ಸರ್ಕಾರ ಮತ್ತು ಸಂಬಂಧಿತ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿದಾಗ ಮಾತ್ರ ಈ ಅಮೂಲ್ಯ ಜಲ ಸಂಪನ್ಮೂಲವನ್ನು ಉಳಿಸಬಹುದು.

ಕೊಚ್ಚೆ ನೀರು ಮತ್ತು ತ್ಯಾಜ್ಯದಿಂದ ಕೆರೆಯ ಸ್ವಚ್ಛತೆ ಮಾತ್ರವಲ್ಲ, ಅದರ ಸಹಜ ಸೌಂದರ್ಯಕ್ಕೂ ಹಾನಿಯಾಗಿದೆ. ಕೆರೆಗಳು ಪರಿಸರ ಸಮತೋಲನದ ಪ್ರಮುಖ ಅಂಶಗಳಾಗಿದ್ದು, ಅವುಗಳ ಸಂರಕ್ಷಣೆ ಅತ್ಯಾವಶ್ಯಕವಾಗಿದೆ.

ಈಗಲೇ ಎಚ್ಚೆತ್ತುಕೊಂಡು ಕ್ರಮ ಕೈಗೊಳ್ಳದಿದ್ದರೆ, ಮುಂದಿನ ಪೀಳಿಗೆಗಳಿಗೆ ಕಲುಷಿತ ಪರಿಸರವೇ ಉಳಿಯುವ ಅಪಾಯವಿದೆ.

ಆದ್ದರಿಂದ ಸ್ಥಳೀಯರು ಹಾಗೂ ಆಡಳಿತ ಒಗ್ಗೂಡಿ ಕೆರೆಯನ್ನು ರಕ್ಷಿಸುವ ಕಾರ್ಯಕ್ಕೆ ಮುಂದಾಗಬೇಕಾಗಿದೆ.

# ಸಂಚಾರ ದಟ್ಟಣೆ ನಿಯಂತ್ರಣಕ್ಕೆ ಕ್ರಮ

ಬೆಂಗಳೂರು:

ಬೆಂಗಳೂರು ದಕ್ಷಿಣ ನಗರ ಪಾಲಿಕೆಯ ಆಯುಕ್ತ ಕೆ.ಎನ್. ರಮೇಶ್ ಅವರು ನಗರದ ಪ್ರಮುಖ ಸಂಚಾರ ದಟ್ಟಣೆಯ ಪ್ರದೇಶಗಳು ಹಾಗೂ ಮಳೆಗಾಲದಲ್ಲಿ ನೀರು ನಿಲ್ಲುವ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಸಾರ್ವಜನಿಕರಿಗೆ ಸುಗಮ ಸಂಚಾರ ವ್ಯವಸ್ಥೆ ಕಲ್ಪಿಸುವ ಉದ್ದೇಶದಿಂದ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಅಧಿಕಾರಿಗಳಿಗೆ ಅಗತ್ಯ ಸೂಚನೆಗಳನ್ನು ನೀಡಿದರು.



ರಾಗಿಗುಡ್ಡ ಡಬಲ್ ಡೆಕ್ಕರ್ ಮೇಲ್ಸೇತುವೆಯ ಡೌನ್ ರ್‍ಯಾಂಪ್ ಬಳಿ ಉಂಟಾಗುತ್ತಿರುವ ಸಂಚಾರ ದಟ್ಟಣೆಯನ್ನು ಆಯುಕ್ತರು ಪರಿಶೀಲಿಸಿದರು. ಈ ಪ್ರದೇಶದಲ್ಲಿ ವಾಹನ ಸಂಚಾರ ಸುಗಮಗೊಳಿಸಲು ರಾಘವೇಂದ್ರ ಸ್ವಾಮಿ ಮಠ ಜಂಕ್ಷನ್ ಬಳಿ ಕೆಳಸೇತುವೆ ನಿರ್ಮಾಣದ ಕುರಿತು ಸಂಚಾರ ಪೊಲೀಸ್ ಹಾಗೂ ತಾಂತ್ರಿಕ ತಂಡದೊಂದಿಗೆ ಚರ್ಚೆ ನಡೆಸಿ ಪ್ರಾಥಮಿಕ ವರದಿಯನ್ನು ಅವಲೋಕಿಸಿದರು.

ನಗರದ ಪ್ರಮುಖ ಸಂಚಾರ ಕೇಂದ್ರವಾದ ಸಿಲ್ಕ್ ಬೋರ್ಡ್ ಜಂಕ್ಷನ್‌ನಲ್ಲಿ ಮಳೆಗಾಲದಲ್ಲಿ ನೀರು ನಿಲ್ಲುವ ಸಮಸ್ಯೆಯನ್ನು ಗಮನಿಸಿದ ಆಯುಕ್ತರು, ಅದರ ಮೂಲ ಕಾರಣಗಳನ್ನು ಪತ್ತೆಹಚ್ಚಿ ಮಳೆನೀರು ಸರಾಗವಾಗಿ ಹರಿದು ಹೋಗಲು ರಾಜಕಾಲುವೆ ಹಾಗೂ ಚರಂಡಿಗಳ ದುರಸ್ತಿಗೆ ತಕ್ಷಣ ಕ್ರಮ ಕೈಗೊಳ್ಳುವಂತೆ ಅಧಿಕಾರಿಗಳಿಗೆ ಸೂಚಿಸಿದರು. ಬನಶಂಕರಿ ದೇವಸ್ಥಾನ ಜಂಕ್ಷನ್‌ನಲ್ಲಿ ಪಾದಚಾರಿಗಳ ಸುರಕ್ಷತೆಗಾಗಿ ವೃತ್ತಾಕಾರದ ಸ್ಕೈ ವಾಕ್ ನಿರ್ಮಾಣ ಕಾಮಗಾರಿ ಪ್ರಾರಂಭ ಹಂತದಲ್ಲಿದ್ದು, ಈ ಕುರಿತು ಅಗತ್ಯ ನಿರ್ದೇಶನಗಳನ್ನು ನೀಡಿದರು. ಬೆಂಗಳೂರು ದಕ್ಷಿಣ ಭಾಗವನ್ನು ಸಂಚಾರ ದಟ್ಟಣೆಯಿಂದ ಮುಕ್ತಗೊಳಿಸಿ, ಸುಸಜ್ಜಿತ ಮೂಲಸೌಕರ್ಯ ಹೊಂದಿದ ಪ್ರದೇಶವನ್ನಾಗಿ ರೂಪಿಸಲು ಪಾಲಿಕೆ ಬದ್ಧವಾಗಿದೆ ಎಂದು ಆಯುಕ್ತರು ತಿಳಿಸಿದ್ದಾರೆ. ಈ ಸಂದರ್ಭದಲ್ಲಿ ಪಾಲಿಕೆಯ ಮುಖ್ಯ ಅಭಿಯಂತರ ಬಸವರಾಜ ಕಬಾಡೆ, ಕೆ.ವಿ. ರವಿ ಸೇರಿದಂತೆ ಪೊಲೀಸ್ ಇಲಾಖೆಯ ಹಿರಿಯ ಅಧಿಕಾರಿಗಳು ಹಾಗೂ ಇತರರು ಉಪಸ್ಥಿತರಿದ್ದರು.

# ಪರಿಹಾರ ವಿತರಣೆ



ಬೆಂಗಳೂರು

ನಗರದಲ್ಲಿ ಆಲಿಕಲ್ಲು ಸಹಿತ ಸುರಿದ ಭಾರೀ ಮಳೆಯಿಂದ ಬೌರಿಂಗ್ ಮತ್ತು ಲೇಡಿ ಕರ್ಜನ್ ಆಸ್ಪತ್ರೆಯ ಹಿಂಭಾಗದ ಕಾಂಪೌಂಡ್ ಗೋಡೆ ಕುಸಿದು ಏಳು ಮಂದಿ ಮೃತಪಟ್ಟ ಘಟನೆಗೆ ಸಂಬಂಧಿಸಿದಂತೆ, ಮೃತರ ಕುಟುಂಬದವರಿಗೆ ತಲಾ ಐದು ಲಕ್ಷ ರೂಪಾಯಿ ಪರಿಹಾರದ ಚೆಕ್‌ಗಳನ್ನು ವಿತರಿಸಲಾಗಿದೆ.

ಗ್ರೇಟರ್ ಬೆಂಗಳೂರು ಪ್ರಾಧಿಕಾರದ ಮುಖ್ಯ ಆಯುಕ್ತ ಮಹೇಶ್ವರ್ ರಾವ್ ಅವರು ಈ ಕುರಿತು ಮಾಹಿತಿ ನೀಡಿ, ಮೃತರ ವಾರಸುದಾರರಿಗೆ ಪರಿಹಾರವನ್ನು ವಿತರಿಸಿರುವುದಾಗಿ ತಿಳಿಸಿದ್ದಾರೆ.

ಮುಖ್ಯಮಂತ್ರಿ ಹಾಗೂ ಉಪಮುಖ್ಯಮಂತ್ರಿಗಳ ಸೂಚನೆಯಂತೆ, ನಗರದ ಎಂ.ಜಿ. ರಸ್ತೆಯಲ್ಲಿರುವ ಪಿ.ಯು.ಬಿ. ಕಟ್ಟಡದ ದಶಮ ಮಹಡಿಯ ಕೇಂದ್ರ ನಗರ ಪಾಲಿಕೆ ಆಯುಕ್ತರ ಕಚೇರಿ ಸಭಾಂಗಣದಲ್ಲಿ ಈ ಕಾರ್ಯಕ್ರಮ ನಡೆಯಿತು.

# ಅಭಿಮಾನೋತ್ಸವದ ಪೂರ್ವಭಾವಿ ಸಭೆ

ತುಮಕೂರು

ಬಿ.ಎಸ್. ಯಡಿಯೂರಪ್ಪ ಎಂದರೆ ಹೋರಾಟದ, ಪರಿಶ್ರಮದ, ತ್ಯಾಗದ ಸಂಕೇತ. ರೈತರ, ಬಡವರ, ಮಹಿಳೆಯರ ಪರ 50 ವರ್ಷಗಳಿಂದ ನಿರಂತರ ಹೋರಾಟ ಮಾಡಿಕೊಂಡು ಬಂದ ಯಡಿಯೂರಪ್ಪನವರು ಅಧಿಕಾರ ಅನುಭವಿಸಿದ್ದು ಕೇವಲ 5 ವರ್ಷ ಮಾತ್ರ. ನಗರ ಭಾಗದಲ್ಲಿ ಸೀಮಿತವಾಗಿದ್ದ ಬಿಜೆಪಿಯನ್ನು ಹಳ್ಳಿಹಳ್ಳಿಗೆ ತಲುಪಿಸಿ ಪಕ್ಷವನ್ನು ಬೆಳೆಸಿದ್ದರಲ್ಲಿ ಇವರ ಶ್ರಮ ಸಾಕಷ್ಟಿದೆ ಎಂಬುದು ಎಲ್ಲರಿಗೂ ಗೊತ್ತು. ಇಂತಹ ನಾಯಕನ 50 ವರ್ಷಗಳ ಹೋರಾಟದ ಬದುಕು ಸಂಭ್ರಮಿಸುವ ಬಿಎಸ್‌ವೈ ಅಭಿಮಾನೋತ್ಸವವನ್ನು ಯಶಸ್ವಿಗೊಳಿಸಬೇಕು ಎಂದು ರಾಜ್ಯ ಬಿಜೆಪಿ ಅಧ್ಯಕ್ಷ ಬಿ.ವೈ. ವಿಜಯೇಂದ್ರ ಮನವಿ ಮಾಡಿದರು.

ಮೇ 9ರಂದು ಚಿತ್ರದುರ್ಗದಲ್ಲಿ ನಡೆಯಲಿರುವ ಯಡಿಯೂರಪ್ಪನವರ 50ನೇ ವರ್ಷದ ಅಭಿಮಾನೋತ್ಸವ ಸಮಾರಂಭದ ಅಂಗವಾಗಿ ಗುರುವಾರ ನಗರದ ಸ್ನೇಹಸಂಗಮ ಬ್ಯಾಂಕ್ ಸಭಾಂಗಣದಲ್ಲಿ ನಡೆದ ಮುಖಂಡರ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ವಿಜಯೇಂದ್ರ, ಬಿಜೆಪಿ ಅಧಿಕಾರಕ್ಕೆ ಬರುತ್ತದೆ ಎಂದು ಕನಸಿನಲ್ಲಿಯೂ ಕಲ್ಪಿಸಿಕೊಳ್ಳಲಾಗದ ಕಾಲಘಟ್ಟದಲ್ಲಿ ಬಿ.ಎಸ್. ಯಡಿಯೂರಪ್ಪನವರು ರೈತರ, ಬಡವರ ಪರ ಹೋರಾಟ ಮಾಡಿಕೊಂಡು ಜೊತೆಜೊತೆಯಲ್ಲಿ ಪಕ್ಷವನ್ನೂ ಕಟ್ಟಿಬೆಳೆಸಿದರು. ಒಂದು ಕಾಲದಲ್ಲಿ ಇವರೊಬ್ಬರೇ ಬಿಜೆಪಿ ಶಾಸಕರಾಗಿದ್ದರು. ನಮ್ಮ ಪಕ್ಷಕ್ಕೆ ಬನ್ನಿ ಮಂತ್ರಿ ಮಾಡುತ್ತೇವೆ ಎಂದು ಆಡಳಿತ ಪಕ್ಷದ ನಾಯಕರೂ ಆಹ್ವಾನಿಸಿದರೂ ಬಿಎಸ್‌ವೈ ಪಕ್ಷ ಬಿಡಲಿಲ್ಲ, ಇವರು ಯಾವತ್ತೂ ಅಧಿಕಾರಕ್ಕಾಗಿ ಹಪಹಪಿಸಲಿಲ್ಲ ಎಂದರು.

ಯಡಿಯೂರಪ್ಪನವರು ಮುಖ್ಯಮಂತ್ರಿಯಾದ ಅವಧಿಯಲ್ಲಿ ರಾಜ್ಯದಲ್ಲಿ ಭೀಕರ ಬರಗಾಲ ಎದುರಾಗಿತ್ತು. ಒಬ್ಬರೇ ಹೋಗಿ ಸಂತ್ರಸ್ತರ ನೆರವಿಗೆ ನಿಂತರು. ರಾಯಚೂರು, ಕೊಪ್ಪಳ, ಬೀದರ್ ಜಿಲ್ಲೆಗಳಲ್ಲಿ ಬಡವರು ಮನೆ ಕಳೆದುಕೊಂಡಾಗ ಕೇಂದ್ರ ಸರ್ಕಾರದ ಒಂದು ಲಕ್ಷ ರೂ. ಅನುದಾನದ ಜೊತೆ ನಾಲ್ಕು ಲಕ್ಷ ಸೇರಿಸಿ ಐದು ಲಕ್ಷ ರೂ.ಗಳಲ್ಲಿ ಮನೆ ನಿರ್ಮಿಸಿಕೊಟ್ಟರು. ಆಗ ಕುಟುಂಬದವರೊಂದಿಗೆ ದೀಪಾವಳಿ ಆಚರಿಸಬೇಕಾದ ಮುಖ್ಯಮಂತ್ರಿ ಯಡಿಯೂರಪ್ಪನವರು ಸಂತ್ರಸ್ತರೊಂದಿಗೆ ದೀಪಾವಳಿ ಆಚರಿಸಿ ಅವರು ಕುಟುಂಬಗಳಲ್ಲಿ ಬೆಳಕು ಮೂಡಿಸಿದರು ಎಂದು ಬಿ.ವೈ. ವಿಜಯೇಂದ್ರ ಸ್ಮರಿಸಿಕೊಂಡರು.

# ಆಗಸ್ಟ್‌ನಲ್ಲಿ ವಿಶೇಷ ಲೋಕ ಅದಾಲತ್ ಅಭಿಯಾನ

ಕೋಲಾರ

ಸುಪ್ರೀಂ ಕೋರ್ಟ್‌ನಲ್ಲಿ ದೀರ್ಘಕಾಲದಿಂದ ಬಾಕಿ ಉಳಿದಿರುವ ಪ್ರಕರಣಗಳನ್ನು ಶೀಘ್ರವಾಗಿ ಮತ್ತು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ಸಾರ್ವಜನಿಕರಿಗೆ ಸುಪ್ರೀಂ ಕೋರ್ಟ್ ಐತಿಹಾಸಿಕ ಅವಕಾಶವೊಂದನ್ನು ಕಲ್ಪಿಸಿದೆ. ಈ ಕುರಿತು ಇಂದು ಹೈಕೋರ್ಟ್ ನ್ಯಾಯಮೂರ್ತಿಗಳಾದ ಗೌರವಾನ್ವಿತ ಅನು ಶಿವರಾಮನ್ ಮತ್ತು ಆರ್. ದೇವದಾಸ್ ಅವರು ಜಂಟಿ ಸುದ್ದಿಗೋಷ್ಠಿ ನಡೆಸಿ ಮಾಹಿತಿ ನೀಡಿದರು.



ಈ ವಿಶೇಷ ಅಭಿಯಾನವು ಆಗಸ್ಟ್ 21, 22 ಮತ್ತು 23ರಂದು ನಡೆಯಲಿದೆ.

ಸಾರ್ವಜನಿಕರು ದೆಹಲಿಗೆ ಹೋಗುವ ಅಗತ್ಯವಿಲ್ಲ. ಬದಲಾಗಿ, ತಾವು ಇರುವ ಜಿಲ್ಲೆಯ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರವನ್ನು ಸಂಪರ್ಕಿಸಿ ವ್ಯಾಜ್ಯ ಪರಿಹರಿಸಿಕೊಳ್ಳಬಹುದು.

ಈಗಾಗಲೇ ರಾಜ್ಯಾದ್ಯಂತ ಇಂತಹ ಸುಮಾರು 4,328 ಪ್ರಕರಣಗಳನ್ನುಈ ಅಭಿಯಾನಕ್ಕಾಗಿ ಗುರುತಿಸಲಾಗಿದೆ.

ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ನ್ಯಾಯಮೂರ್ತಿ ಅನು ಶಿವರಾಮನ್ ಅವರು, "ಜನಸಾಮಾನ್ಯರ ಸಮಯ ಮತ್ತು ಹಣವನ್ನು ಉಳಿಸುವ ಉದ್ದೇಶದಿಂದ ಸುಪ್ರೀಂ ಕೋರ್ಟ್ ಈ ವಿಶೇಷ ಯೋಜನೆಯನ್ನು ರೂಪಿಸಿದೆ. ಉಭಯ ಪಕ್ಷಗಾರರು ಒಪ್ಪಿಗೆ ಸೂಚಿಸಿದರೆ ಸ್ಥಳೀಯವಾಗಿಯೇ ಪ್ರಕರಣಗಳನ್ನು ಇತ್ಯರ್ಥಪಡಿಸಿಕೊಳ್ಳಲು ಇದು ನೆರವಾಗಲಿದೆ" ಎಂದರು.

ಮತ್ತೊಬ್ಬ ನ್ಯಾಯಮೂರ್ತಿಗಳಾದ ಆರ್. ದೇವದಾಸ್ ಅವರು ಮಾತನಾಡಿ, "ಇದು ಸರ್ವೋಚ್ಚ ನ್ಯಾಯಾಲಯದ ಇತಿಹಾಸದಲ್ಲೇ ಅತ್ಯಂತ ಮಹತ್ವದ ಮತ್ತು ಮೊದಲ ಪ್ರಯತ್ನವಾಗಿದೆ. ಬಹುವರ್ಷಗಳಿಂದ ನ್ಯಾಯಕ್ಕಾಗಿ ಕಾಯುತ್ತಿರುವವರಿಗೆ ಇದು ಸದವಕಾಶ. ಈ ಪ್ರಕ್ರಿಯೆಗೆ ವಕೀಲರು ಯಾವುದೇ ಅಡ್ಡಿಪಡಿಸುವುದಿಲ್ಲ ಎಂದು ನಾವು ಸ್ಪಷ್ಟಪಡಿಸುತ್ತೇವೆ," ಎಂದು ತಿಳಿಸಿದರು.

ಸುಪ್ರೀಂ ಕೋರ್ಟ್‌ನಲ್ಲಿ ಪ್ರಕರಣಗಳನ್ನು ಹೊಂದಿರುವ ಪಕ್ಷಗಾರರು ನೇರವಾಗಿ ತಮ್ಮ ಜಿಲ್ಲೆಯ ಪ್ರಧಾನ ನ್ಯಾಯಾಧೀಶರು ಅಥವಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳನ್ನು ಸಂಪರ್ಕಿಸಿ, ತಮ್ಮ ಕೇಸನ್ನು ಬಗೆಹರಿಸಿಕೊಳ್ಳುವ ಇಚ್ಛೆಯನ್ನು ವ್ಯಕ್ತಪಡಿಸಬಹುದು. ಜಿಲ್ಲಾ ಮಟ್ಟದಲ್ಲಿ ಇದಕ್ಕಾಗಿ ಅಗತ್ಯವಿರುವ ಎಲ್ಲಾ ತಾಂತ್ರಿಕ ಮತ್ತು ಕಾನೂನು ವ್ಯವಸ್ಥೆಗಳನ್ನು ಮಾಡಿಕೊಳ್ಳಲಾಗುವುದು.

ಈ ಅಭಿಯಾನವು ಕೇವಲ ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ಪ್ರಕರಣಗಳಿಗೆ ಮಾತ್ರ ಸೀಮಿತವಾಗಿರುತ್ತದೆ. ಎಂದರು.

ಸುದ್ದಿಗೋಷ್ಠಿಯಲ್ಲಿ ರಾಜ್ಯದ ಎಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳು ಕೋಲಾರದ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಆರ್. ನಟೇಶ್ ಹಾಗೂ ಇತರ ಗಣ್ಯರು ಉಪಸ್ಥಿತರಿದ್ದರು.

# ಗಾಳಿ ಮಳೆಗೆ ತೋಟ ನಾಶ

ಬೆಂಗಳೂರು

ಬುಧವಾರ ಬೆಂಗಳೂರಲ್ಲಿ ಸುರಿದ ಆಲಿಕಲ್ಲು ಸಹಿತ ಬಿರುಗಾಳಿ ಮಳೆಗೆ ಮೂರು ಎಕರೆ ಬಾಳೆ ತೋಟ ಸಂಪೂರ್ಣವಾಗಿ ನೆಲಸಮವಾದ ಘಟನೆ ನೆಲಮಂಗಲ ತಾಲೂಕಿನ ಹಕ್ಕಿನಾಳು ಗ್ರಾಮದಲ್ಲಿ ನಡೆದಿದೆ.

ರೈತ ಕೃಷ್ಣಪ್ಪ ಎಂಬುವವರಿಗೆ ಸೇರಿದ 3,000 ಬಾಳೆಗಿಡವಿದ್ದ ತೋಟ ಮಳೆಗೆ ಸಂಪೂರ್ಣವಾಗಿ ನೆಲಸಮವಾಗಿದೆ. ಹೆಂಡತಿಯ ಮಾಂಗಲ್ಯ ಸರ ಹಾಗೂ ಚಿನ್ನಾಭರಣ ಅಡವಿಟ್ಟು ಬಾಳೆ ಬೆಳೆದಿದ್ದು, ಮಳೆಗೆ ಬೆಳೆ ನಾಶವಾಗಿ ರೈತ ಕುಟುಂಬ ಕಣ್ಣೀರಿಡುತ್ತಿದೆ. ಸುಮಾರು 8–10 ಲಕ್ಷ ರೂಪಾಯಿ ವೆಚ್ಚದಲ್ಲಿ ಬಾಳೆ ಬೆಳೆಯಲಾಗಿತ್ತು. ಫಸಲು ಬಿಡುವ ವೇಳೆಯಲ್ಲಿ ಬಿರುಗಾಳಿ ಮಳೆಗೆ ಬಾಳೆ ಗಿಡಗಳು ಸಂಪೂರ್ಣವಾಗಿ ಧರೆಗುರುಳಿದೆ.

ರೈತ ಕೃಷ್ಣಪ್ಪ ಈ ಬಾರಿ ಸುಮಾರು 40 ರಿಂದ 45 ಲಕ್ಷ ರೂ. ಲಾಭದ ನಿರೀಕ್ಷೆಯಲ್ಲಿದ್ದರು. ಸದ್ಯ ಮಳೆಯಿಂದ ಬೆಳೆ ಕಳೆದುಕೊಂಡು ಸಂಕಷ್ಟದಲ್ಲಿರುವ ಕೃಷ್ಣಪ್ಪ ಕುಟುಂಬ ಸರ್ಕಾರದಿಂದ ಸೂಕ್ತ ಪರಿಹಾರ ನೀಡುವಂತೆ ಕಣ್ಣೀರಿಟ್ಟಿದ್ದಾರೆ.

# ಸಿಲಿಕಾನ್‌ಸಿಟಿಯಲ್ಲಿ ಬಿದದ್ದು 170ಕ್ಕೂ ಹೆಚ್ಚು ಮರಗಳು

ಬೆಂಗಳೂರು

ಅದ್ಯಾವ ರಸ್ತೆಯಲ್ಲಿ ಯಾವಾಗ ಏನಾಗುತ್ತೋ ಅನ್ನೋ ಭಯ ಇದೀಗ ಬೆಂಗಳೂರು ನಗರ ಜನರನ್ನ ಕಾಡುತ್ತಿದೆ. ಲಕ್ಷಾಂತರ ಹಣ ಹೂಡಿಕೆ ಮಾಡಿದ ವಾಹನಗಳು ಹಾನಿಯಾಗೋ ಭೀತಿ, ಕೋಟಿ ಕೊಟ್ಟರೂ ಸಿಗದ ಜೀವವನ್ನು ಕೈಯಲ್ಲಿ ಹಿಡಿದು ಓಡಾಡಬೇಕಾದ ಪರಿಸ್ಥಿತಿ ನಿರ್ಮಾಣವಾಗಿದೆ.

ಭಾರೀ ಮಳೆ ಮತ್ತು ಬಿರು ಗಾಳಿಯಿಂದ ನಗರವೇ ಅಸ್ತವ್ಯಸ್ತಗೊಂಡಿತು. ಗಾರ್ಡನ್ ಸಿಟಿಯಲ್ಲಿ ರಸ್ತೆಗಳು ನದಿಗಳಂತಾಗಿ, ಅನೇಕ ಬಡಾವಣೆಗಳಿಗೆ ನೀರು ನುಗ್ಗಿ ಜನಜೀವನ ಹದಗೆಟ್ಟಿದೆ.

2 ಗಂಟೆಗಳ ಮಹಾಮಳೆ ನಗರ ತತ್ತರ ಸುಮಾರು 2 ಗಂಟೆಗಳ ಕಾಲ ಸುರಿದ ಧಾರಾಕಾರ ಮಳೆಗೆ ಐಟಿ ಸಿಟಿ ಸಂಪೂರ್ಣ ಕುಸಿದು ಬಿದ್ದಂತಾಯಿತು. ಅಂಡರ್‌ಪಾಸ್‌ಗಳು ಜಲಾವೃತಗೊಂಡು ವಾಹನ ಸಂಚಾರ ಸ್ಥಗಿತಗೊಂಡರೆ, ಹಲವೆಡೆ ಕಾರು, ಬೈಕ್‌ಗಳು ಹಾನಿಗೀಡಾದವು.

ಮಳೆಯೊಂದಿಗೆ ಬೀಸಿದ ಗಾಳಿಗೆ ವಾಹನಗಳು ಜಖಂ ಗೊಂಡಿದೆ ನಗರದ ಹಲವು ಪ್ರದೇಶದಲ್ಲಿ ದ್ವಿಚಕ್ರ, ಕಾರು ಸೇರಿದಂತೆ ಸುಮಾರು 20 ಕ್ಕೂ ಹೆಚ್ಚು ವಾಹನಗಳ ಮೇಲೆ ಮರ ಬಿದ್ದು ಜಖಂ ಗೊಂಡಿದೆ.ಇನ್ನೂ 170ಕ್ಕೂ ಹೆಚ್ಚು ಮರಗಳು ಧರೆಗೆ ಉರುಳಿವೆ.

ಜಯನಗರ, ಬಸವನಗುಡಿ.ಸೇರಿದಂತೆ ಅನೇಕ ಪ್ರದೇಶಗಳಲ್ಲಿ ದೊಡ್ಡ ಮರಗಳು ಲೈಟ್ ಕಂಬಗಳ ಮೇಲೆ ಬಿದ್ದು ವಿದ್ಯುತ್ ವ್ಯತ್ಯಯ ಉಂಟಾಗಿದೆ. ವಿಜಯನಗರ, ಆರ್.ಟಿ.ನಗರ, ಶೇಷಾದ್ರಿಪುರಂ, ಜಯನಗರ, ಚಾಮರಾಜಪೇಟೆ, ಜೆಪಿ ನಗರ, ಸದಾಶಿವನಗರ ಸೇರಿದಂತೆ 50ಕ್ಕೂ ಹೆಚ್ಚು ಪ್ರದೇಶಗಳಲ್ಲಿ ಮರಗಳು ಬಿದ್ದು ಸಂಚಾರಕ್ಕೆ ಅಡ್ಡಿಯಾಯಿತು. ಮರ ಬಿದ್ದ ಬಳಿಕ ಅರ್ಧದಷ್ಟೇ ತೆರವು ಮಾಡಿ ಹೋಗುತ್ತಿರುವ ಆರೋಪ ಕೇಳಿಬಂದಿದೆ ಇತ್ತ ಫುಟ್‌ಪಾತ್‌ಗಳಲ್ಲಿ ಮರಗಳನ್ನು ಬಿಟ್ಟುಹೋಗುವುದರಿಂದ ಪಾದಚಾರಿಗಳಿಗೆ ತೊಂದರೆ ಅಂತ ಸಾರ್ವಜನಿಕರು ನಗರಪಾಲಿಕೆಗಳ ವಿರುದ್ಧ ಬೇಸರ ವ್ಯಕ್ತಪಡಿಸಿದರು. ಮಳೆಯಿಂದ ಜಿಬಿಎ ಹಾಗೂ 5 ನಗರಪಾಲಿಕೆ ಕಂಟ್ರೋಲ್ ರೂಮ್ ಗಳಿಗೆ ಸುಮಾರು 800 ಕ್ಕೂ ಹೆಚ್ಚು ಕರೆಗಳು ಬಂದಿದವು. ದೂರಗಳ ಇತ್ಯರ್ಥಕ್ಕೆ ಸಿಬ್ಬಂದಿ ಮತ್ತು ಯಂತ್ರೋಪಕರಣಗಳ ಕೊರತೆ ಸ್ಪಷ್ಟವಾಗಿ ಗೋಚರಿಸಿದವು.

ವಿದ್ಯುತ್ ವ್ಯತ್ಯಯ, ನೀರು ಮನೆಗಳಿಗೆ ನುಗ್ಗಿದ ಸಮಸ್ಯೆ ಹಲವೆಡೆ ಮರಗಳು ವಿದ್ಯುತ್ ಕಂಬಗಳ ಮೇಲೆ ಬಿದ್ದ ಪರಿಣಾಮ ರಾತ್ರಿ ಪೂರ್ತಿ ಕರೆಂಟ್ ಕಡಿತ.ಮಳೆ ನೀರು ಮನೆಗಳಿಗೆ ನುಗ್ಗಿ ದಿನನಿತ್ಯ ಬಳಕೆ ವಸ್ತುಗಳು ಹಾಳಗಿದೆ ಎಂದು ದೂರುಗಳ ಸುರಿಮಳೆ ಬಂದಿದವು.

# ಎಸ್.ಐ.ಟಿ ವಿರುದ್ಧ ಸಲ್ಲಿಸಿದ್ದ ಅರ್ಜಿ ಹಿಂಪಡೆದ ಎಚ್.ಡಿ. ರೇವಣ್ಣ

ಬೆಂಗಳೂರು

ಪುತ್ರ ಪ್ರಜ್ವಲ್ ರೇವಣ್ಣರಿಂದ ಅತ್ಯಾಚಾರಕ್ಕೆ ಒಳಗಾಗಿದ್ದ ಸಂತ್ರಸ್ತೆಯನ್ನು ಅಪಹರಿಸಿದ ಸಂಬಂಧ ದಾಖಲಾಗಿದ್ದ ಪ್ರಕರಣ ಮತ್ತು ಆನಂತರ ವಿಶೇಷ ತನಿಖಾ ದಳ (ಎಸ್‌ಐಟಿ) ಆರೋಪ ಪಟ್ಟಿ ಸಲ್ಲಿಸಿರುವುದನ್ನು ವಜಾಗೊಳಿಸುವಂತೆ ಕೋರಿದ್ದ ಅರ್ಜಿಯನ್ನು ಜೆಡಿಎಸ್ ಶಾಸಕ ಎಚ್ ಡಿ ರೇವಣ್ಣ ಹಿಂಪಡೆದಿದ್ದಾರೆ.

ರೇವಣ್ಣ ಪರ ವಕೀಲ ಬಿ ಎಂ ಗಿರೀಶ್ ಕುಮಾರ್ ಸಲ್ಲಿಸಿದ್ದ ಮೆಮೊ ದಾಖಲಿಸಿಕೊಂಡ ನ್ಯಾಯಮೂರ್ತಿ ಎಸ್ ಸುನೀಲ್ ದತ್ ಯಾದವ್ ಅವರ ಏಕಸದಸ್ಯ ಪೀಠವು ಅರ್ಜಿ ವಿಲೇವಾರಿ ಮಾಡಿತು.

"ಅರ್ಜಿ ಹಿಂಪಡೆಯುವ ಸಂಬಂಧ ಸಲ್ಲಿಸಲಾದ ಮೆಮೊ ಪರಿಗಣಿಸಿ, ಅರ್ಜಿಯನ್ನು ಹಿಂಪಡೆಯಲು ಅನುಮತಿಸಲಾಗಿದೆ. ಕಾನೂನಿನ ಅನ್ವಯ ಆಕ್ಷೇಪಾರ್ಹವಾದ ಆದೇಶದ ಕುರಿತು ಕ್ರಮಕೈಗೊಳ್ಳುವ ಸ್ವಾತಂತ್ರ್ಯ ಅರ್ಜಿದಾರರಿಗಿದ್ದು, ಎಲ್ಲಾ ವಾದಗಳನ್ನು ಮುಕ್ತವಾಗಿರಿಸಲಾಗಿದೆ" ಎಂದು ಆದೇಶಿಸಿತು.

2025ರ ಜನವರಿ 17ರಂದು ನ್ಯಾಯಾಲಯವು ರೇವಣ್ಣ ವಿರುದ್ಧ ಆರೋಪ ನಿಗದಿ ಮಾಡದಂತೆ ವಿಚಾರಣಾಧೀನ ನ್ಯಾಯಾಲಯವನ್ನು ನಿರ್ಬಂಧಿಸಿತ್ತು.

ಆನಂತರ ರೇವಣ್ಣ ಅವರ ಪರ ವಕೀಲರು ಹಲವು ಬಾರಿ ವಿನಾ ಕಾರಣ ವಿಚಾರಣೆ ಮುಂದೂಡಿಕೆ ಕೋರಿದ್ದರು. ಈ ಹಿನ್ನೆಲೆಯಲ್ಲಿ 2026ರ ಫೆಬ್ರವರಿ 5ರಂದು ಹೈಕೋರ್ಟ್ ಮಧ್ಯಂತರ ಆದೇಶ ತೆರವುಗೊಳಿಸಿ, ರೇವಣ್ಣಗೆ ಆಘಾತ ನೀಡಿತ್ತು. ಈ ಹಿನ್ನೆಲೆಯಲ್ಲಿ ಇಂದು ರೇವಣ್ಣ ಅರ್ಜಿ ಹಿಂಪಡೆದಿದ್ದಾರೆ.

# ಭಾರತದ ಸರ್ವೋಚ್ಚ ನ್ಯಾಯಾಲಯದಿಂದ 'ಸಮಾಧಾನ ಸಮಾರೋಹ–2026'

ಬೆಂಗಳೂರು

ಭಾರತದ ಸರ್ವೋಚ್ಚ ನ್ಯಾಯಾಲಯದಲ್ಲಿ ಬಾಕಿ ಇರುವ ಪ್ರಕರಣಗಳನ್ನು ಸೌಹಾರ್ದಯುತವಾಗಿ ಇತ್ಯರ್ಥಪಡಿಸಿಕೊಳ್ಳಲು ಭಾರತದ ಸರ್ವೋಚ್ಚ ನ್ಯಾಯಾಲಯ 'ಸಮಾಧಾನ ಸಮಾರೋಹ–2026' ಎಂಬ ವಿಶೇಷ ಲೋಕ ಅದಾಲತ್‌ನ್ನು ಆಗಸ್ಟ್ 21, 22 ಮತ್ತು 23 ರಂದು ಮೂರು ದಿನಗಳ ಕಾಲ ಹಮ್ಮಿಕೊಂಡಿದೆ ಎಂದು ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿಗಳು ಹಾಗೂ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರದ ಕಾರ್ಯನಿರ್ವಾಹಕ ಅಧ್ಯಕ್ಷರಾದ ಶ್ರೀಮತಿ ಅನು ಶಿವರಾಮನ್ ತಿಳಿಸಿದರು.




ಇಂದು ಕರ್ನಾಟಕ ಉಚ್ಚ ನ್ಯಾಯಾಲಯದಲ್ಲಿ ಹಮ್ಮಿಕೊಂಡಿದ್ದ ಪತ್ರಿಕಾಗೋಷ್ಠಿಯನ್ನುದ್ದೇಶಿಸಿ ಮಾತನಾಡಿದ ಅವರು ಸುಪ್ರೀಂ ಕೋರ್ಟ್ ಪ್ರಥಮ ಬಾರಿಗೆ ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದ ಒಟ್ಟು 4,328 ವಿಚಾರಣೆಗೆ ಬಾಕಿ ಇರುವ ಪ್ರಕರಣಗಳನ್ನು ಸಂಧಾನಕ್ಕಾಗಿ ಗುರುತಿಸಿ ಈ ವಿಶೇಷ ಲೋಕ ಅದಾಲತ್ ಆಯೋಜಿಸಿದ್ದು, ಆಸಕ್ತಿವುಳ್ಳವರು ಸುಪ್ರೀಂ ಕೋರ್ಟ್‌ನಲ್ಲಿ ಬಾಕಿ ಇರುವ ತಮ್ಮ ವ್ಯಾಜ್ಯಗಳನ್ನು ಪರಿಹರಿಸಿಕೊಳ್ಳಲು ನೋಂದಣಿಗೆ ಸಹ ಅವಕಾಶ ಕಲ್ಪಿಸಲಾಗಿದೆ.

ತಾಲ್ಲೂಕು, ಜಿಲ್ಲಾ ಹಾಗೂ ರಾಜ್ಯಮಟ್ಟದಲ್ಲಿ ಕರ್ನಾಟಕ ರಾಜ್ಯ ಕಾನೂನು ಸೇವೆಗಳ ಪ್ರಾಧಿಕಾರ ಸಂಪರ್ಕಿಸುವ ಮೂಲಕ ಸಾರ್ವಜನಿಕರು ತಮ್ಮ ವ್ಯಾಜ್ಯಗಳನ್ನು ಪರಿಹರಿಸಿಕೊಳ್ಳಲು ಇಂದಿನಿಂದಲೇ ನೋಂದಣಿ ಮಾಡಿಕೊಳ್ಳಬಹುದಾಗಿದೆ. ಆಯ್ಕೆಯಾದ ವ್ಯಾಜ್ಯಗಳನ್ನು ನೋಂದಾಯಿತ ಕಾನೂನು ಸಮನ್ವಯಕರ ಮಧ್ಯಸ್ಥಿಕೆಯಲ್ಲಿ ತಾವಿರುವ ತಾಲ್ಲೂಕು ಮತ್ತು ಜಿಲ್ಲಾ ಮಟ್ಟದಲ್ಲಿಯೇ ಸಮಸ್ಯೆಯನ್ನು ಬಗೆಹರಿಸಿಕೊಳ್ಳಬಹುದಾಗಿದೆ.

ಪ್ರಸ್ತುತ ಸುಪ್ರೀಂ ಕೋರ್ಟ್ ಪ್ರಮುಖವಾಗಿ ಬ್ಯಾಂಕಿಂಗ್ ಮತ್ತು ವಿಮಾ ಸಂಬಂಧಿತ ಪ್ರಕರಣಗಳು, ನಾಗರೀಕ ಕಾನೂನು, ಮೋಟಾರು ಅಪಘಾತ ಪರಿಹಾರ ಪ್ರಕರಣಗಳು, ಗ್ರಾಹಕ ವ್ಯಾಜ್ಯಗಳು ಮತ್ತು ರೇರಾ, ಕ್ರಿಮಿನಲ್ ಪ್ರಕರಣಗಳು, ಕೌಟುಂಬಿಕ ವಿವಾದಗಳು, ಕಾರ್ಮಿಕ ಮತ್ತು ಕೈಗಾರಿಕಾ ಕಾನೂನುಗಳು ವಿವಾದಗಳು, ಭೂಸ್ವಾಧೀನ ಮತ್ತು ಪುನರ್ವಸತಿ, ಆಸ್ತಿ ತೆರಿಗೆ, ಬಾಡಿಗೆ ನಿಯಂತ್ರಣ ಮತ್ತು ಸಾರ್ವಜನಿಕ ಆವರಣ (ತೆರವುಗೊಳಿಸುವಿಕೆ) ಕಾಯ್ದೆ, ವರ್ಗಾವಣೆ ಅರ್ಜಿಗಳು ಮತ್ತು ಸೇವಾ ಕಾನೂನುಗಳಿಗೆ ಸಂಬಂಧಿಸಿದ ಪ್ರಕರಣಗಳನ್ನು ಇತ್ಯರ್ಥಕ್ಕೆ ಗುರುತಿಸಲಾಗಿದೆ.

ಕರ್ನಾಟಕ ರಾಜ್ಯಕ್ಕೆ ಸಂಬಂಧಿಸಿದ ಒಟ್ಟು 4,328 ವಿಚಾರಣೆಗೆ ಬಾಕಿ ಇರುವ ಪ್ರಕರಣಗಳನ್ನು ಸಂಧಾನಕ್ಕಾಗಿ ಗುರುತಿಸಲಾಗಿದ್ದು ಅದರಲ್ಲಿ ಬೆಂಗಳೂರು ನಗರ ಜಿಲ್ಲೆಯಲ್ಲಿ ಅತಿ ಹೆಚ್ಚು ಅಂದರೆ 1,245, ಬೆಳಗಾವಿ 517, ಕಲಬುರಗಿ 269, ವಿಜಯಪುರ 213, ಧಾರವಾಡ 188, ಬಾಗಲಕೋಟೆ 159, ಗದಗದಲ್ಲಿ 125, ಬಳ್ಳಾರಿ 109, ತುಮಕೂರು 101, ಕೊಪ್ಪಳ 98, ಹಾವೇರಿ 81, ಉಡುಪಿ 78, ಬೀದರ್ 77, ದಕ್ಷಿಣ ಕನ್ನಡ 75, ಶಿವಮೊಗ್ಗ 69, ರಾಯಚೂರು 69, ಚಿತ್ರದುರ್ಗ 58, ಮೈಸೂರು 56, ದಾವಣಗೆರೆ 47, ಉತ್ತರ ಕನ್ನಡ 35 ಮಂಡ್ಯ 30, ಚಿಕ್ಕಮಗಳೂರು 27, ಹಾಸನ 24, ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ 18, ರಾಮನಗರ 17, ಚಿಕ್ಕಬಳ್ಳಾಪುರ 17, ಕೊಡಗು 15, ಯಾದಗಿರಿ 14 ಮತ್ತು ಚಾಮರಾಜನಗರ ಜಿಲ್ಲೆಯಲ್ಲಿ 4 ಪ್ರಕರಣಗಳು ಒಳಗೊಂಡಿವೆ.

ಕರ್ನಾಟಕದ ವ್ಯಾಪ್ತಿಯ ಹೊರಗಿನಿಂದ 36 ಪ್ರಕರಣಗಳು ವರದಿಯಾಗಿದ್ದು, ಸರಿಯಾಗಿ ಗುರುತಿಸಲಾಗದ ಪ್ರಕರಣಗಳ ಸಂಖ್ಯೆ 347 ಆಗಿದೆ.

ಸುಪ್ರೀಂ ಕೋರ್ಟ್ ಈಗಾಗಲೇ ಗುರುತಿಸಲಾದ ಪ್ರಕರಣಗಳಲ್ಲಿ 937ಕ್ಕೂ ಹೆಚ್ಚು ಪ್ರಕರಣಗಳು ಸರ್ಕಾರವು ಪಕ್ಷವಾಗಿರುವ ಪ್ರಕರಣಗಳಾಗಿವೆ. ಈ ನಿಟ್ಟಿನಲ್ಲಿ ರಾಜ್ಯ ಸರ್ಕಾರವು ಸಕಾರಾತ್ಮಕವಾಗಿ ಸ್ಪಂದಿಸಲು ಮತ್ತು ಪ್ರಕರಣಗಳ ಇತ್ಯರ್ಥಕ್ಕೆ ಮುಂದಾಗುವಂತೆ ಮಾನ್ಯ ಅಡ್ವಕೇಟ್ ಜನರಲ್ ಅವರೊಂದಿಗೆ ಈಗಾಗಲೇ ಸಮಾಲೋಚನೆ ನಡೆಸಲಾಗಿದೆ ಎಂದರು.

ಕರ್ನಾಟಕ ಉಚ್ಚ ನ್ಯಾಯಾಲಯದ ನ್ಯಾಯಮೂರ್ತಿ ಹಾಗೂ ಕಾನೂನು ಸೇವೆಗಳ ಸಮಿತಿ ಅಧ್ಯಕ್ಷರಾದ ಆರ್ ದೇವದಾಸ್ ಅವರು ಮಾತನಾಡಿ ಈ ವಿಶೇಷ ಲೋಕ ಅದಾಲತ್ ಜನಸಾಮಾನ್ಯರಿಗೆ ತಮ್ಮ ಕಾನೂನು ಹೋರಾಟವನ್ನು ತ್ವರಿತವಾಗಿ ಮತ್ತು ಕಡಿಮೆ ವೆಚ್ಚದಲ್ಲಿ ಮುಗಿಸಿಕೊಳ್ಳಲು ಸಿಕ್ಕಿರುವ ಮಹತ್ವದ ಅವಕಾಶವಾಗಿದೆ. ಇದರಿಂದ ಸಮಯ ಮತ್ತು ಹಣ ಉಳಿತಾಯವಾಗುವುದಲ್ಲದೆ, ಉಭಯ ಪಕ್ಷಗಳ ನಡುವೆ ಸೌಹಾರ್ದ ಸಂಬಂಧ ಉಳಿಯಲು ಸಹಕಾರಿಯಾಗಲಿದೆ. ಸಾರ್ವಜನಿಕರು ಈ ಅದಾಲತ್ ಪ್ರಯೋಜನ ಪಡೆಯುವಂತೆ ಮನವಿ ಮಾಡಿದರು.

Printed by gandasi sadananda swamy, published by gandasi sadanandaswamy, owned by gandasi sadananda swamy. Printed at LAVANYA MUDRANA No. 79, TR mill, compound, 5th main 9th corss, Chamarajpet Bangalore-560018, published at No.531, prakruthi nilaya, kalikanagar, Andrahalli, Vishwaneedam Post, Bangalore-560091. Editor: Gandasi sadanandaswamy